ಸತ್ಯ ಮತ್ತು ಧೈರ್ಯದ ಧ್ವನಿ

ತುಂಗ ಬಿಂಬ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: Vol: 04 | ಸಂಚಿಕೆ: Issue: 143 | ರಾಯಚೂರು Raichur 14-11-2026 | ಶನಿವಾರ Saturday | ಪುಟ : Page: 04 | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ | Editor: Gururaja K 98863 85685



ಮೇಕೆದಾಟು ಯೋಜನೆಗೆ ಅನುಮತಿ ನೀಡಿ, ಕಸ್ತೂರಿರಂಗನ್ ವರದಿ ಶಿಫಾರಸು ಹಿಂಪಡೆಯಿರಿ: ಪ್ರಧಾನಿ ಮೋದಿಗೆ ಡಿ.ಕೆ. ಶಿವಕುಮಾರ್ ಮನವಿ

ಮೈಸೂರು: ಕರ್ನಾಟಕದ ಮಹತ್ವಾಕಾಂಕ್ಷೆಯ ಮೇಕೆದಾಟು ಸಮತೋಲನ ಜಲಾಶಯ ಯೋಜನೆಗೆ ಅಗತ್ಯವಿರುವ ಅಂತಿಮ ಅನುಮತಿಗಳನ್ನು ನೀಡಬೇಕು, ಪಶ್ಚಿಮ ಘಟ್ಟಗಳ ಸಂರಕ್ಷಣೆಗೆ ಸಂಬಂಧಿಸಿದ ಕಸ್ತೂರಿರಂಗನ್ ವರದಿಯ ಶಿಫಾರಸುಗಳನ್ನು ಹಿಂಪಡೆಯಬೇಕು ಹಾಗೂ ರಾಜ್ಯದ 1,000 ಸರ್ಕಾರಿ ಶಾಲೆಗಳನ್ನು ಕರ್ನಾಟಕ ಪಬ್ಲಿಕ್ ಶಾಲೆಗಳಾಗಿ ಮೇಲ್ದರ್ಜೆಗೇರಿಸಲು ಕೇಂದ್ರ ಸರ್ಕಾರ ಸಹಕಾರ ನೀಡಬೇಕು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಮನವಿ ಮಾಡಿದರು.

ಶುಕ್ರವಾರ ಮೈಸೂರಿನಲ್ಲಿ ಆಯೋಜಿಸಲಾಗಿದ್ದ ತಾರಾಲಯದ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು, ಕರ್ನಾಟಕದ ಅಭಿವೃದ್ಧಿಗೆ ಸಂಬಂಧಿಸಿದ ಪ್ರಮುಖ ಬೇಡಿಕೆಗಳನ್ನು ಪ್ರಧಾನಿಯವರ ಮುಂದಿಟ್ಟರು. ರಾಜ್ಯದ ನೀರಾವರಿ, ಪರಿಸರ ಸಂರಕ್ಷಣೆ, ಶಿಕ್ಷಣ ಹಾಗೂ ವೈಜ್ಞಾನಿಕ ಮೂಲಸೌಕರ್ಯಗಳ ಅಭಿವೃದ್ಧಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ನಡುವಿನ ಸಮನ್ವಯ ಅತ್ಯಗತ್ಯ ಎಂದು ಪ್ರತಿಪಾದಿಸಿದರು.

ಕಾವೇರಿ ನದಿಗೆ ಅಡ್ಡಲಾಗಿ ನಿರ್ಮಿಸಲು ಉದ್ದೇಶಿಸಿರುವ ಮೇಕೆದಾಟು ಯೋಜನೆ ಕುರಿತು ಮಾತನಾಡಿದ ಅವರು, ಈ ಯೋಜನೆಯ ಕಾನೂನು ವಿಚಾರಗಳಿಗೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ನೀಡಿರುವ ತೀರ್ಪನ್ನು ಉಲ್ಲೇಖಿಸಿದರು. ಯೋಜನೆಯ ಅನುಷ್ಠಾನಕ್ಕೆ ಅಗತ್ಯವಿರುವ ಶಾಸನಬದ್ಧ ಅನುಮತಿಗಳನ್ನು ಕೇಂದ್ರ ಸರ್ಕಾರ ವಿಳಂಬವಿಲ್ಲದೆ ನೀಡಬೇಕು ಎಂದು ಕೋರಿದರು.

ಮೇಕೆದಾಟು ಯೋಜನೆಯು ಮುಖ್ಯವಾಗಿ ಕುಡಿಯುವ ನೀರಿನ ಅಗತ್ಯ ಪೂರೈಸಲು ಉದ್ದೇಶಿಸಿರುವ ಸಮತೋಲನ ಜಲಾಶಯವಾಗಿದೆ. ಇದರಿಂದ ಕರ್ನಾಟಕ ಮಾತ್ರವಲ್ಲದೆ ತಮಿಳುನಾಡಿಗೂ ಅನುಕೂಲವಾಗಲಿದೆ. ಕಾವೇರಿ ನದಿಯ ನೀರನ್ನು ಅವಲಂಬಿಸಿರುವ ಕರ್ನಾಟಕ, ತಮಿಳುನಾಡು, ಕೇರಳ ಹಾಗೂ ಪುದುಚೇರಿ ಸೇರಿದಂತೆ ನದಿ ಪಾತ್ರದ ಪ್ರದೇಶಗಳ ಹಿತಾಸಕ್ತಿಯನ್ನು ಗಮನದಲ್ಲಿಟ್ಟುಕೊಂಡು ಯೋಜನೆಯನ್ನು ಮುಂದುವರಿಸಲು ಕೇಂದ್ರ ಸರ್ಕಾರ ನೆರವಾಗಬೇಕು ಎಂದು ಮನವಿ ಮಾಡಿದರು.

ರಾಜ್ಯದ ಅಭಿವೃದ್ಧಿಗೆ ಸಂಬಂಧಿಸಿದ ವಿಷಯಗಳಲ್ಲಿ ರಾಜಕೀಯ ಭಿನ್ನಾಭಿಪ್ರಾಯಗಳನ್ನು ಬದಿಗಿಟ್ಟು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಒಟ್ಟಾಗಿ ಕೆಲಸ ಮಾಡಬೇಕಿದೆ. ಮೇಕೆದಾಟು ಯೋಜನೆಗೆ ಎದುರಾಗಿರುವ ಅಡೆತಡೆಗಳನ್ನು ನಿವಾರಿಸಲು ಕೇಂದ್ರ ಸರ್ಕಾರ ಕಾನೂನುಬದ್ಧವಾಗಿ ಸಹಕಾರ ನೀಡಬೇಕು ಎಂದು ಹೇಳಿದರು.

ಪಶ್ಚಿಮ ಘಟ್ಟಗಳ ಪರಿಸರ ಸೂಕ್ಷ್ಮ ಪ್ರದೇಶಗಳಿಗೆ ಸಂಬಂಧಿಸಿದ ಕಸ್ತೂರಿರಂಗನ್ ವರದಿಯ ಶಿಫಾರಸುಗಳ ಕುರಿತು ಪ್ರಸ್ತಾಪಿಸಿದ ಅವರು, ವರದಿಯ ಅನುಷ್ಠಾನದಿಂದ ಸ್ಥಳೀಯ ಜನಜೀವನದ ಮೇಲೆ ಉಂಟಾಗಬಹುದಾದ ಪರಿಣಾಮಗಳ ಕುರಿತು ರಾಜ್ಯದಲ್ಲಿ ವ್ಯಾಪಕ ಸಮಾಲೋಚನೆ ನಡೆಸಲಾಗಿದೆ ಎಂದು ತಿಳಿಸಿದರು.

ಪಶ್ಚಿಮ ಘಟ್ಟ ಪ್ರದೇಶದ ಜನರ ಅಭಿಪ್ರಾಯಗಳನ್ನು ಪರಿಗಣಿಸಿದ ಬಳಿಕ ಕಸ್ತೂರಿರಂಗನ್ ವರದಿಯ ಶಿಫಾರಸುಗಳನ್ನು ವಿರೋಧಿಸಿ ಕರ್ನಾಟಕ ವಿಧಾನಸಭೆಯಲ್ಲಿ ಸರ್ವಾನುಮತದ ನಿರ್ಣಯ ಅಂಗೀಕರಿಸಲಾಗಿದೆ. ಈ ಹಿನ್ನೆಲೆಯಲ್ಲಿ ರಾಜ್ಯದ ನಿಲುವನ್ನು ಕೇಂದ್ರ ಸರ್ಕಾರ ಪರಿಗಣಿಸಿ ವರದಿಯ ಶಿಫಾರಸುಗಳನ್ನು ಹಿಂಪಡೆಯಲು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ರಾಜ್ಯದ ಸರ್ಕಾರಿ ಶಾಲೆಗಳ ಅಭಿವೃದ್ಧಿ ವಿಚಾರದಲ್ಲಿಯೂ ಕೇಂದ್ರದ ಸಹಕಾರ ಅಗತ್ಯವಿದೆ.



ಗ್ರಾಮೀಣ ಪ್ರದೇಶದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ದೊರೆಯುವಂತೆ ಮಾಡಲು 1,000 ಸರ್ಕಾರಿ ಶಾಲೆಗಳನ್ನು ಕರ್ನಾಟಕ ಪಬ್ಲಿಕ್ ಶಾಲೆಗಳಾಗಿ ಮೇಲ್ದರ್ಜೆಗೇರಿಸುವ ಗುರಿ ಹೊಂದಲಾಗಿದೆ. ಈ ಉದ್ದೇಶಕ್ಕಾಗಿ 2ನೇ ಪುಟಕ್ಕೆ



ನ.14ರಂದು ಪ್ರಜಾ ಸೇವಾ ಆಂದೋಲನ: ಶಾಸಕ ಬಸನಗೌಡ ದದ್ದಲ್



ರಾಯಚೂರು: ಸರ್ಕಾರದ ವಿವಿಧ ಇಲಾಖೆಗಳ ಸೇವೆಗಳನ್ನು ಜನರ ಮನೆಬಾಗಿಲಿಗೆ ತಲುಪಿಸುವ ಹಾಗೂ ಸಾರ್ವಜನಿಕರ ಕುಂದುಕೊರತೆಗಳಿಗೆ ಸ್ಪಂದಿಸುವ ಉದ್ದೇಶದಿಂದ ನವೆಂಬರ್ 14ರಂದು ದೇವಸುಗೂರು ಹೋಬಳಿ ವ್ಯಾಪ್ತಿಯಲ್ಲಿ ಪ್ರಜಾ ಸೇವಾ ಆಂದೋಲನ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ರಾಯಚೂರು ಗ್ರಾಮೀಣ ವಿಧಾನಸಭಾ ಕ್ಷೇತ್ರದ ಶಾಸಕ ಬಸನಗೌಡ ದದ್ದಲ್ ತಿಳಿಸಿದ್ದಾರೆ.

ರಾಯಚೂರು ತಾಲೂಕು ಆಡಳಿತ ಹಾಗೂ ತಾಲೂಕು ಪಂಚಾಯಿತಿ ಸಹಯೋಗದಲ್ಲಿ ಶಾಸಕರ ಅಧ್ಯಕ್ಷತೆಯಲ್ಲಿ ನಡೆಯಲಿರುವ ಈ ಕಾರ್ಯಕ್ರಮವನ್ನು ದೇವಸುಗೂರಿನ ಶ್ರೀ ಸುಗ್ಗುರೇಶ್ವರ ಶಾಲಾ ಮೈದಾನದಲ್ಲಿ ಹಮ್ಮಿಕೊಳ್ಳಲಾಗಿದೆ.

ಬಾಗಿಲಿಗೆ ಬಂತು ಸರ್ಕಾರ, ಸೇವೆಗೆ ಇರಲಿ ಸಹಕಾರ ಎಂಬ ಘೋಷವಾಕ್ಯದಡಿ ನಡೆಯುವ ಆಂದೋಲನದ ಮೂಲಕ ಸರ್ಕಾರದ ವಿವಿಧ ಇಲಾಖೆಗಳ ಯೋಜನೆಗಳು, ಸೌಲಭ್ಯಗಳು ಹಾಗೂ ಸಾರ್ವಜನಿಕ ಸೇವೆಗಳ ಕುರಿತು ಜನರಿಗೆ ಮಾಹಿತಿ ಒದಗಿಸಲಾಗುವುದು. ಗ್ರಾಮೀಣ ಪ್ರದೇಶದ ಜನರು ಸರ್ಕಾರಿ ಸೇವೆಗಳಿಗಾಗಿ ಕಚೇರಿಗಳಿಗೆ ಪದೇಪದೆ ಅಲೆದಾಡುವುದನ್ನು ತಪ್ಪಿಸಿ, ಆಡಳಿತ ವ್ಯವಸ್ಥೆಯನ್ನು ಜನರಿಗೆ ಮತ್ತಷ್ಟು ಹತ್ತಿರವಾಗಿಸುವುದು ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿದೆ ಎಂದು ತಿಳಿಸಿದರು.

ದೇವಸುಗೂರು ಹೋಬಳಿ ವ್ಯಾಪ್ತಿಯ ಸಾರ್ವಜನಿಕರು ತಮ್ಮ ಸಮಸ್ಯೆಗಳು, 2ನೇ ಪುಟಕ್ಕೆ

ಕಾಲುವೆಗಳಿಗೆ ನೀರು ಹರಿಸಲು ಆಗ್ರಹಿಸಿ ನ.15ರಿಂದ ರೈತರ ಪಾದಯಾತ್ರೆ: ಕೆ. ಮಸ್ತಾನ ನಾಯಕ್ ಪೂಜಾರಿ

ರಾಯಚೂರು: ನಾರಾಯಣಪುರ ಜಲಾಶಯದಿಂದ ಎಡದಂಡೆ ಮತ್ತು ಬಲದಂಡೆ ಕಾಲುವೆಗಳಿಗೆ ಸಮರ್ಪಕವಾಗಿ ನೀರು ಹರಿಸಿ ಬೆಳೆಗಳನ್ನು ರಕ್ಷಿಸುವಂತೆ ಸರ್ಕಾರವನ್ನು ಒತ್ತಾಯಿಸಿ, ನವೆಂಬರ್ 15ರಿಂದ 20ರವರೆಗೆ ಗಬ್ಬೂರಿನಿಂದ ನಾರಾಯಣಪುರ ಜಲಾಶಯದವರೆಗೆ ಆರು ದಿನಗಳ ಬೃಹತ್ ರೈತ ಪಾದಯಾತ್ರೆ ಆಯೋಜಿಸಲಾಗಿದೆ ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಕೃಷಿ ಅಭಿವೃದ್ಧಿ ಸೇನೆಯ ಸಂಸ್ಥಾಪಕ ರಾಜ್ಯಾಧ್ಯಕ್ಷ ಕೆ. ಮಸ್ತಾನ ನಾಯಕ್ ಪೂಜಾರಿ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನೀರು ಕೊಡಿ, ಇಲ್ಲ ವಿಷ ಕೊಡಿ ಎಂಬ ಘೋಷವಾಕ್ಯದಡಿ ರೈತರು ಒಗ್ಗಟ್ಟಿನಿಂದ ಹೋರಾಟ ನಡೆಸಲಿದ್ದಾರೆ. ಕೃಷಿ ಚಟುವಟಿಕೆಗಳಿಗೆ ಅಗತ್ಯವಿರುವ ನೀರನ್ನು ಒದಗಿಸುವಲ್ಲಿ ಸಂಬಂಧಪಟ್ಟ ಅಧಿಕಾರಿಗಳು ವಿಫಲರಾಗಿದ್ದು, ಇದರಿಂದ ರೈತರು ಬೆಳೆ



ನಷ್ಟದ ಆತಂಕ ಎದುರಿಸುವಂತಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ದೇವದುರ್ಗ ತಾಲೂಕು ಸೇರಿದಂತೆ ನಾರಾಯಣಪುರ ಕಾಲುವೆ ನೀರಾವರಿ ವ್ಯಾಪ್ತಿಯ ವಿವಿಧ ಗ್ರಾಮಗಳಲ್ಲಿ ರೈತರು ಭತ್ತ ಹಾಗೂ ಮೆಣಸಿನಕಾಯಿ ಬೆಳೆಗಳನ್ನು ಬೆಳೆದಿದ್ದಾರೆ. ಭತ್ತದ ಬೆಳೆ ಕಟಾವಿನ ಹಂತ ತಲುಪಿದ್ದರೆ, ಮೆಣಸಿನಕಾಯಿ ಬೆಳೆಗೆ ಪ್ರಸ್ತುತ ನೀರಿನ ಅಗತ್ಯವಿದೆ. ಆದರೆ ಕಾಲುವೆಗಳಿಗೆ ಸಮರ್ಪಕವಾಗಿ ನೀರು ಹರಿಯದ ಪರಿಣಾಮ ಮೆಣಸಿನಕಾಯಿ ಬೆಳೆ ಒಣಗಲು ಆರಂಭಿಸಿದ್ದು, ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ವಿವರಿಸಿದರು.

ನಾರಾಯಣಪುರ ಜಲಾಶಯದಲ್ಲಿ ನೀರಿನ ಸಂಗ್ರಹವಿದ್ದರೂ ರೈತರ ಜಮೀನುಗಳಿಗೆ ನೀರು ತಲುಪಿಸುವಲ್ಲಿ ನಿರ್ಲಕ್ಷ್ಯ ವಹಿಸಲಾಗುತ್ತಿದೆ ಎಂದು ಆರೋಪಿಸಿದ ಅವರು, ಬೆಳೆ ಉಳಿಸಿಕೊಳ್ಳಲು ರೈತರು ಪರದಾಡುತ್ತಿರುವ ಸಂದರ್ಭದಲ್ಲಿ ನೀರಾವರಿ ಇಲಾಖೆ ಹಾಗೂ ಸರ್ಕಾರ ತಕ್ಷಣ ಸ್ಪಂದಿಸಬೇಕು. ರೈತರ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ರೈತರ ಹಿತದೃಷ್ಟಿಯಿಂದ 2ನೇ ಪುಟಕ್ಕೆ

ಆಶಾ ಕಾರ್ಯಕರ್ತೆಯರಿಗೆ ₹15 ಸಾವಿರ ಗೌರವಧನಕ್ಕೆ ಆಗ್ರಹ: ನ.17ರಿಂದ ಬೆಂಗಳೂರಿನಲ್ಲಿ ಅನಿರ್ದಿಷ್ಟ ಹೋರಾಟ

ರಾಯಚೂರು: ಆಶಾ ಕಾರ್ಯಕರ್ತೆಯರಿಗೆ ಮಾಸಿಕ ₹15 ಸಾವಿರ ನಿಶ್ಚಿತ ಗೌರವಧನ ನೀಡುವುದು ಸೇರಿದಂತೆ ವಿವಿಧ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ನವೆಂಬರ್ 17ರಿಂದ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ರಾಜ್ಯಮಟ್ಟದ ಅನಿರ್ದಿಷ್ಟ ಅಹೋರಾತ್ರಿ ಹೋರಾಟ ಹಮ್ಮಿಕೊಳ್ಳಲಾಗಿದೆ ಎಂದು ಎಐಯುಟಿಯುಸಿ ರಾಜ್ಯ ಉಪಾಧ್ಯಕ್ಷ ಹಾಗೂ ಆಶಾ ಕಾರ್ಯಕರ್ತೆಯರ ಸಂಘಟನೆಯ ಜಿಲ್ಲಾ ಗೌರವಾಧ್ಯಕ್ಷ ವೀರೇಶ್ ಎನ್.ಎಸ್. ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಕಳೆದ 17 18 ವರ್ಷಗಳಿಂದ ಗ್ರಾಮೀಣ ಹಾಗೂ ನಗರ ಪ್ರದೇಶಗಳ ಬಡಜನರ ಮನೆಬಾಗಿಲಿಗೆ ಆರೋಗ್ಯ ಸೇವೆ ತಲುಪಿಸುವಲ್ಲಿ ಆಶಾ ಕಾರ್ಯಕರ್ತೆಯರು ಪ್ರಮುಖ ಪಾತ್ರ ವಹಿಸುತ್ತಿದ್ದಾರೆ. ಕೊರೊನಾ ಸಂದರ್ಭದಲ್ಲಿ ಮುಂಚೂಣಿ ಕಾರ್ಯಕರ್ತೆಯರಾಗಿ ಜೀವದ



ಹಂಗು ತೊರೆದು ಸೇವೆ ಸಲ್ಲಿಸಿದ್ದಾರೆ. ಆದರೂ ಅವರ ದುಡಿಮೆಗೆ ತಕ್ಕ ಗೌರವಧನ ಮತ್ತು ಆರ್ಥಿಕ ಭದ್ರತೆ ದೊರೆಯುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಆಶಾ ಕಾರ್ಯಕರ್ತೆಯರಿಗೆ ಕೆಲಸದ ಸಮಯ, ರಜೆ ಹಾಗೂ ಹಬ್ಬಗಳೆಂಬ ಮಿತಿಯಿಲ್ಲ. ಆದರೆ ಗೌರವಧನ ಮಾತ್ರ ಅತ್ಯಂತ ಕಡಿಮೆಯಾಗಿದೆ. ಪ್ರೋತ್ಸಾಹಧನ ಮೂರು ನಾಲ್ಕು ತಿಂಗಳಿಗೊಮ್ಮೆ ಪಾವತಿಯಾಗುತ್ತಿದ್ದು, ಹಲವು ಕೆಲಸಗಳ ಹಣ ಬಾಕಿ ಉಳಿದಿದೆ. ಇದರಿಂದ ಕುಟುಂಬ ನಿರ್ವಹಣೆ ಹಾಗೂ ಮಕ್ಕಳ ಶಿಕ್ಷಣದ ವೆಚ್ಚ ಭರಿಸುವುದು ಕಷ್ಟಕರವಾಗಿದೆ ಎಂದರು.

ಕಳೆದ ಒಂಬತ್ತು ವರ್ಷಗಳಲ್ಲಿ ರಾಜ್ಯ ಸರ್ಕಾರ ಆಶಾ ಕಾರ್ಯಕರ್ತೆಯರ ಗೌರವಧನವನ್ನು ಕೇವಲ ₹1,500 ಹೆಚ್ಚಿಸಿದೆ. ಕೇರಳ, ಮಹಾರಾಷ್ಟ್ರ ಸೇರಿದಂತೆ ಹಲವು ರಾಜ್ಯಗಳಲ್ಲಿ ಹೆಚ್ಚಿನ ಗೌರವಧನ ನೀಡಲಾಗುತ್ತಿದೆ. ಕರ್ನಾಟಕದಲ್ಲಿಯೂ ಕನಿಷ್ಠ ₹15 ಸಾವಿರ ನಿಶ್ಚಿತ ಗೌರವಧನ ನೀಡಬೇಕು. ಈ ಹಿಂದೆ ಘೋಷಿಸಿದ್ದ ₹10 ಸಾವಿರ ಗೌರವಧನದ ಭರವಸೆಯೂ 2ನೇ ಪುಟಕ್ಕೆ

68ರ ಹರೆಯದಲ್ಲೂ ಸಾಹಸಮಯ ಪಯಣಕ್ಕೆ ಸಜ್ಜಾದ ತಾಯಣ್ಣ ಯರಗೇರಾ ದಂಪತಿ

ರಾಯಚೂರು: ಜೀವನದ ಸಂಧ್ಯಾಕಾಲದಲ್ಲಿಯೂ ಹೊಸ ಅನುಭವಗಳನ್ನು ಅರಸುವ ಉತ್ಸಾಹದೊಂದಿಗೆ ರಾಯಚೂರಿನ 68 ವರ್ಷದ ತಾಯಣ್ಣ ಯರಗೇರಾ ಅವರು ತಮ್ಮ ಪತ್ನಿಯೊಂದಿಗೆ ಕ್ಯಾಂಪರ್ ವ್ಯಾನ್‌ನಲ್ಲಿ ಒಂದು ವರ್ಷ ಕಾಲ ದೇಶದಾದ್ಯಂತ ಸಂಚರಿಸಲು ಸಿದ್ಧತೆ ಮಾಡಿಕೊಂಡಿದ್ದಾರೆ. ನವೆಂಬರ್ 15ರಂದು ಅವರ ಮಹತ್ವಾಕಾಂಕ್ಷೆಯ ಭಾರತ ದರ್ಶನ ಯಾತ್ರೆಗೆ ಚಾಲನೆ ದೊರೆಯಲಿದೆ ಎಂದು ಸೂರ್ಯೋದಯ ವಾಕಿಂಗ್ ಕ್ಲಬ್‌ನ ಬಿ. ಬಸವರಾಜ್ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಯಸ್ಸಿನ ಹಂಗಿಲ್ಲದೆ ಹೊಸ ಸಾಹಸಗಳಿಗೆ ಮುಂದಾಗುವ ಮನೋಭಾವ ಹೊಂದಿರುವ ತಾಯಣ್ಣ ಯರಗೇರಾ ದಂಪತಿ, ದೇಶದ ವಿವಿಧ ರಾಜ್ಯಗಳು ಹಾಗೂ ಜಿಲ್ಲೆಗಳಿಗೆ ಭೇಟಿ ನೀಡಿ ಭಾರತದ ಸಾಂಸ್ಕೃತಿಕ ವೈವಿಧ್ಯತೆ, ಜನಜೀವನ



ಮತ್ತು ಸಾಮಾಜಿಕ ಪರಿಸ್ಥಿತಿಗಳನ್ನು ನೇರವಾಗಿ ತಿಳಿದುಕೊಳ್ಳುವ ಉದ್ದೇಶದಿಂದ ಈ ವಿನೂತನ ಪ್ರವಾಸ ಕೈಗೊಂಡಿದ್ದಾರೆ ಎಂದರು.

ಕೇವಲ ಪ್ರವಾಸಿ ತಾಣಗಳ ವೀಕ್ಷಣೆಗೆ ಸೀಮಿತವಾಗದೆ, ವಿವಿಧ ಪ್ರದೇಶಗಳ ಜನರೊಂದಿಗೆ ಬೆರೆತು ಅವರ ಜೀವನ ಪದ್ಧತಿ, ಆಚಾರ-ವಿಚಾರ, ಆಹಾರ ಸಂಸ್ಕೃತಿ, ಸ್ಥಳೀಯ ಉದ್ಯೋಗಗಳು, ಆರೋಗ್ಯ ಸೌಲಭ್ಯಗಳು ಹಾಗೂ ಪರಿಸರದ ವೈಶಿಷ್ಟ್ಯಗಳನ್ನು ಅಧ್ಯಯನ ಮಾಡುವುದು ಈ ಯಾತ್ರೆಯ ಮುಖ್ಯ ಆಶಯವಾಗಿದೆ. ದೇಶದ ನಾನಾ ಭಾಗಗಳಲ್ಲಿನ ಜನರ ಬದುಕನ್ನು ಹತ್ತಿರದಿಂದ ಕಂಡು, ಅಲ್ಲಿನ ಸಾಮಾಜಿಕ ಮತ್ತು ಸಾಂಸ್ಕೃತಿಕ ಬದಲಾವಣೆಗಳನ್ನು ಅರ್ಥಮಾಡಿಕೊಳ್ಳಲು ದಂಪತಿ ಉತ್ಸುಕರಾಗಿದ್ದಾರೆ ಎಂದು ವಿವರಿಸಿದರು.

ಸಾಮಾನ್ಯವಾಗಿ ನಿವೃತ್ತಿ ಜೀವನವನ್ನು ವಿಶ್ರಾಂತಿಗೆ ಮೀಸಲಿಡುವ ವಯಸ್ಸಿನಲ್ಲಿ ತಾಯಣ್ಣ ಯರಗೇರಾ ಅವರು ಸಾಹಸಮಯ ದೇಶ ಪರ್ಯಟನೆಗೆ ಮುಂದಾಗಿರುವುದು ವಿಶೇಷವಾಗಿದೆ. ಹೊಸ ಸ್ಥಳಗಳನ್ನು ಅನ್ವೇಷಿಸುವ ಆಸಕ್ತಿ, ವಿಭಿನ್ನ ಜನಸಮುದಾಯಗಳೊಂದಿಗೆ ಒಡನಾಟ ಬೆಳೆಸುವ ಹಂಬಲ ಹಾಗೂ ನಿರಂತರ ಕಲಿಕೆಯ ಮನೋಭಾವಕ್ಕೆ ವಯಸ್ಸು ಅಡ್ಡಿಯಾಗುವುದಿಲ್ಲ ಎಂಬುದಕ್ಕೆ ಅವರ ಈ ಪ್ರಯತ್ನ ಮಾದರಿಯಾಗಿದೆ ಎಂದು ಬಸವರಾಜ್ ಮೆಚ್ಚುಗೆ 2ನೇ ಪುಟಕ್ಕೆ

ವಾರ್ಡ್ ನಂ. 15ರಲ್ಲಿ ಹದಗೆಟ್ಟ ಚರಂಡಿ ವ್ಯವಸ್ಥೆ: ಪಾಲಿಕೆ ನಿರ್ಲಕ್ಷ್ಯಕ್ಕೆ ನಿವಾಸಿಗಳ ಆಕ್ರೋಶ

ರಾಯಚೂರು: ನಗರದ ವಾರ್ಡ್ ನಂ. 15ರ ನೇತಾಜಿ ನಗರ ಬಡಾವಣೆಯಲ್ಲಿ ಚರಂಡಿಗಳು ಶಿಥಿಲಗೊಂಡು ಹಲವು ವರ್ಷಗಳು ಕಳೆದರೂ ದುರಸ್ತಿ ಅಥವಾ ಹೊಸ ಚರಂಡಿಗಳ ನಿರ್ಮಾಣಕ್ಕೆ ಮಹಾನಗರ ಪಾಲಿಕೆ ಕ್ರಮ ಕೈಗೊಳ್ಳದಿರುವುದು ಸ್ಥಳೀಯ ನಿವಾಸಿಗಳ ಅಸಮಾಧಾನಕ್ಕೆ ಕಾರಣವಾಗಿದೆ. ಮೂಲಸೌಕರ್ಯಗಳ ಕೊರತೆಯಿಂದ ಬಡಾವಣೆಯ ಜನರು ನಿತ್ಯ ಸಂಕಷ್ಟ ಎದುರಿಸುತ್ತಿದ್ದರೂ ಸಂಬಂಧಪಟ್ಟ ಅಧಿಕಾರಿಗಳು ಸಮಸ್ಯೆಗೆ ಸ್ಪಂದಿಸುತ್ತಿಲ್ಲ ಎಂಬ ಆರೋಪ ಕೇಳಿಬಂದಿದೆ.

ನೇತಾಜಿ ನಗರದ ವಿವಿಧ ರಸ್ತೆಗಳಲ್ಲಿ ಚರಂಡಿಗಳು ಒಡೆದು ಹಾಳಾಗಿದ್ದು, ಕೆಲವೆಡೆ ಚರಂಡಿಗಳ ಅಂಚುಗಳು ಕುಸಿದು ಅಪಾಯಕಾರಿ ಸ್ಥಿತಿ ನಿರ್ಮಾಣವಾಗಿದೆ. ಈಗಾಗಲೇ ಕಿರಿದಾಗಿರುವ ರಸ್ತೆಗಳಲ್ಲಿ ಹದಗೆಟ್ಟ ಚರಂಡಿಗಳಿಂದಾಗಿ ಪಾದಚಾರಿಗಳು ಹಾಗೂ ದ್ವಿಚಕ್ರ ವಾಹನ ಸವಾರರು ಎಚ್ಚರಿಕೆಯಿಂದ ಸಂಚರಿಸಬೇಕಾದ ಪರಿಸ್ಥಿತಿ ಎದುರಾಗಿದೆ. ಸ್ವಲ್ಪ ನಿರ್ಲಕ್ಷ್ಯ ವಹಿಸಿದರೂ ವಾಹನ ಸವಾರರು ಚರಂಡಿಗೆ ಬಿದ್ದು ಅಪಘಾತಕ್ಕೀಡಾಗುವ ಸಾಧ್ಯತೆಯಿದೆ ಎಂದು ನಿವಾಸಿಗಳು ಆತಂಕ ವ್ಯಕ್ತಪಡಿಸಿದ್ದಾರೆ.

ಬಡಾವಣೆಯಲ್ಲಿ ಸಮರ್ಪಕ ಒಳಚರಂಡಿ ವ್ಯವಸ್ಥೆ ಇಲ್ಲದಿರುವುದರಿಂದ ಮನೆಗಳಿಂದ ಹೊರಬರುವ ಕೊಳಚೆ ನೀರು ಹಾಗೂ ಮಲಮೂತ್ರ ಮಿಶ್ರಿತ ತ್ಯಾಜ್ಯ ನೀರು ತೆರೆದ ಚರಂಡಿಗಳಲ್ಲಿ ಹರಿಯುತ್ತಿದೆ ಎನ್ನಲಾಗಿದೆ. ಇದರಿಂದ ಸುತ್ತಮುತ್ತಲಿನ ಪರಿಸರ ಕಲುಷಿತಗೊಳ್ಳುವುದರ ಜೊತೆಗೆ ದುರ್ವಾಸನೆ ಹಾಗೂ ಸಾಂಕ್ರಾಮಿಕ ರೋಗಗಳು ಹರಡುವ ಭೀತಿ ಎದುರಾಗಿದೆ. ವಿಶೇಷವಾಗಿ ಮಕ್ಕಳು, ವೃದ್ಧರು ಹಾಗೂ ಮಹಿಳೆಯರು ಈ ಅವ್ಯವಸ್ಥೆಯಿಂದ ತೊಂದರೆ ಅನುಭವಿಸುವಂತಾಗಿದೆ.

ನಗರದ ಅಭಿವೃದ್ಧಿಗಾಗಿ ಕೋಟ್ಯಂತರ ರೂಪಾಯಿ ಅನುದಾನ ಬಿಡುಗಡೆಯಾಗುತ್ತಿದೆ



ಎಂದು ಹೇಳಲಾಗುತ್ತಿದ್ದರೂ ನೇತಾಜಿ ನಗರದ ಮೂಲಸೌಕರ್ಯ ಅಭಿವೃದ್ಧಿಗೆ ಆದ್ಯತೆ ನೀಡದಿರುವುದು ಏಕೆ ಎಂಬ ಪ್ರಶ್ನೆ ಸ್ಥಳೀಯರಲ್ಲಿ ಮೂಡಿದೆ. ನಗರದ ಅಭಿವೃದ್ಧಿಗೆ ₹200 ಕೋಟಿ ಅನುದಾನ ಬಂದಿದೆ ಎನ್ನಲಾಗುತ್ತಿದ್ದು, ಆ ಅನುದಾನದಲ್ಲಿ ವಾರ್ಡ್ ನಂ. 15ರ ಅಭಿವೃದ್ಧಿಗೆ ಎಷ್ಟು ಹಣ ಮೀಸಲಿಡಲಾಗಿದೆ 2ನೇ ಪುಟಕ್ಕೆ

ನ. 16 ವಿದ್ಯುತ್ ಗ್ರಾಹಕರ ಸಂವಾದ ಸಭೆ

ರಾಯಚೂರು ನವೆಂಬರ್ 13 (ಕರ್ನಾಟಕ ವಾರ್ತೆ): ರಾಯಚೂರು ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ 2ರ ಕಚೇರಿಯಲ್ಲಿ ನವೆಂಬರ್ 16ರ ಮಧ್ಯಾಹ್ನ 3.30ಗಂಟೆಗೆ ಗ್ರಾಹಕರ ಸಂವಾದ ಸಭೆಯನ್ನು ಹಮ್ಮಿಕೊಳ್ಳಲಾಗಿದ್ದು, ವಿದ್ಯುತ್ ಗ್ರಾಹಕರು ವಿದ್ಯುತ್ ದೂರುಗಳ ಬಗ್ಗೆ ಸಭೆಗೆ ಹಾಜರಾಗಿ ದೂರನ್ನು ಇತ್ಯರ್ಥಪಡಿಸಿಕೊಳ್ಳಲು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗ 2ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಭಾರತ್ ಹೆವಿ ಎಲೆಕ್ಟ್ರಿಕಲ್ಸ್ ಲಿಮಿಟೆಡ್ ನಲ್ಲಿ ವಿವಿಧ ಹುದ್ದೆಗಳಿಗೆ ಅರ್ಜಿ ಆಹ್ವಾನ

ರಾಯಚೂರು ನವೆಂಬರ್ 13 (ಕರ್ನಾಟಕ ವಾರ್ತೆ): ಭಾರತ್ ಹೆವಿ ಎಲೆಕ್ಟ್ರಿಕಲ್ಸ್ ಲಿಮಿಟೆಡ್ (ಬಿಹೆಚ್ಇಎಲ್) ಸಂಸ್ಥೆಯಲ್ಲಿ 660 ಆರ್ಟಿಸನ್ ಹುದ್ದೆಗಳ ನೇಮಕಾತಿ ಭಾರತ ಸರ್ಕಾರದ ಸಾರ್ವಜನಿಕ ವಲಯದ ಮಹಾರತ್ನ ಸಂಸ್ಥೆಯಾದ ಭಾರತ್ ಹೆವಿ ಎಲೆಕ್ಟ್ರಿಕಲ್ಸ್ ಲಿಮಿಟೆಡ್ (ಬಿಹೆಚ್ ಇಎಲ್) ವತಿಯಿಂದ ಆರ್ಟಿಸನ್ ಗ್ರೇಡ್-ಗಿ ಹುದ್ದೆಗಳ ನೇಮಕಾತಿಗಾಗಿ ಒಟ್ಟು 660 ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಅರ್ಹತೆ: ಅಭ್ಯರ್ಥಿಗಳು 10ನೇ ತರಗತಿ ಉತ್ತೀರ್ಣರಾಗಿದ್ದು, ಸಂಬಧಿತ ಟ್ರೇಡ್‌ನಲ್ಲಿ ಖಿ/ಓಖಿಅ ಹಾಗೂ ಓಂಅ (ಓಚಿಣಟಿಚಿಟ ಂಠಿಠಿಡಿಟಿಣಛಿಶಿ ಅಡಿಣಜಿಛಿಚಿಣ) ಹೊಂದಿರಬೇಕು. ಸಾಮಾನ್ಯ ಮತ್ತು ಔಃಅ ಅಭ್ಯರ್ಥಿಗಳಿಗೆ ಕನಿಷ್ಠ 60% ಹಾಗೂ ಅ/ಖಿ/ತಿಆ ಅಭ್ಯರ್ಥಿಗಳಿಗೆ 55% ಅಂಕಗಳು ಕಡ್ಡಾಯವಾಗಿರುತ್ತವೆ.

ಹುದ್ದೆಗಳ ವಿವರ: ಫಿಟ್ಟರ್, ವೆಲ್ಡರ್, ಮೆಷಿನಿಸ್ಟ್, ಟರ್ನರ್, ಎಲೆಕ್ಟ್ರಿಷಿಯನ್, ಎಲೆಕ್ಟ್ರಾನಿಕ್ಸ್ ಮೆಕ್ಯಾನಿಕ್ ಮತ್ತು ಫೌಂಡ್ರಿಮ್ಯಾನ್ ಟ್ರೇಡ್‌ಗಳಲ್ಲಿ ನೇಮಕಾತಿ ನಡೆಯಲಿದೆ.

ವಯೋಮಿತಿ: ದಿನಾಂಕ 01.10.2026ಕ್ಕೆ ಗರಿಷ್ಠ ವಯೋಮಿತಿ 27 ವರ್ಷಗಳು. ಅ/ಖಿ ಅಭ್ಯರ್ಥಿಗಳಿಗೆ 5 ವರ್ಷ, ಔಃಅ ಅಭ್ಯರ್ಥಿಗಳಿಗೆ 3 ವರ್ಷ ಹಾಗೂ ತಿಆ ಮತ್ತು ಇತರ ಅರ್ಹ ಅಭ್ಯರ್ಥಿಗಳಿಗೆ ನಿಯಮಾನುಸಾರ ವಯೋಮಿತಿ ಸಡಿಲಿಕೆ ಇರುತ್ತದೆ.

ವೇತನ: ಒಂದು ವರ್ಷದ ತರಬೇತಿ ಅವಧಿಯಲ್ಲಿ ಮಾಸಿಕ ರೂ.24,000/-ವೇತನ ನೀಡಲಾಗುತ್ತದೆ. ತರಬೇತಿ ನಂತರ ವೇತನ ಶ್ರೇಣಿ ರೂ.29,500/-ರಿಂದ ರೂ.65,000ವರೆಗೆ ಇರುತ್ತದೆ.

ಆಯ್ಕೆ ವಿಧಾನ: ಕಂಪ್ಯೂಟರ್ ಆಧಾರಿತ ಪರೀಕ್ಷೆ (ಅಃಖಿ), ದಾಖಲೆಗಳ ಪರಿಶೀಲನೆ ಹಾಗೂ ಅರ್ಹತಾ ಕೌಶಲ್ಯ ಪರೀಕ್ಷೆಯ ಮೂಲಕ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುತ್ತದೆ. ಅರ್ಜಿ ಸಲ್ಲಿಕೆ ಪ್ರಾರಂಭ: 21.10.2026, ಬೆಳಿಗ್ಗೆ 10 ಗಂಟೆಯಿದ ದಿನಾಂಕ: 18.11.2026ರ ರಾತ್ರಿ 11.45 ಗಂಟೆಯವರೆಗೆ ಅರ್ಜಿ ಸಲ್ಲಿಸಬಹುದಾಗಿದೆ. ದಿನಾಂಕ: 11.12.2026ರಂದು ಪರೀಕ್ಷೆಯ ತಾತ್ಕಾಲಿಕ ನಡೆಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ದೂರವಾಣಿ ಸಂಖ್ಯೆ: 08532231684 ಅಥವಾ ಇಲಾಖೆಯ ಅಧಿಕೃತ ವೆಬ್‌ಸೈಟ್ ವಿಳಾಸ: ಣಣಠಿ://ಛಿಚಿಡಿಡಿ.ಟ.ಟಿ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನ.14ರಂದು ಪ್ರಜಾ ಸೇವಾ ಆಂದೋಲನ: ಶಾಸಕ ಬಸನಗೌಡ ದದ್ದಲ್

ಬೇಡಿಕೆಗಳು ಹಾಗೂ ವಿವಿಧ ಸರ್ಕಾರಿ ಯೋಜನೆಗಳಿಗೆ ಸಂಬಂಧಿಸಿದ ಅಹವಾಲುಗಳನ್ನು ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತರಲು ಈ ಕಾರ್ಯಕ್ರಮ ಅವಕಾಶ ಕಲ್ಪಿಸಲಿದೆ. ಸಾರ್ವಜನಿಕರಿಂದ ಸ್ವೀಕರಿಸುವ ಮನವಿಗಳಿಗೆ ನಿಯಮಾನುಸಾರ ಸ್ಪಂದಿಸಿ, ಅರ್ಹ ಫಲಾನುಭವಿಗಳಿಗೆ ಸರ್ಕಾರದ ಸೌಲಭ್ಯಗಳು ದೊರೆಯುವಂತೆ ಕ್ರಮ ಕೈಗೊಳ್ಳುವ ಆಶಯ ಹೊಂದಲಾಗಿದೆ ಎಂದು ಹೇಳಿದರು.

ಸರ್ಕಾರದ ಜನಪರ ಯೋಜನೆಗಳ ಪ್ರಯೋಜನಗಳು ಗ್ರಾಮೀಣ ಭಾಗದ ಪ್ರತಿಯೊಬ್ಬ ಅರ್ಹ ಫಲಾನುಭವಿಗೂ ತಲುಪಬೇಕು. ಸಾರ್ವಜನಿಕರು ತಮ್ಮ ಹಕ್ಕುಗಳು ಹಾಗೂ ಲಭ್ಯವಿರುವ ಸರ್ಕಾರಿ ಸೌಲಭ್ಯಗಳ ಬಗ್ಗೆ ಅರಿವು ಹೊಂದಿ ಅವುಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂಬ ಉದ್ದೇಶದಿಂದ ಈ ಆಂದೋಲನ ಆಯೋಜಿಸಲಾಗಿದೆ ಎಂದು ವಿವರಿಸಿದರು.

ದೇವಸುಗೂರು ಹೋಬಳಿ ವ್ಯಾಪ್ತಿಯ ವಿವಿಧ ಗ್ರಾಮಗಳ ಸಾರ್ವಜನಿಕರು ನವೆಂಬರ್ 14ರಂದು ನಡೆಯಲಿರುವ ಪ್ರಜಾ ಸೇವಾ ಆಂದೋಲನದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ತಮ್ಮ ಕುಂದುಕೊರತೆಗಳನ್ನು ಅಧಿಕಾರಿಗಳ ಗಮನಕ್ಕೆ ತರುವುದರ ಜೊತೆಗೆ ಸರ್ಕಾರದ ವಿವಿಧ ಯೋಜನೆಗಳ ಪ್ರಯೋಜನ ಪಡೆದುಕೊಳ್ಳಬೇಕು ಎಂದು ಶಾಸಕ ಬಸನಗೌಡ ದದ್ದಲ್ ಹಾಗೂ ತಾಲೂಕು ಆಡಳಿತ ಮನವಿ ಮಾಡಿದೆ.

ಅಮೃತ ವಾಣಿ
ಸೋಲನ್ನು ಗೆಲುವಾಗಿ
ಬದಲಿಸುವ ಶಕ್ತಿ ದೈರ್ಯಕ್ಕಿದೆ.

1646 ನೆಯ ದಿನಕ್ಕೆ ಏಮ್ಸ್ ಹೋರಾಟ
अखिल भारतीय आयुर्विज्ञान संस्थान ALL INDIA INSTITUTE OF MEDICAL SCIENCES
शरीरमाद्यं खलु धर्मसाधनम्

ಬಾಹ್ಯ ಆಚರಣೆಗಿಂತ ಆತ್ಮಶುದ್ಧಿಗೆ ಆದ್ಯತೆ ನೀಡಿದ ತತ್ವಪದಕಾರರು: ಬಸವರಾಜ ಸ್ವಾಮಿ



ರಾಯಚೂರು, ನ.13: ತತ್ವಪದಕಾರರು ಬಾಹ್ಯ ಆಡಂಬರ, ಅಂಧಶ್ರದ್ಧೆ ಹಾಗೂ ಕೇವಲ ಮೂರ್ತಿಪೂಜೆಗೆ ಸೀಮಿತವಾಗದೆ ಮನುಷ್ಯನ ಅಂತರಂಗದ ಶುದ್ಧತೆ, ಆತ್ಮಜ್ಞಾನ ಮತ್ತು ಮಾನವೀಯ ಮೌಲ್ಯಗಳಿಗೆ ಹೆಚ್ಚಿನ ಮಹತ್ವ ನೀಡಿದ್ದರು ಎಂದು ಸುದ್ದಿಮೂಲ ಪತ್ರಿಕೆಯ ಸಂಪಾದಕ ಬಸವರಾಜ ಸ್ವಾಮಿ ಅಭಿಪ್ರಾಯಪಟ್ಟರು.

ನಗರದ ಟ್ಯಾಗೋರ್ ಶಿಕ್ಷಣ ಸಂಸ್ಥೆಯ ಎಸ್ ಆರ್‌ಕೆ ಶಿಕ್ಷಣ ಮಹಾವಿದ್ಯಾಲಯದ ಸಭಾಭವನದಲ್ಲಿ ಆದಿಕವಿ ಶ್ರೀ ಮಹರ್ಷಿ ವಿಶ್ವವಿದ್ಯಾಲಯ, ತೇಜಸ್ ಇಂಡಿಯಾ ಪ್ರಕಾಶನ, ಕಲಾ ಸಂಕುಲ ಸಂಸ್ಥೆ ಹಾಗೂ ಲೋಹಿಯಾ ಪ್ರತಿಷ್ಠಾನದ ಸಹಯೋಗದಲ್ಲಿ ಆಯೋಜಿಸಿದ್ದ ಪ್ರೊ. ಮಲ್ಲೇಪುರಂ ಜಿ. ವೆಂಕಟೇಶ ಸಂಪಾದಕತ್ವದ ತತ್ವಪದಕಾರರ ಕುರಿತ 12 ಪುಸ್ತಕಗಳ ಲೋಕಾರ್ಪಣೆ ಸಮಾರಂಭದಲ್ಲಿ ಅವರು ಮಾತನಾಡಿದರು.

ತತ್ವಪದಕಾರರು ತಮ್ಮ ಅನುಭವದ ಮೂಲಕ ಜೀವನದ ಸತ್ಯಗಳನ್ನು ಜನಸಾಮಾನ್ಯರಿಗೆ ತಿಳಿಸಿಕೊಟ್ಟಿದ್ದಾರೆ. ಅವರ ಚಿಂತನೆಗಳನ್ನು ಬರಹ ಮತ್ತು ಗಾಯನದ ಮೂಲಕ ಜನರಿಗೆ ತಲುಪಿಸುವ ಪ್ರಯತ್ನಗಳು ನಡೆದಿವೆ. ತತ್ವಪದಗಳ ಅರ್ಥ ಹಾಗೂ ವಿಶ್ಲೇಷಣೆ ಒಳಗೊಂಡಿರುವ ಈ ಕೃತಿಗಳು ಮುಂದಿನ ಪೀಳಿಗೆಯ ಅಧ್ಯಯನಕಾರರಿಗೆ ಮಾರ್ಗದರ್ಶಿಯಾಗಲಿವೆ ಎಂದರು.

ಕರ್ನಾಟಕ ತತ್ವಪದಕಾರರ ಮಾಲೆಯ ಸಂಪಾದಕ ಪ್ರೊ. ಮಲ್ಲೇಪುರಂ ಜಿ. ವೆಂಕಟೇಶ ಮಾತನಾಡಿ, ಕಲ್ಯಾಣ ಕರ್ನಾಟಕದಲ್ಲಿ ಅನೇಕ ತತ್ವಪದಕಾರರು ಸಮಾಜಕ್ಕೆ ಮಹತ್ವದ ಕೊಡುಗೆ ನೀಡಿದ್ದಾರೆ. ಅವರ ಸಾಹಿತ್ಯವನ್ನು ಗುರುತಿಸಿ, ಜನರ ನಡುವೆ ಉಳಿದಿರುವ ತತ್ವಪದಗಳನ್ನು ಸಂಗ್ರಹಿಸಿ ದಾಖಲಿಸುವ ಕಾರ್ಯ ನಡೆಯಬೇಕಿದೆ ಎಂದು ಹೇಳಿದರು.


ಜನಪದ ಸಾಹಿತ್ಯ ಸಂಗ್ರಹದ ಮಾದರಿಯಲ್ಲಿ ತತ್ವಪದಗಳ ಸಂರಕ್ಷಣೆಗೆ ಮುಂದಾಗಬೇಕು. ಕಾರ್ಯಾಗಾರಗಳ ಮೂಲಕ ಅವುಗಳ ಸಾಮಾಜಿಕ, ಸಾಂಸ್ಕೃತಿಕ ಹಾಗೂ ತಾತ್ವಿಕ ಆಯಾಮಗಳನ್ನು ವಿಶ್ಲೇಷಿಸಬೇಕು. ಸಂಗ್ರಹಕಾರರಿಗೆ ಸಂಗೀತದ ಜ್ಞಾನವೂ ಅಗತ್ಯವಾಗಿದೆ. ತೇಜಸ್ ಇಂಡಿಯಾ ಪ್ರಕಾಶನವು ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರಿಗೆ ಅನುಕೂಲವಾಗುವಂತೆ 12 ಕೃತಿಗಳನ್ನು ಪ್ರಕಟಿಸಿದ್ದು, ಇನ್ನಷ್ಟು ತತ್ವಪದಕಾರರನ್ನು ಪರಿಚಯಿಸುವ ಅಗತ್ಯವಿದೆ ಎಂದರು.

ಕೃತಿಗಳ ಕುರಿತು ಮಾತನಾಡಿದ ಪ್ರಾಧ್ಯಾಪಕ ಡಾ. ದಸ್ತಗೀರಸಾಬ್ ದಿನ್ನಿ, ವಚನಕಾರರು ಹಾಗೂ ತತ್ವಪದಕಾರರು ಸಮಾಜವನ್ನು ಜಾಗೃತಗೊಳಿಸುವ, ಸೌಹಾರ್ದತೆ ಬೆಳೆಸುವ ಮತ್ತು ಮಾನವೀಯ ಮೌಲ್ಯಗಳನ್ನು ಸಾರುವ ಸಾಹಿತ್ಯ ರಚಿಸಿದ್ದಾರೆ ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಶಿವಾನಂದ ಕೆಳಗಿನಮನಿ ಮಾತನಾಡಿ, ತತ್ವಪದಕಾರರನ್ನು ಜಾತಿ, ಮತಗಳ ಚೌಕಟ್ಟಿನಲ್ಲಿ ಸೀಮಿತಗೊಳಿಸದೆ ಬಹುಮುಖ ದೃಷ್ಟಿಕೋನದಿಂದ ಅಧ್ಯಯನ ಮಾಡಬೇಕು. ಜನಸಾಮಾನ್ಯರ ಆಡುಭಾಷೆಯಲ್ಲಿಯೇ ಜೀವನದ ಪರಮಸತ್ಯವನ್ನು ಸಾರಿದ ಅವರ ಸಾಹಿತ್ಯವು ಸಾಮಾಜಿಕ ಅಸಮಾನತೆ ಮತ್ತು ಕಂದಾಚಾರಗಳನ್ನು ಪ್ರಶ್ನಿಸುವ ಶಕ್ತಿ ಹೊಂದಿದೆ ಎಂದರು.

ಸಮಾರಂಭದಲ್ಲಿ ಸಾಹಿತಿಗಳಾದ ವೀರಹನುಮಾನ, ಡಾ. ಜೆ.ಎಲ್. ಈರಣ್ಣ, ಡಾ. ಸಿ.ಬಿ. ಚಿಲ್ಕರಾಗಿ, ಡಾ. ದೇವೇಂದ್ರಪ್ಪ, ಪ್ರಾಧ್ಯಾಪಕ ಡಾ. ಕೆ. ವೆಂಕಟೇಶ, ಲೋಹಿಯಾ ಪ್ರತಿಷ್ಠಾನದ ಭೀಮನಗೌಡ ಇಟಗಿ, ಕಲಾ ಸಂಕುಲ ಸಂಸ್ಥೆಯ ಕಾರ್ಯದರ್ಶಿ ಮಾರುತಿ ಬಡಿಗೇರ, ಪ್ರಕಾಶಕ ತೇಜಸ್ ಚಂದ್ರ, ಸಂಚಾಲಕ ಡಾ. ಜಿ.ಎಸ್. ಬಿರಾದಾರ, ಡಾ. ವಿರೂಪಾಕ್ಷಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

13 ಮಸೀದಿ ಸಮಿತಿಗಳಿಗೆ ವಕ್ಫ್ ಮಂಡಳಿ ನೋಟಿಸ್: ನ.19ರಂದು ವಿಚಾರಣೆಗೆ ಹಾಜರಾಗಲು ಸೂಚನೆ


KARNATAKA STATE BOARD OF AUQAF
DISTRICT WAQF OFFICE, RAICHUR
Meeting Notice
Your co-operation and active participation are solicited.
District Waqf Officer
Raichur

ಲಿಂಗಸುಗೂರು: ಪಟ್ಟಣದ ಮಸೀದಿ ಸಮಿತಿಗಳ ಆಡಳಿತ, ಹಣಕಾಸು ವ್ಯವಹಾರ ಹಾಗೂ ವಕ್ಫ್ ಆಸ್ತಿಗಳ ನಿರ್ವಹಣೆಯಲ್ಲಿ ಪಾರದರ್ಶಕತೆ ಕುರಿತು ತನಿಖೆ ನಡೆಸುವಂತೆ ಸಲ್ಲಿಕೆಯಾಗಿದ್ದ ದೂರಿನ ಹಿನ್ನೆಲೆಯಲ್ಲಿ ರಾಯಚೂರು ಜಿಲ್ಲಾ ವಕ್ಫ್ ಮಂಡಳಿಯು ಲಿಂಗಸುಗೂರು ಪುರಸಭೆ ವ್ಯಾಪ್ತಿಯ 13 ಮಸೀದಿ ಸಮಿತಿಗಳಿಗೆ ನೋಟಿಸ್ ಜಾರಿಗೊಳಿಸಿದೆ.

ಅಂಜುಮನ್-ಎ-ಮುಸ್ಲಿಮೀನ್ ಲಿಂಗಸುಗೂರು ತಾಲೂಕು ಸಮಿತಿಯು ಅಕ್ಟೋಬರ್ 15ರಂದು ಜಿಲ್ಲಾ ವಕ್ಫ್ ಮಂಡಳಿಗೆ ದೂರು ಸಲ್ಲಿಸಿ, ಮಸೀದಿ ಸಮಿತಿಗಳ ಆಡಳಿತಾತ್ಮಕ ಕಾರ್ಯವೈಖರಿ, ಆರ್ಥಿಕ ವ್ಯವಹಾರಗಳು ಹಾಗೂ ವಕ್ಫ್ ಆಸ್ತಿಗಳ ಸಂರಕ್ಷಣೆಯ ಕುರಿತು ಸಮಗ್ರ ಪರಿಶೀಲನೆ ನಡೆಸುವಂತೆ ಒತ್ತಾಯಿಸಿತ್ತು.

ಅಲ್ಲದೆ, ಸಮುದಾಯದ ಹಿತದೃಷ್ಟಿಯಿಂದ ಅಂಜುಮನ್ ಸಮಿತಿ ಕೈಗೊಳ್ಳುವ ಸಾಮಾಜಿಕ ಕಾರ್ಯಕ್ರಮಗಳ ಘೋಷಣೆಗಳು ಮತ್ತು ಪ್ರಕಟಣೆಗಳಿಗೆ ಉದ್ದೇಶಪೂರ್ವಕವಾಗಿ ಅಡ್ಡಿಪಡಿಸಲಾಗುತ್ತಿದೆ ಎಂಬ ಆರೋಪವನ್ನೂ ದೂರಿನಲ್ಲಿ ಉಲ್ಲೇಖಿಸಲಾಗಿತ್ತು.

ದೂರನ್ನು ಪರಿಗಣಿಸಿರುವ ಜಿಲ್ಲಾ ವಕ್ಫ್ ಮಂಡಳಿ ಅಧಿಕಾರಿಗಳು ನವೆಂಬರ್ 12ರಂದು ಸಂಬಂಧಪಟ್ಟ 13 ಮಸೀದಿ ಸಮಿತಿಗಳಿಗೆ ನೋಟಿಸ್ ಜಾರಿಗೊಳಿಸಿದ್ದು, ನವೆಂಬರ್ 19ರಂದು ಬೆಳಿಗ್ಗೆ 11.30ಕ್ಕೆ ನಡೆಯಲಿರುವ ಸಭೆಗೆ ಎಲ್ಲ ಸಮಿತಿಗಳ ಪದಾಧಿಕಾರಿಗಳು ಕಡ್ಡಾಯವಾಗಿ ಹಾಜರಾಗುವಂತೆ ಸೂಚಿಸಿದ್ದಾರೆ.

ಈ ಕುರಿತು ಪ್ರತಿಕ್ರಿಯಿಸಿದ ಅಂಜುಮನ್ ಸಮಿತಿಯ ಗೌರವಾಧ್ಯಕ್ಷ ಅನ್ಸರುದ್ದಿನ್, ವಕ್ಫ್ ಆಸ್ತಿಗಳು ಸಮುದಾಯದ ಅಮೂಲ್ಯ ಧಾರ್ಮಿಕ ಮತ್ತು ಸಾರ್ವಜನಿಕ ಆಸ್ತಿಗಳಾಗಿದ್ದು, ಅವುಗಳ ನಿರ್ವಹಣೆಯಲ್ಲಿ ಹೊಣೆಗಾರಿಕೆ ಹಾಗೂ ಪಾರದರ್ಶಕತೆ ಅತ್ಯಗತ್ಯವಾಗಿದೆ ಎಂದರು.

ಯಾವುದೇ ವ್ಯಕ್ತಿ ಅಥವಾ ಸಮಿತಿಯ ವಿರುದ್ಧ ವೈಯಕ್ತಿಕ ದ್ವೇಷದಿಂದ ದೂರು ಸಲ್ಲಿಸಿಲ್ಲ. ವಕ್ಫ್ ಆಸ್ತಿಗಳ ರಕ್ಷಣೆ, ಮಸೀದಿಗಳ ಸಮರ್ಪಕ ಆಡಳಿತ ಹಾಗೂ ಸಮುದಾಯದ ಹಿತಾಸಕ್ತಿಯನ್ನು ಕಾಪಾಡುವುದೇ ನಮ್ಮ ಉದ್ದೇಶವಾಗಿದೆ ಎಂದು ಸ್ಪಷ್ಟಪಡಿಸಿದರು.

ಮಂಡಳಿಯ ಕ್ರಮವನ್ನು ಸ್ವಾಗತಿಸಿದ ಅವರು, ಆರೋಪಗಳ ಸತ್ಯಾಸತ್ಯತೆಯನ್ನು ಯಾವುದೇ ಒತ್ತಡ ಅಥವಾ ಪಕ್ಷಪಾತವಿಲ್ಲದೆ ಪರಿಶೀಲಿಸಬೇಕು. ತನಿಖೆಯಲ್ಲಿ ತಪ್ಪುಗಳು ದೃಢಪಟ್ಟಲ್ಲಿ ಸಂಬಂಧಪಟ್ಟವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

68ರ ಹರೆಯದಲ್ಲೂ ಸಾಹಸಮಯ ಪಯಣಕ್ಕೆ ಸಜ್ಜಾದ ತಾಯಣ್ಣ ಯರಗೇರಾ ದಂಪತಿ

ವ್ಯಕ್ತಪಡಿಸಿದರು.

ನವೆಂಬರ್ 15ರಂದು ಬೆಳಿಗ್ಗೆ 8 ಗಂಟೆಗೆ ನಗರದ ಅಭಯಾಂಜನೇಯ ದೇವಸ್ಥಾನದ ಆವರಣದಿಂದ ದಂಪತಿಯ ಭಾರತ ದರ್ಶನ ಯಾತ್ರೆ ಆರಂಭವಾಗಲಿದೆ. ಈ ಸಂದರ್ಭದಲ್ಲಿ ಸೂರ್ಯೋದಯ ವಾಕಿಂಗ್ ಕ್ಲಬ್ ವತಿಯಿಂದ ವಿಶೇಷ ಬೀಳ್ಕೊಡುಗೆ ಕಾರ್ಯಕ್ರಮ ಏರ್ಪಡಿಸಲಾಗಿದ್ದು, ಕ್ಲಬ್‌ನ ಸದಸ್ಯರು ಹಾಗೂ ಹಿತೈಷಿಗಳು ದಂಪತಿಗೆ ಶುಭ ಹಾರೈಸಿ ಪ್ರಯಾಣಕ್ಕೆ ಚಾಲನೆ ನೀಡಲಿದ್ದಾರೆ ಎಂದು ತಿಳಿಸಿದರು.

ಒಂದು ವರ್ಷ ಕಾಲ ದೇಶದ ವಿವಿಧ ಭಾಗಗಳಲ್ಲಿ ಸಂಚರಿಸಲಿರುವ ತಾಯಣ್ಣ ಯರಗೇರಾ ದಂಪತಿಯ ಈ ವಿಭಿನ್ನ ಪ್ರಯತ್ನವು ಹಿರಿಯ ನಾಗರಿಕರಿಗೆ ಮಾತ್ರವಲ್ಲದೆ, ಯುವಪೀಳಿಗೆಗೂ ಹೊಸ ಕನಸುಗಳನ್ನು ಕಾಣಲು ಮತ್ತು ಅವುಗಳನ್ನು ಸಾಕಾರಗೊಳಿಸಲು ಸ್ಫೂರ್ತಿಯಾಗಲಿದೆ. ಈ ಹಿನ್ನೆಲೆಯಲ್ಲಿ ನವೆಂಬರ್ 15ರಂದು ನಡೆಯಲಿರುವ ಬೀಳ್ಕೊಡುಗೆ ಸಮಾರಂಭದಲ್ಲಿ ನಗರದ ಸಾರ್ವಜನಿಕರು, ಸ್ನೇಹಿತರು ಹಾಗೂ ಹಿತೈಷಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ದಂಪತಿಗೆ ಶುಭ ಕೋರಬೇಕೆಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ತಾಯಣ್ಣ ಯರಗೇರಾ, ಅಯ್ಯಣ್ಣ ಗೌಡ ಹಾಗೂ ಎಚ್.ಎಂ. ಸುರೇಶ ಉಪಸ್ಥಿತರಿದ್ದರು.

ವಾರ್ಡ್ ನಂ. 15ರಲ್ಲಿ ಹದಗೆಟ್ಟ ಚರಂಡಿ ವ್ಯವಸ್ಥೆ: ಪಾಲಿಕೆ ನಿರ್ಲಕ್ಷ್ಯಕ್ಕೆ ನಿವಾಸಿಗಳ ಆಕ್ರೋಶ

ಎಂಬುದನ್ನು ಮಹಾನಗರ ಪಾಲಿಕೆ ಸ್ಪಷ್ಟಪಡಿಸಬೇಕು ಎಂಬ ಆಗ್ರಹ ವ್ಯಕ್ತವಾಗಿದೆ.

ಈ ಕುರಿತು ಅಸಮಾಧಾನ ವ್ಯಕ್ತಪಡಿಸಿರುವ ಪಲುಗುಲ ನಾಗರಾಜ ಅವರು, ವರ್ಷಗಳಿಂದ ಚರಂಡಿಗಳು ದುಸ್ಥಿತಿಯಲ್ಲಿದ್ದರೂ ಅಧಿಕಾರಿಗಳು ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿಲ್ಲ. ಸಾರ್ವಜನಿಕರ ಸುರಕ್ಷತೆ ಹಾಗೂ ಆರೋಗ್ಯಕ್ಕೆ ಸಂಬಂಧಿಸಿದ ಮೂಲಭೂತ ಸಮಸ್ಯೆಗಳನ್ನು ಪರಿಹರಿಸುವುದು ಪಾಲಿಕೆಯ ಪ್ರಮುಖ ಜವಾಬ್ದಾರಿಯಾಗಿದೆ. ಆದರೆ, ಜನರು ಪದೇಪದೇ ಸಮಸ್ಯೆಗಳನ್ನು ಗಮನಕ್ಕೆ ತಂದರೂ ಯಾವುದೇ ಪರಿಣಾಮಕಾರಿ ಕ್ರಮ ಕೈಗೊಳ್ಳದಿರುವುದು ಆಡಳಿತದ ನಿರ್ಲಕ್ಷ್ಯವನ್ನು ತೋರಿಸುತ್ತದೆ ಎಂದು ಆರೋಪಿಸಿದ್ದಾರೆ.

ವಾರ್ಡ್‌ನ ಅಭಿವೃದ್ಧಿಗೆ ಅನುದಾನದ ಕೊರತೆಯಿದೆಯೇ ಅಥವಾ ಲಭ್ಯವಿರುವ ಅನುದಾನವನ್ನು ಸಮರ್ಪಕವಾಗಿ ಬಳಸಿಕೊಳ್ಳಲಾಗುತ್ತಿಲ್ಲವೇ ಎಂಬುದನ್ನು ಪಾಲಿಕೆ ಆಡಳಿತ ಸ್ಪಷ್ಟಪಡಿಸಬೇಕು. ಹಾಳಾದ ಚರಂಡಿಗಳಿಂದ ಅನಾಹುತ ಸಂಭವಿಸುವ ಮುನ್ನ ಸಂಬಂಧಪಟ್ಟ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ಶಿಥಿಲಗೊಂಡಿರುವ ಚರಂಡಿಗಳನ್ನು ತೆರವುಗೊಳಿಸಿ, ಸುಸಜ್ಜಿತ ಹೊಸ ಚರಂಡಿಗಳನ್ನು ನಿರ್ಮಿಸುವುದರೊಂದಿಗೆ ಸಮರ್ಪಕ ಒಳಚರಂಡಿ ವ್ಯವಸ್ಥೆ ಕಲ್ಪಿಸಲು ತುರ್ತು ಕ್ರಮ ಕೈಗೊಳ್ಳಬೇಕು ಎಂದು ಪಲುಗುಲ ನಾಗರಾಜ ಒತ್ತಾಯಿಸಿದ್ದಾರೆ.

ಮೊದಲನೇ ಪುಟದಿಂದ

ಮೇಕೆದಾಟು ಯೋಜನೆಗೆ ಅನುಮತಿ ನೀಡಿ, ಕಸ್ತೂರಿರಂಗನ್ ವರದಿ ಶಿಫಾರಸು ಹಿಂಪಡೆಯಿರಿ: ಪ್ರಧಾನಿ ಮೋದಿಗೆ ಡಿ.ಕೆ. ಶಿವಕುಮಾರ್ ಮನವಿ

ಕಾರ್ಪೊರೇಟ್ ಸಾಮಾಜಿಕ ಜವಾಬ್ದಾರಿ (ಸಿಎಸ್‌ಆರ್) ನಿಧಿಯನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಲು ಕೇಂದ್ರ ಸರ್ಕಾರ ಅಗತ್ಯ ಮಾರ್ಗಸೂಚಿಗಳನ್ನು ರೂಪಿಸಬೇಕು ಎಂದು ಮನವಿ ಮಾಡಿದರು.

ಶಿಕ್ಷಣ ಹಾಗೂ ಉದ್ಯೋಗಾವಕಾಶಗಳಿಗಾಗಿ ಗ್ರಾಮೀಣ ಪ್ರದೇಶಗಳಿಂದ ನಗರಗಳಿಗೆ ವಲಸೆ ಹೋಗುವವರ ಸಂಖ್ಯೆ ಹೆಚ್ಚುತ್ತಿರುವುದು ಕಳವಳಕಾರಿ ಸಂಗತಿಯಾಗಿದೆ. ನಗರೀಕರಣದ ಪ್ರಮಾಣ 2002ರಲ್ಲಿ ಶೇ.31ರಷ್ಟಿದ್ದು, 2026ರ ವೇಳೆಗೆ ಶೇ.47ಕ್ಕೆ ಏರಿಕೆಯಾಗಿದೆ. ಇದೇ ಪ್ರವೃತ್ತಿ ಮುಂದುವರಿದರೆ ಮುಂದಿನ ಎರಡು ದಶಕಗಳಲ್ಲಿ ಶೇ.70ರಷ್ಟು ತಲುಪುವ ಸಾಧ್ಯತೆಯಿದೆ ಎಂದು ಅವರು ಅಭಿಪ್ರಾಯಪಟ್ಟರು.

ಗ್ರಾಮೀಣ ಪ್ರದೇಶದಲ್ಲಿಯೇ ಉತ್ತಮ ಶಿಕ್ಷಣ ಹಾಗೂ ಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸಿದರೆ ನಗರಗಳತ್ತ ವಲಸೆ ಹೋಗುವ ಅನಿವಾರ್ಯತೆಯನ್ನು ಕಡಿಮೆ ಮಾಡಬಹುದು. ನಗರಗಳಲ್ಲಿರುವ ಗುಣಮಟ್ಟದ ಶಿಕ್ಷಣ ಸೌಲಭ್ಯಗಳು ಹಳ್ಳಿಗಳ ಮಕ್ಕಳಿಗೂ ದೊರೆಯಬೇಕು. ಇದಕ್ಕಾಗಿ ಸಿಎಸ್‌ಆರ್ ನಿಧಿಯನ್ನು ಸರ್ಕಾರಿ ಶಾಲೆಗಳ ಅಭಿವೃದ್ಧಿ, ವಿದ್ಯಾರ್ಥಿಗಳ ಶಿಕ್ಷಣ ಹಾಗೂ ಆರೋಗ್ಯ ಸೇವೆಗಳಿಗೆ ಬಳಸಲು ಅನುಕೂಲವಾಗುವಂತೆ ಕೇಂದ್ರ ಸರ್ಕಾರ ಸೂಕ್ತ ನಿರ್ದೇಶನ ನೀಡಬೇಕು ಎಂದು ಕೋರಿದರು.

ಮೈಸೂರಿನಲ್ಲಿ ಆರಂಭಗೊಂಡಿರುವ ತಾರಾಲಯದ ಕುರಿತು ಮಾತನಾಡಿದ ಶಿವಕುಮಾರ್, ಐತಿಹಾಸಿಕ ಪರಂಪರೆ, ಕಲೆ, ಸಾಹಿತ್ಯ ಹಾಗೂ ಸಂಸ್ಕೃತಿಗೆ ಹೆಸರುವಾಸಿಯಾಗಿರುವ ಮೈಸೂರು ನಗರಕ್ಕೆ ಈ ತಾರಾಲಯ ಹೊಸ ವೈಜ್ಞಾನಿಕ ಹೆಗ್ಗುರುತಾಗಲಿದೆ ಎಂದು ಸಂತಸ ವ್ಯಕ್ತಪಡಿಸಿದರು.

ಮೈಸೂರಿಗೆ ಇಂತಹ ಮಹತ್ವದ ವೈಜ್ಞಾನಿಕ ಸೌಲಭ್ಯವನ್ನು ಒದಗಿಸಲು ಸಹಕರಿಸಿದ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರಿಗೆ ಕೃತಜ್ಞತೆ ಸಲ್ಲಿಸಿದರು.

ಮಿಯಾವಾಕಿ ಮಾದರಿಯಲ್ಲಿ ರೂಪಿಸಲಾಗಿರುವ ಭಾರತ ವನ ಕಾರ್ಯಕ್ರಮವನ್ನು ಉಲ್ಲೇಖಿಸಿದ ಅವರು, ಭಾರತ ವನವು ಪರಿಸರ ಮತ್ತು ಭೂಮಿಯ ಭವಿಷ್ಯವನ್ನು ಪೋಷಿಸಿದರೆ, ತಾರಾಲಯವು ಯುವಜನರ ವೈಜ್ಞಾನಿಕ ಚಿಂತನೆ ಹಾಗೂ ಭವಿಷ್ಯವನ್ನು ರೂಪಿಸಲಿದೆ ಎಂದು ಹೇಳಿದರು.

ಅಭಿವೃದ್ಧಿ ಹೊಂದಿದ ಭಾರತ ನಿರ್ಮಾಣಕ್ಕೆ ಪರಿಸರ ಸಂರಕ್ಷಣೆಯ ಜೊತೆಗೆ ವೈಜ್ಞಾನಿಕ ಮನೋಭಾವ ಹೊಂದಿರುವ ಯುವಪೀಳಿಗೆಯೂ ಅಗತ್ಯವಾಗಿದೆ. ತಾರಾಲಯದ ಉದ್ಘಾಟನೆ ಕೇವಲ ಹೊಸ ಕಟ್ಟಡ ಅಥವಾ ವೈಜ್ಞಾನಿಕ ಸೌಲಭ್ಯಕ್ಕೆ ಚಾಲನೆ ನೀಡುವ ಕಾರ್ಯಕ್ರಮವಲ್ಲ. ಮಕ್ಕಳಲ್ಲಿ ಕುತೂಹಲ, ಸಂಶೋಧನಾ ಮನೋಭಾವ ಹಾಗೂ ಬಾಹ್ಯಾಕಾಶ ವಿಜ್ಞಾನದ ಬಗ್ಗೆ ಆಸಕ್ತಿ ಮೂಡಿಸುವ ಮಹತ್ವದ ಹೆಜ್ಜೆಯಾಗಿದೆ ಎಂದು ಅಭಿಪ್ರಾಯಪಟ್ಟರು.

ಭಾರತದ ಬಾಹ್ಯಾಕಾಶ ಸಂಶೋಧನೆಯ ಬೆಳವಣಿಗೆಯಲ್ಲಿ ಕರ್ನಾಟಕದ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ದೇಶದ ಮೊದಲ ಉಪಗ್ರಹ ಆರ್ಯಭಟದಿಂದ ಆರಂಭಿಸಿ ಚಂದ್ರಯಾನ, ಆದಿತ್ಯ-ಎಲ್1 ಹಾಗೂ ಮುಂಬರುವ ಗಗನಯಾನ ಯೋಜನೆಗಳವರೆಗೆ ಕರ್ನಾಟಕದ ವಿಜ್ಞಾನಿಗಳು, ಎಂಜಿನಿಯರ್‌ಗಳು ಮತ್ತು ಸಂಶೋಧನಾ ಸಂಸ್ಥೆಗಳು ಮಹತ್ವದ ಕೊಡುಗೆ ನೀಡಿವೆ ಎಂದು ಸ್ಮರಿಸಿದರು.

ಭಾರತದ ರಾಕೆಟ್‌ಗಳು ಉಡಾವಣಾ ಕೇಂದ್ರಗಳಿಂದ ಬಾಹ್ಯಾಕಾಶಕ್ಕೆ ಹಾರಿದರೂ, ಅವುಗಳ ಹಿಂದಿರುವ ಅನೇಕ ವೈಜ್ಞಾನಿಕ ಪರಿಕಲ್ಪನೆಗಳು, ತಾಂತ್ರಿಕ ಸಂಶೋಧನೆಗಳು ಮತ್ತು ಎಂಜಿನಿಯರಿಂಗ್ ಸಾಮರ್ಥ್ಯಗಳು ಕರ್ನಾಟಕದ ಸಂಸ್ಥೆಗಳಲ್ಲಿ ರೂಪುಗೊಂಡಿವೆ. ರಾಜ್ಯದ ಶಿಕ್ಷಣ ಸಂಸ್ಥೆಗಳು ವಿದ್ಯಾರ್ಥಿಗಳನ್ನು ಉಪಗ್ರಹ ಅಭಿವೃದ್ಧಿ ಹಾಗೂ ಬಾಹ್ಯಾಕಾಶ ಸಂಶೋಧನೆಯಲ್ಲಿ ತೊಡಗಿಸಿಕೊಳ್ಳಲು ಪ್ರೋತ್ಸಾಹಿಸುತ್ತಿವೆ ಎಂದು ತಿಳಿಸಿದರು.

ವಿಶ್ವದರ್ಜೆಯ ವೈಜ್ಞಾನಿಕ ಸೌಲಭ್ಯಗಳು ಬೆಂಗಳೂರು, ಮೈಸೂರು ಸೇರಿದಂತೆ ಪ್ರಮುಖ ನಗರಗಳಿಗೆ ಮಾತ್ರ ಸೀಮಿತವಾಗಬಾರದು. ರಾಜ್ಯದ ಗ್ರಾಮೀಣ ಹಾಗೂ ಹಿಂದುಳಿದ ಪ್ರದೇಶಗಳ ಮಕ್ಕಳಿಗೂ ಇಂತಹ ಅವಕಾಶಗಳು ದೊರೆಯಬೇಕು ಎಂದು ಪ್ರತಿಪಾದಿಸಿದರು.

ಒಬ್ಬ ವಿದ್ಯಾರ್ಥಿ ಬಾಹ್ಯಾಕಾಶ ವಿಜ್ಞಾನದಲ್ಲಿ ಸಾಧನೆ ಮಾಡುವ ಅವಕಾಶವು ಆತ ಬೆಂಗಳೂರಿನಲ್ಲಿ ಜನಿಸಿದ್ದಾನೆಯೇ ಅಥವಾ ದೂರದ ಹಳ್ಳಿಯಲ್ಲಿ ಜನಿಸಿದ್ದಾನೆಯೇ ಎಂಬುದರ ಮೇಲೆ ಅವಲಂಬಿತವಾಗಿರಬಾರದು. ಪ್ರತಿಯೊಬ್ಬ ಮಗುವಿಗೂ ಸಮಾನ ಅವಕಾಶಗಳು ದೊರೆಯುವಂತೆ ವೈಜ್ಞಾನಿಕ ಮೂಲಸೌಕರ್ಯಗಳನ್ನು ವಿಕೇಂದ್ರೀಕರಿಸಬೇಕು ಎಂದು ಹೇಳಿದರು.

ಈ ಹಿನ್ನೆಲೆಯಲ್ಲಿ ಉತ್ತರ ಕರ್ನಾಟಕ ಭಾಗದಲ್ಲಿಯೂ ಮಾದರಿಯ ಅತ್ಯಾಧುನಿಕ ತಾರಾಲಯ ಸ್ಥಾಪಿಸುವ ಸಾಧ್ಯತೆಗಳನ್ನು ಪರಿಶೀಲಿಸುವಂತೆ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಗೆ ಸೂಚಿಸಿರುವುದಾಗಿ ತಿಳಿಸಿದರು.

ರಾಜ್ಯ ಸರ್ಕಾರದ ಮೊಬೈಲ್ ಡಿಜಿಟಲ್ ತಾರಾಲಯ ಯೋಜನೆಯ ಮೂಲಕ ಈಗಾಗಲೇ 19.21 ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳು ಹಾಗೂ ಶಿಕ್ಷಕರಿಗೆ ತಮ್ಮ ಶಾಲೆಗಳಲ್ಲಿಯೇ ಬಾಹ್ಯಾಕಾಶ ವಿಜ್ಞಾನದ ಕುರಿತು ತಿಳಿದುಕೊಳ್ಳುವ ಅವಕಾಶ ಕಲ್ಪಿಸಲಾಗಿದೆ. ಇಂತಹ ಕಾರ್ಯಕ್ರಮಗಳು ಗ್ರಾಮೀಣ ವಿದ್ಯಾರ್ಥಿಗಳಲ್ಲಿ ವಿಜ್ಞಾನದ ಬಗ್ಗೆ ಆಸಕ್ತಿ ಹೆಚ್ಚಿಸಲು ಸಹಕಾರಿಯಾಗಿವೆ ಎಂದು ವಿವರಿಸಿದರು.

ಕರ್ನಾಟಕ ಬಾಹ್ಯಾಕಾಶ ತಂತ್ರಜ್ಞಾನ ನೀತಿ 202530ರ ಕುರಿತು ಪ್ರಸ್ತಾಪಿಸಿದ ಅವರು, ಬಾಹ್ಯಾಕಾಶ ಕ್ಷೇತ್ರದ ನವೋದ್ಯಮಗಳಿಗೆ ಉತ್ತೇಜನ ನೀಡುವುದು, ಸಂಶೋಧನಾ ಚಟುವಟಿಕೆಗಳನ್ನು ಬಲಪಡಿಸುವುದು, ಕೌಶಲ್ಯಪೂರ್ಣ ಮಾನವ ಸಂಪನ್ಮೂಲ ಅಭಿವೃದ್ಧಿಪಡಿಸುವುದು ಹಾಗೂ ಕೈಗಾರಿಕೆ ಮತ್ತು ಶಿಕ್ಷಣ ಸಂಸ್ಥೆಗಳ ನಡುವೆ ಸಹಯೋಗ ಹೆಚ್ಚಿಸುವುದು ಈ ನೀತಿಯ ಪ್ರಮುಖ ಉದ್ದೇಶವಾಗಿದೆ ಎಂದು ಹೇಳಿದರು.

ರಾಜ್ಯದ ನೀರಾವರಿ ಯೋಜನೆಗಳಿಗೆ ಅನುಮತಿ, ಪರಿಸರ ಸಂಬಂಧಿತ ಸಮಸ್ಯೆಗಳ ಪರಿಹಾರ, ಸರ್ಕಾರಿ ಶಿಕ್ಷಣ ವ್ಯವಸ್ಥೆಯ ಬಲವರ್ಧನೆ ಹಾಗೂ ವೈಜ್ಞಾನಿಕ ಮೂಲಸೌಕರ್ಯಗಳ ವಿಸ್ತರಣೆಗೆ ಕೇಂದ್ರ ಸರ್ಕಾರ ಸಕಾರಾತ್ಮಕವಾಗಿ ಸ್ಪಂದಿಸಬೇಕು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮನವಿ ಮಾಡಿದರು.

ಕಾಲುವೆಗಳಿಗೆ ನೀರು ಹರಿಸಲು ಆಗ್ರಹಿಸಿ ನ.15ರಿಂದ ರೈತರ ಪಾದಯಾತ್ರೆ: ಕೆ. ಮಸ್ತಾನ ನಾಯಕ್ ಪೂಜಾರಿ

ಕೈಗೊಳ್ಳಲಾಗಿರುವ ಈ ಪಾದಯಾತ್ರೆಗೆ ವಿವಿಧ ಮಠಗಳ ಮಠಾಧೀಶರು, ಪಕ್ಷಾತೀತ ರಾಜಕೀಯ ಮುಖಂಡರು, ರೈತಪರ ಸಂಘಟನೆಗಳು ಹಾಗೂ ಸಾಮಾಜಿಕ ಸಂಘಟನೆಗಳು ಬೆಂಬಲ ವ್ಯಕ್ತಪಡಿಸಿವೆ. ಯಾವುದೇ ರಾಜಕೀಯ ಉದ್ದೇಶವಿಲ್ಲದೆ ಕೃಷಿ ಮತ್ತು ರೈತರ ಬದುಕು ಉಳಿಸುವ ಏಕೈಕ ಗುರಿಯೊಂದಿಗೆ ಹೋರಾಟ ಹಮ್ಮಿಕೊಳ್ಳಲಾಗಿದೆ ಎಂದು ಸ್ಪಷ್ಟಪಡಿಸಿದರು.

ನವೆಂಬರ್ 15ರಂದು ಗಬ್ಬೂರಿನ ಶ್ರೀಮಠದಿಂದ ಪಾದಯಾತ್ರೆಗೆ ಚಾಲನೆ ನೀಡಲಾಗುವುದು. ಮೊದಲ ದಿನ ಮೊಸರಕಲ್ಲಿನಲ್ಲಿ ರಾತ್ರಿ ವಾಸ್ತವ್ಯ ಮಾಡಲಾಗುವುದು. ನವೆಂಬರ್ 16ರಂದು ಅಮರಾಪುರ ಕ್ರಾಸ್, 17ರಂದು ತಿಂತಿಣಿ ಬ್ರಿಜ್‌ನ ಕನಕ ಗುರುಪೀಠ, 18ರಂದು ಬೆಲಸೆಟ್ಟಿಹಾಳ ಹಾಗೂ 19ರಂದು ಜೋಗುಂಡ ಬಾವಿಯಲ್ಲಿ ವಾಸ್ತವ್ಯ ಹೂಡಲಾಗುವುದು. ಮಾರ್ಗಮಧ್ಯೆ ವಿವಿಧ ಗ್ರಾಮಗಳ ರೈತರನ್ನು ಭೇಟಿ ಮಾಡಿ ನೀರಾವರಿ ಸಮಸ್ಯೆಗಳ ಕುರಿತು ಜಾಗೃತಿ ಮೂಡಿಸಲಾಗುವುದು ಎಂದು ತಿಳಿಸಿದರು.

ನವೆಂಬರ್ 20ರಂದು ಪಾದಯಾತ್ರೆ ನಾರಾಯಣಪುರ ಜಲಾಶಯ ತಲುಪಲಿದ್ದು, ಅಲ್ಲಿ ರೈತರ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ. ಕಾಲುವೆಗಳಿಗೆ ನೀರು ಬಿಡುಗಡೆ ಮಾಡುವ ಮೂಲಕ ಬೆಳೆಗಳನ್ನು ರಕ್ಷಿಸಲು ಸರ್ಕಾರ ಹಾಗೂ ನೀರಾವರಿ ಇಲಾಖೆ ತುರ್ತು ಕ್ರಮ ಕೈಗೊಳ್ಳಬೇಕು ಎಂಬುದು ಹೋರಾಟದ ಪ್ರಮುಖ ಬೇಡಿಕೆಯಾಗಿದೆ ಎಂದರು.

ರೈತರು ಬೆಳೆದ ಬೆಳೆಗಳು ನೀರಿನ ಅಭಾವದಿಂದ ನಾಶವಾದರೆ ಅವರ ಕುಟುಂಬಗಳ ಜೀವನೋಪಾಯಕ್ಕೆ ಗಂಭೀರ ಹೊಡೆತ ಬೀಳಲಿದೆ. ಆದ್ದರಿಂದ ರೈತರ ಸಂಕಷ್ಟವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು. ಕೃಷಿಕರು ತಮ್ಮ ಹಕ್ಕುಗಳಿಗಾಗಿ ನಡೆಯುವ ಈ ಹೋರಾಟದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಒಗ್ಗಟ್ಟು ಪ್ರದರ್ಶಿಸಬೇಕು ಎಂದು ಕೆ. ಮಸ್ತಾನ ನಾಯಕ್ ಪೂಜಾರಿ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಡಿ. ಸತ್ಯರೆಡ್ಡಿ, ಸಂಗಮೇಶ್, ಆಂಜನೇಯ ಶಾಸ್ತ್ರಿ, ಬಸವನಾಯಕ್ ಸೇರಿದಂತೆ ವಿವಿಧ ರೈತ ಮುಖಂಡರು ಉಪಸ್ಥಿತರಿದ್ದರು.

ಆಶಾ ಕಾರ್ಯಕರ್ತೆಯರಿಗೆ ₹15 ಸಾವಿರ ಗೌರವಧನಕ್ಕೆ ಆಗ್ರಹ: ನ.17ರಿಂದ ಬೆಂಗಳೂರಿನಲ್ಲಿ ಅನಿರ್ದಿಷ್ಟ ಹೋರಾಟ

ಈಡೇರಿಲ್ಲ ಎಂದು ಆರೋಪಿಸಿದರು.

ಮಹಿಳೆಯರಿಗೆ ನೀಡುವ ಗ್ಯಾರಂಟಿ ಯೋಜನೆಯ ಹಣವನ್ನು ಆಶಾ ಕಾರ್ಯಕರ್ತೆಯರ ಗೌರವಧನದೊಂದಿಗೆ ಹೋಲಿಸುವುದು ಸರಿಯಲ್ಲ. ಗ್ಯಾರಂಟಿ ಸೌಲಭ್ಯಕ್ಕೂ ಆಶಾ ಕಾರ್ಯಕರ್ತೆಯರ ದುಡಿಮೆಯ ಪ್ರತಿಫಲಕ್ಕೂ ಸಂಬಂಧವಿಲ್ಲ. ಅವರ ಸೇವೆಗೆ ತಕ್ಕ ಗೌರವಧನ ನೀಡುವುದು ಸರ್ಕಾರದ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಸಮಸ್ತ ಆ್ಯಪ್ ಮೂಲಕ ಕಡ್ಡಾಯವಾಗಿ ಮೊಬೈಲ್ ಕೆಲಸ ಮಾಡಿಸುವುದನ್ನು ಕೈಬಿಡಬೇಕು ಅಥವಾ ಮೊಬೈಲ್ ಹಾಗೂ ಹೆಚ್ಚುವರಿ ಪ್ರೋತ್ಸಾಹಧನ ನೀಡಬೇಕು. ಬಾಕಿ ಇರುವ ಕೇಂದ್ರದ ಪ್ರೋತ್ಸಾಹಧನ ಮತ್ತು ನಿವೃತ್ತಿ ಇಡಿಗಂಟು ಪಾವತಿಸಬೇಕು. ಆಶಾ ಸುಗಮಕಾರರ ಸೇವೆಯನ್ನು ಸೂಕ್ತ ವೇತನದೊಂದಿಗೆ ಮುಂದುವರಿಸಬೇಕು. 202425ನೇ ಸಾಲಿನ ಮಾಸಿಕ ₹1,500 ಹೆಚ್ಚಳದ ಬಾಕಿ ಹಣ ಬಿಡುಗಡೆಗೊಳಿಸಬೇಕು. ನಿವೃತ್ತಿ ಸೌಲಭ್ಯವನ್ನು ₹5 ಲಕ್ಷಕ್ಕೆ ಹೆಚ್ಚಿಸಬೇಕು ಎಂದು ಆಗ್ರಹಿಸಿದರು.

ಸರ್ಕಾರ ನಿರಂತರವಾಗಿ ನೀಡುತ್ತಿರುವ ಭರವಸೆಗಳು ಈಡೇರದ ಹಿನ್ನೆಲೆಯಲ್ಲಿ ಅನಿರ್ದಿಷ್ಟ ಹೋರಾಟ ಅನಿವಾರ್ಯವಾಗಿದೆ. ರಾಜ್ಯದ ಆಶಾ ಕಾರ್ಯಕರ್ತೆಯರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಹೋರಾಟ ಯಶಸ್ವಿಗೊಳಿಸಬೇಕು. ಸಾರ್ವಜನಿಕರೂ ಬೆಂಬಲ ನೀಡಬೇಕು ಎಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಆಶಾ ಸಂಘಟನೆಯ ಜಿಲ್ಲಾಧ್ಯಕ್ಷೆ ಗೌರಮ್ಮ, ಜಿಲ್ಲಾ ಕಾರ್ಯದರ್ಶಿ ಶೋಭಾ, ಎಐಯುಟಿಯುಸಿ ಜಿಲ್ಲಾ ಕಾರ್ಯದರ್ಶಿ ಮಹೇಶ್, ಅಣ್ಣಪ್ಪ ಶಿರಶ್ಯಾಡ್ ಹಾಗೂ ನಗರ ಕಾರ್ಯದರ್ಶಿ ವಿಮಲಾ ಉಪಸ್ಥಿತರಿದ್ದರು.

ಶರಣರ ಚಿಂತನೆಗಳಿಂದ ಮನಸ್ಸಿನ ಮಲಿನತೆ ದೂರವಾಗಿ ಬದುಕಿಗೆ ಹೊಸ ದಾರಿ: ವೀರಹನುಮಾನ



ರಾಯಚೂರು: ಶರಣರ ವೈಚಾರಿಕ ಚಿಂತನೆಗಳು, ವಚನ ಸಾಹಿತ್ಯ ಹಾಗೂ ಮಾನವೀಯ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದರಿಂದ ಮನಸ್ಸಿನ ಮಲಿನತೆ ದೂರವಾಗಿ ಬದುಕಿಗೆ ಹೊಸ ದಿಕ್ಕು ದೊರೆಯುತ್ತದೆ. ಸಮಾಜದಲ್ಲಿ ನೈತಿಕತೆ, ಸಮಾನತೆ ಹಾಗೂ ಮಾನವೀಯ ಸಂಬಂಧಗಳನ್ನು ಗಟ್ಟಿಗೊಳಿಸಲು ಶರಣರ ತತ್ವಾದರ್ಶಗಳು ಇಂದಿಗೂ ಪ್ರಸ್ತುತವಾಗಿವೆ ಎಂದು ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಸಾಹಿತಿ ವೀರಹನುಮಾನ್ ರಾಯಚೂರು ಅಭಿಪ್ರಾಯಪಟ್ಟರು.

ನಗರದ ಮಾರುತಿ ನಗರ ಬಡಾವಣೆಯ ಶ್ರೀ ಗಿರಿ ಅಭಯಾಂಜನೇಯ ಸ್ವಾಮಿ ಸೇವಾ ಸಮಿತಿ ವತಿಯಿಂದ ಅಮಾವಾಸ್ಯೆ ಪ್ರಯುಕ್ತ ಆಯೋಜಿಸಿದ್ದ 60ನೇ ಶರಣ ಚಿಂತನ ಶಿವಾನುಭವ ಗೋಷ್ಠಿ ಹಾಗೂ ಅಕ್ಕ ನಾಗಲಾಂಬಿಕೆ ನಾಟಕ ಪ್ರದರ್ಶನದ ಉದ್ಘಾಟನಾ ಸಮಾರಂಭದಲ್ಲಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

12ನೇ ಶತಮಾನದಲ್ಲಿ ಜಾತಿ, ವರ್ಗ ಹಾಗೂ ಸಾಮಾಜಿಕ ಅಸಮಾನತೆಗಳಿಂದ ಮನುಷ್ಯನನ್ನು ಮನುಷ್ಯನಾಗಿ ಕಾಣದ ಪರಿಸ್ಥಿತಿ ನಿರ್ಮಾಣವಾಗಿತ್ತು. ಅಂತಹ ಕಾಲಘಟ್ಟದಲ್ಲಿ ಜಗಜ್ಯೋತಿ ಬಸವಣ್ಣನವರು ಸಮಾನತೆ, ಕಾಯಕ ಮತ್ತು ದಾಸೋಹದ ಸಂದೇಶ ಸಾರುವ ಮೂಲಕ ಮಾನವೀಯ ಸಮಾಜ ನಿರ್ಮಾಣಕ್ಕೆ ಶ್ರಮಿಸಿದರು. ಪ್ರತಿಯೊಬ್ಬ ವ್ಯಕ್ತಿಯೂ ಗೌರವಯುತವಾಗಿ ಬದುಕಬೇಕು ಎಂಬ ತತ್ವವನ್ನು ಪ್ರತಿಪಾದಿಸಿ ಸಾಮಾಜಿಕ ಪರಿವರ್ತನೆಗೆ ನಾಂದಿ ಹಾಡಿದರು ಎಂದು ಹೇಳಿದರು.

ಬಟ್ಟೆ ಕೊಳೆಯಾದರೆ ಮಡಿವಾಳ ಅದನ್ನು ಸ್ವಚ್ಛಗೊಳಿಸುತ್ತಾನೆ. ಆದರೆ ಮನಸ್ಸು ಮಲಿನಗೊಂಡಾಗ ಅದನ್ನು ಶುದ್ಧೀಕರಿಸುವುದು ಹೇಗೆ ಎಂಬ ಪ್ರಶ್ನೆಗೆ ಶರಣರ ವಚನಗಳು ಹಾಗೂ ವೈಚಾರಿಕ ಚಿಂತನೆಗಳಲ್ಲಿ ಉತ್ತರ ದೊರೆಯುತ್ತದೆ. ಇಂತಹ ಶರಣ ಚಿಂತನ ಗೋಷ್ಠಿಗಳು ಮನುಷ್ಯನ ಆಲೋಚನೆಗಳನ್ನು ಪರಿಷ್ಕರಿಸಿ ಸನ್ಮಾರ್ಗದಲ್ಲಿ ನಡೆಯಲು ಪ್ರೇರಣೆ ನೀಡುತ್ತವೆ ಎಂದು ತಿಳಿಸಿದರು.

ಶ್ರೀ ಗಿರಿ ಅಭಯಾಂಜನೇಯ ಸ್ವಾಮಿ ದೇವಸ್ಥಾನದ ಆವರಣದಲ್ಲಿ ನಿರಂತರವಾಗಿ ನಡೆಯುತ್ತಿರುವ ಶಿವಾನುಭವ ಗೋಷ್ಠಿಗಳು ಜನರಿಗೆ ಮಾನಸಿಕ ನೆಮ್ಮದಿ ನೀಡುವುದರ ಜೊತೆಗೆ ಜೀವನದ ಉದ್ದೇಶವನ್ನು ಅರಿಯುವ ಅವಕಾಶ ಕಲ್ಪಿಸುತ್ತಿವೆ. ನಗರದ ಜನರನ್ನು ಒಂದೆಡೆ ಸೇರಿಸಿ ಶರಣರ ತತ್ವಗಳನ್ನು ಪರಿಚಯಿಸುವ ಮೂಲಕ ನೈತಿಕ ಬದುಕಿನ ಮಹತ್ವವನ್ನು ತಿಳಿಸಿಕೊಡುತ್ತಿರುವುದು ಶ್ಲಾಘನೀಯ ಕಾರ್ಯವಾಗಿದೆ ಎಂದರು.

12ನೇ ಶತಮಾನದ ಅನುಭವ ಮಂಟಪವು ಸಮಾನತೆ ಮತ್ತು ವಿಚಾರ ವಿನಿಮಯಕ್ಕೆ ವೇದಿಕೆಯಾಗಿತ್ತು. ವಿವಿಧ ಕಾಯಕಗಳಲ್ಲಿ ತೊಡಗಿದ್ದ ಶರಣರು ಒಂದೆಡೆ ಸೇರಿ ಸಾಮಾಜಿಕ ಸಮಸ್ಯೆಗಳು, ಮಾನವೀಯ ಮೌಲ್ಯಗಳು ಹಾಗೂ ಜೀವನದ ಕುರಿತು ಚರ್ಚಿಸುತ್ತಿದ್ದರು. ಆ ಚಿಂತನೆಗಳು ಇಂದಿನ ಸಂವಿಧಾನದ ಸಮಾನತೆ ಮತ್ತು ಸಾಮಾಜಿಕ ನ್ಯಾಯದ ಆಶಯಗಳಿಗೂ ಪೂರಕವಾಗಿವೆ ಎಂದು ಅಭಿಪ್ರಾಯಪಟ್ಟರು.

ಇಂದಿನ ಕುಟುಂಬಗಳಲ್ಲಿ ಹಿರಿಯರು ಮತ್ತು ಕಿರಿಯರ ನಡುವೆ ಸಂವಾದ ಕಡಿಮೆಯಾಗುತ್ತಿರುವುದು ಕಳವಳಕಾರಿ ಸಂಗತಿಯಾಗಿದೆ. ಕುಟುಂಬ ಸದಸ್ಯರು ಪರಸ್ಪರ ವಿಚಾರ ವಿನಿಮಯ ಮಾಡಿಕೊಂಡರೆ ಅನೇಕ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬಹುದು. ದೂರದರ್ಶನದ ಕೆಲವು ಧಾರಾವಾಹಿಗಳಲ್ಲಿ ಬಿಂಬಿಸುವ ಕೌಟುಂಬಿಕ ಕಲಹಗಳು ಮತ್ತು ನಕಾರಾತ್ಮಕ ವಿಚಾರಗಳಿಂದ ಪ್ರಭಾವಿತರಾಗದೆ, ಉತ್ತಮ ಸಾಹಿತ್ಯ, ಶರಣರ ಚಿಂತನೆ ಹಾಗೂ ಮೌಲ್ಯಾಧಾರಿತ ಕಾರ್ಯಕ್ರಮಗಳತ್ತ ಗಮನಹರಿಸಬೇಕು ಎಂದು ಸಲಹೆ ನೀಡಿದರು.

ಶಿವಾನುಭವ ಗೋಷ್ಠಿಗಳಲ್ಲಿ ಕೇಳುವ ಉಪನ್ಯಾಸಗಳನ್ನು ಕೇವಲ ಆಲಿಸುವುದಕ್ಕೆ ಸೀಮಿತಗೊಳಿಸದೆ, ಅವುಗಳಲ್ಲಿ ಅಡಕವಾಗಿರುವ ಉತ್ತಮ ವಿಚಾರಗಳನ್ನು ದೈನಂದಿನ ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಇಂತಹ ಕಾರ್ಯಕ್ರಮಗಳ ಉದ್ದೇಶ ಸಾರ್ಥಕವಾಗುತ್ತದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದ ಹಿರಿಯ ಸಾಹಿತಿ ಅಯ್ಯಪ್ಪಯ್ಯ ಹುಡಾ, ಮಾನವ ಜನ್ಮ ಅತ್ಯಂತ ಅಮೂಲ್ಯವಾದದ್ದು. ಬದುಕನ್ನು ಸ್ವಾರ್ಥಕ್ಕಾಗಿ ವ್ಯರ್ಥ ಮಾಡದೆ ಸಮಾಜದ ಒಳಿತಿಗಾಗಿ ಬಳಸಿಕೊಳ್ಳಬೇಕು. ಬಡವರು, ದೀನದಲಿತರು ಹಾಗೂ ಸಂಕಷ್ಟದಲ್ಲಿರುವ ಜನರಿಗೆ ನೆರವಾಗುವುದರಲ್ಲಿ ದೊರೆಯುವ ಆತ್ಮತೃಪ್ತಿ ಬೇರೆ ಯಾವುದರಲ್ಲಿಯೂ ಸಿಗುವುದಿಲ್ಲ. ಪರೋಪಕಾರ ಮತ್ತು ಮಾನವೀಯ ಸೇವೆಯೇ ಜೀವನದ ನಿಜವಾದ ಸಾರ್ಥಕತೆ ಎಂದು ತಿಳಿಸಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ರವೀಂದ್ರ ಜಲ್ದಾರ್ ಮಾತನಾಡಿ, ಕಳೆದ 60 ತಿಂಗಳುಗಳಿಂದ ನಿರಂತರವಾಗಿ ಶರಣ ಚಿಂತನ ಗೋಷ್ಠಿಗಳನ್ನು ಆಯೋಜಿಸುತ್ತಿರುವ ಶ್ರೀ ಗಿರಿ ಅಭಯಾಂಜನೇಯ ಸ್ವಾಮಿ ಸೇವಾ ಸಮಿತಿಯ ಕಾರ್ಯ ಶ್ಲಾಘನೀಯವಾಗಿದೆ. ಶರಣರ ಕಾಯಕ ಮತ್ತು ದಾಸೋಹ ತತ್ವಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ದುಡಿಮೆಯಿಂದ ಗಳಿಸಿದ ಆದಾಯದಲ್ಲಿ ಒಂದು ಭಾಗವನ್ನು ಸಮಾಜದ ಒಳಿತಿಗೆ ಮೀಸಲಿಟ್ಟು ಸಂಕಷ್ಟದಲ್ಲಿರುವವರಿಗೆ ಸಹಾಯ ಮಾಡಬೇಕು. ಇಂತಹ ಸೇವಾ ಮನೋಭಾವದಿಂದ ಸಮಾಜದಲ್ಲಿ ಸೌಹಾರ್ದತೆ ಹಾಗೂ ಮಾನವೀಯ ಸಂಬಂಧಗಳು ವೃದ್ಧಿಯಾಗುತ್ತವೆ ಎಂದು ಅಭಿಪ್ರಾಯಪಟ್ಟರು.

ಪ್ರಾಸ್ತಾವಿಕವಾಗಿ ಮಾತನಾಡಿದ ಸೇವಾ ಸಮಿತಿ ಅಧ್ಯಕ್ಷ ಬಿ. ಬಸವರಾಜ್, ಕಳೆದ 59 ತಿಂಗಳುಗಳಿಂದ ಪ್ರತೀ ಅಮಾವಾಸ್ಯೆಯಂದು ಶರಣ ಚಿಂತನ ಗೋಷ್ಠಿ ಹಾಗೂ ಅನ್ನದಾಸೋಹ ಕಾರ್ಯಕ್ರಮಗಳನ್ನು ನಿರಂತರವಾಗಿ ನಡೆಸಿಕೊಂಡು ಬರಲಾಗುತ್ತಿದೆ. ವಿವಿಧ ಮಠಗಳ ಸ್ವಾಮೀಜಿಗಳು, ಹಿರಿಯ ಸಾಹಿತಿಗಳು ಹಾಗೂ ಉಪನ್ಯಾಸಕರನ್ನು ಆಹ್ವಾನಿಸಿ ಜನರಲ್ಲಿ ಶರಣರ ತತ್ವಗಳ ಕುರಿತು ಜಾಗೃತಿ ಮೂಡಿಸುವ ಪ್ರಯತ್ನ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಸಮಿತಿಯ ವತಿಯಿಂದ ಅನುಭವ ಮಂಟಪದ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗಿದ್ದು, ಮುಂದಿನ ದಿನಗಳಲ್ಲಿ ನಾಟಕ, ಸಂಗೀತ, ಸಾಹಿತ್ಯ, ಶರಣ ಚಿಂತನೆ ಹಾಗೂ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಈ ಮಂಟಪವನ್ನು ಬಳಸಿಕೊಳ್ಳುವ ಉದ್ದೇಶವಿದೆ. ಪ್ರಸಕ್ತ ವರ್ಷ ಅಭಯಾಂತರಂಗ ಕೃತಿಯನ್ನು ಪ್ರಕಟಿಸಿ ಎರಡು ಸಾವಿರ ಪ್ರತಿಗಳನ್ನು ಮುದ್ರಿಸಿ ಮಾರಾಟ ಮಾಡುವ ಮೂಲಕ ಸಂಗ್ರಹವಾಗುವ ಹಣವನ್ನು ಅನುಭವ ಮಂಟಪದ ಅಭಿವೃದ್ಧಿಗೆ ವಿನಿಯೋಗಿಸಲಾಗುವುದು ಎಂದು ವಿವರಿಸಿದರು.

ಶರಣರು ಹಾಗೂ ಸಂತರ ಜೀವನ ಸಂದೇಶಗಳನ್ನು ರಾಯಚೂರು ನಗರದ ಪ್ರತಿಯೊಂದು ಮನೆಗೂ ತಲುಪಿಸುವ ಗುರಿ ಹೊಂದಲಾಗಿದೆ. ಸೂರ್ಯೋದಯ ವಾಕಿಂಗ್ ಕ್ಲಬ್, ಮಾರುತಿ ನಗರದ ನಿವಾಸಿಗಳು ಹಾಗೂ ನಗರದ ನಾಗರಿಕರ ಸಹಕಾರದಿಂದ ಇಂತಹ ಧಾರ್ಮಿಕ, ಸಾಹಿತ್ಯಿಕ ಮತ್ತು ಸಾಮಾಜಿಕ ಕಾರ್ಯಕ್ರಮಗಳನ್ನು ನಿರಂತರವಾಗಿ ಆಯೋಜಿಸಲು ಸಾಧ್ಯವಾಗಿದೆ ಎಂದು ಬಸವರಾಜ್ ಹೇಳಿದರು.


ಇದೇ ಸಂದರ್ಭದಲ್ಲಿ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಸಾಹಿತಿ ವೀರಹನುಮಾನ್ ರಾಯಚೂರು, ಹಿರಿಯ ಸಾಹಿತಿ ಅಯ್ಯಪ್ಪಯ್ಯ ಹುಡಾ ಹಾಗೂ ಶಿಕ್ಷಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ವೇದಾಂತ ಕಾಲೇಜಿನ ರಾಕೇಶ ರಾಜಲಬಂಡಿ ಅವರನ್ನು ಸಮಿತಿ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು. ಅಮಾವಾಸ್ಯೆ ಅನ್ನದಾಸೋಹ ಕಾರ್ಯಕ್ರಮಕ್ಕೆ ಸಹಕಾರ ನೀಡಿದ ದಾನಿಗಳನ್ನೂ ಸತ್ಕರಿಸಲಾಯಿತು.

ವೇದಿಕೆಯಲ್ಲಿ ಕರ್ನಾಟಕ ರಾಜ್ಯ ರೈತ ಸಂಘದ ಗೌರವಾಧ್ಯಕ್ಷ ಚಾಮರಸ ಮಾಲಿಪಾಟೀಲ್, ಶಿಲ್ಪಾ ಮೆಡಿಕೇರ್‌ನ ಮುಖ್ಯ ಲೆಕ್ಕಾಧಿಕಾರಿ ಪ್ರಹ್ಲಾದ್ ರಾವ್, ರಾಯಚೂರು ಅಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಬಿ. ಗೋವಿಂದು, ಬಿಜೆಪಿ ಯುವ ಮುಖಂಡ ಯು. ನರಸರೆಡ್ಡಿ, ಸೀತಾ ನಾಯಕ್ ಹಾಗೂ ಅನ್ನದಾಸೋಹ ಸಂಯೋಜಕ ಸದಾಶಿವಪ್ಪ ಉಪಸ್ಥಿತರಿದ್ದರು.

ಕಾರ್ಯಕ್ರಮದ ಆರಂಭದಲ್ಲಿ ಕೆ. ಕರಿಯಪ್ಪ ಪ್ರಾರ್ಥಿಸಿದರು. ಮರಿಲಿಂಗಪ್ಪ ಮಡಿವಾಳ ಸ್ವಾಗತಿಸಿದರು. ಸುರೇಶ ನಿರೂಪಿಸಿದರು. ನರಸಿಂಹಲು ಉಪ್ರಾಳ ವಂದಿಸಿದರು. ಸೂರ್ಯೋದಯ ವಾಕಿಂಗ್ ಕ್ಲಬ್, ಶ್ರೀ ಗಿರಿ ಅಭಯಾಂಜನೇಯ ಸ್ವಾಮಿ ಸೇವಾ ಸಮಿತಿ, ಮಹಿಳಾ ಮಂಡಳಿ ಹಾಗೂ ಯುವ ಗಜಾನನ ಸಮಿತಿಯ ಪದಾಧಿಕಾರಿಗಳು ಮತ್ತು ಸದಸ್ಯರು ಭಾಗವಹಿಸಿದ್ದರು.

ಕಾರ್ಯಕ್ರಮದ ಕೊನೆಯಲ್ಲಿ ಸಿರಿಗೆರೆಯ ಧಾತ್ರಿ ರಂಗ ಸಂಸ್ಥೆಯ ಕಲಾವಿದರಿಂದ ಅಕ್ಕ ನಾಗಲಾಂಬಿಕೆ ನಾಟಕ ಪ್ರದರ್ಶನ ನಡೆಯಿತು. ಶರಣ ಪರಂಪರೆ ಹಾಗೂ ಮಾನವೀಯ ಮೌಲ್ಯಗಳನ್ನು ಬಿಂಬಿಸಿದ ನಾಟಕವು ನೂರಾರು ಪ್ರೇಕ್ಷಕರ ಮೆಚ್ಚುಗೆಗೆ ಪಾತ್ರವಾಯಿತು.

ಬೃಹತ್ ಮೊಬೈಲ್ ಶೋರೂಮ್ ಸ್ಥಾಪನೆಗೆ ವಿರೋಧ: ಸಣ್ಣ ವ್ಯಾಪಾರಿಗಳಿಂದ ಅಧಿಕಾರಿಗಳಿಗೆ ಮನವಿ



ದೇವದುರ್ಗ: ಪಟ್ಟಣದಲ್ಲಿ ಪೂಜಾರ್ ಮೊಬೈಲ್ ಹೆಸರಿನಲ್ಲಿ ಬೃಹತ್ ಮೊಬೈಲ್ ಶೋರೂಮ್ ಅಥವಾ ಫ್ರಾಂಚೈಸಿ ಆರಂಭಿಸುವ ಪ್ರಸ್ತಾವನೆಗೆ ಸ್ಥಳೀಯ ಸಣ್ಣ ಹಾಗೂ ಮಧ್ಯಮ ಮೊಬೈಲ್ ವ್ಯಾಪಾರಿಗಳು ವಿರೋಧ ವ್ಯಕ್ತಪಡಿಸಿದ್ದು, ಹೊಸ ಶೋರೂಮ್ ಸ್ಥಾಪನೆಗೆ ಅನುಮತಿ ನೀಡದಂತೆ ಒತ್ತಾಯಿಸಿ ಶುಕ್ರವಾರ ತಹಶೀಲ್ದಾರ್ ಹಾಗೂ ಪುರಸಭೆ ಮುಖ್ಯಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಪಟ್ಟಣದ ಸಣ್ಣ ಮತ್ತು ಮಧ್ಯಮ ಮೊಬೈಲ್ ವ್ಯಾಪಾರಿಗಳ ಸಂಘದ ನೇತೃತ್ವದಲ್ಲಿ ಮನವಿ ಸಲ್ಲಿಸಿದ ವ್ಯಾಪಾರಿಗಳು, ಈಗಾಗಲೇ ದೇವದುರ್ಗ ಪಟ್ಟಣದಲ್ಲಿ 50ಕ್ಕೂ ಹೆಚ್ಚು ಮೊಬೈಲ್ ಮಾರಾಟ ಮತ್ತು ದುರಸ್ತಿ ಅಂಗಡಿಗಳು ಕಾರ್ಯನಿರ್ವಹಿಸುತ್ತಿವೆ. ಈ ಅಂಗಡಿಗಳ ಮೂಲಕ ನೂರಾರು ಜನರು ನೇರವಾಗಿ ಹಾಗೂ ಪರೋಕ್ಷವಾಗಿ ಉದ್ಯೋಗ ಪಡೆದುಕೊಂಡಿದ್ದು, ಅನೇಕ ಕುಟುಂಬಗಳು ಇದೇ ವ್ಯಾಪಾರವನ್ನು ನಂಬಿಕೊಂಡು ಜೀವನ ಸಾಗಿಸುತ್ತಿವೆ ಎಂದು ತಿಳಿಸಿದರು.

ಪ್ರಸ್ತುತ ಮಾರುಕಟ್ಟೆಯಲ್ಲಿ ಸಣ್ಣ ಮೊಬೈಲ್ ವ್ಯಾಪಾರಿಗಳು ಹಲವು ಆರ್ಥಿಕ ಸವಾಲುಗಳನ್ನು ಎದುರಿಸುತ್ತಿದ್ದಾರೆ. ಇಂತಹ ಪರಿಸ್ಥಿತಿಯಲ್ಲಿ ದೊಡ್ಡ ಪ್ರಮಾಣದ ಬಂಡವಾಳ ಹೊಂದಿರುವ ಮೊಬೈಲ್ ಶೋರೂಮ್ ಅಥವಾ ಫ್ರಾಂಚೈಸಿ ಆರಂಭವಾದರೆ ಸ್ಥಳೀಯ ವ್ಯಾಪಾರಿಗಳ ನಡುವೆ ಪೈಪೋಟಿ ಹೆಚ್ಚಾಗಿ ಸಣ್ಣ ಅಂಗಡಿಗಳ ವಹಿವಾಟಿನ ಮೇಲೆ ಪ್ರತಿಕೂಲ ಪರಿಣಾಮ ಬೀರುವ ಸಾಧ್ಯತೆಯಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಬೃಹತ್ ವಾಣಿಜ್ಯ ಮಳಿಗೆಗಳು ಹೆಚ್ಚಿನ ಬಂಡವಾಳ, ವ್ಯಾಪಕ ಉತ್ಪನ್ನಗಳ ಸಂಗ್ರಹ ಹಾಗೂ ವಿವಿಧ ಮಾರಾಟ ಸೌಲಭ್ಯಗಳನ್ನು ಹೊಂದಿರುವುದರಿಂದ ಸಣ್ಣ ವ್ಯಾಪಾರಿಗಳಿಗೆ ಗ್ರಾಹಕರನ್ನು ಉಳಿಸಿಕೊಳ್ಳುವುದು ಕಷ್ಟವಾಗಬಹುದು. ಇದರಿಂದ ವ್ಯಾಪಾರ ಕುಸಿದು, ಆದಾಯ ಕಡಿಮೆಯಾಗುವ ಸಾಧ್ಯತೆಯಿದೆ. ವಿಶೇಷವಾಗಿ ಮೊಬೈಲ್ ಮಾರಾಟ ಮತ್ತು ದುರಸ್ತಿ ವೃತ್ತಿಯನ್ನೇ ಅವಲಂಬಿಸಿರುವ 100ಕ್ಕೂ ಹೆಚ್ಚು ಕುಟುಂಬಗಳ ಜೀವನೋಪಾಯಕ್ಕೆ ತೊಂದರೆಯಾಗುವ ಭೀತಿ ಎದುರಾಗಿದೆ ಎಂದು ಮನವಿಯಲ್ಲಿ ವಿವರಿಸಿದರು.

ಸ್ಥಳೀಯವಾಗಿ ಹಲವು ವರ್ಷಗಳಿಂದ ಸಣ್ಣ ಪ್ರಮಾಣದಲ್ಲಿ ವ್ಯಾಪಾರ ನಡೆಸಿಕೊಂಡು ಬಂದಿರುವ ಅಂಗಡಿ ಮಾಲೀಕರ ಹಿತಾಸಕ್ತಿಯನ್ನು ಆಡಳಿತ ಪರಿಗಣಿಸಬೇಕು. ದೊಡ್ಡ ಉದ್ಯಮಗಳ ಆಗಮನದಿಂದ ಸಣ್ಣ ವ್ಯಾಪಾರಿಗಳು ಆರ್ಥಿಕ ಸಂಕಷ್ಟಕ್ಕೆ ಒಳಗಾಗದಂತೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ದೇವದುರ್ಗ ಪಟ್ಟಣದ ವ್ಯಾಪಾರ ವಲಯದಲ್ಲಿ ಸಣ್ಣ ಮತ್ತು ಮಧ್ಯಮ ಉದ್ಯಮಗಳ ಪಾತ್ರ ಮಹತ್ವದ್ದಾಗಿದ್ದು, ಅವುಗಳ ಅಸ್ತಿತ್ವ ಹಾಗೂ ವ್ಯಾಪಾರಿಗಳ ಕುಟುಂಬಗಳ ಆರ್ಥಿಕ ಭದ್ರತೆಯನ್ನು ಕಾಪಾಡುವ ಅಗತ್ಯವಿದೆ. ಈ ಹಿನ್ನೆಲೆಯಲ್ಲಿ ಪಟ್ಟಣದಲ್ಲಿ ಪೂಜಾರ್ ಮೊಬೈಲ್ ಫ್ರಾಂಚೈಸಿ ಸ್ಥಾಪನೆಗೆ ಅನುಮತಿ ನೀಡಬಾರದು ಎಂದು ತಹಶೀಲ್ದಾರ್ ಹಾಗೂ ಪುರಸಭೆ ಮುಖ್ಯಾಧಿಕಾರಿಗಳಿಗೆ ಸಲ್ಲಿಸಿದ ಮನವಿಯಲ್ಲಿ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಮೊಬೈಲ್ ವ್ಯಾಪಾರಿಗಳ ಸಂಘದ ಶೇಖ್, ರವಿ ದೇಸಾಯಿ, ಸಿದ್ದು, ಗೂಳಪ್ಪ ಕುಂಬಾರ್, ಸಿದ್ದು ಕುಂಬಾರ್, ಸಲ್ಮಾನ್ ಗೌರಪೇಟೆ, ಸಮೀರ್, ಮಲ್ಲಿಕಾರ್ಜುನ ಶಭಾದಿ ಸೇರಿದಂತೆ ಸಂಘದ ಪದಾಧಿಕಾರಿಗಳು ಹಾಗೂ ಸ್ಥಳೀಯ ಮೊಬೈಲ್ ಅಂಗಡಿ ಮಾಲೀಕರು ಉಪಸ್ಥಿತರಿದ್ದರು.

ಮಟಮಾರಿ: ರಾಷ್ಟ್ರೀಯ ಕಾನೂನು ಸೇವಾ ದಿನ ಆಚರಣೆ

ರಾಯಚೂರು ನವೆಂಬರ್ 13 (ಕರ್ನಾಟಕ ವಾರ್ತೆ): ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು ಇವರ ಆದೇಶದಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ನ್ಯಾಯವಾದಿಗಳ ಸಂಘ, ಜಿಲ್ಲಾಡಳಿತ, ಪೊಲೀಸ್ ಇಲಾಖೆ ಮತ್ತು ಜಿಲ್ಲಾ ಪಂಚಾಯತ್, ರಾಯಚೂರು ಇವರುಗಳ ಸಂಯುಕ್ತಾಶ್ರಯದಲ್ಲಿ ರಾಷ್ಟ್ರೀಯ ಕಾನೂನು ಸೇವಾ ದಿನವನ್ನು ಮಟಮಾರಿ ಗ್ರಾಮದಲ್ಲಿ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಸರ್ಕಾರಿ ವಿವಿಧ ಯೋಜನೆಯಡಿ 4 ಮರಣ ಪ್ರಮಾಣ ಪತ್ರ, 6 ರೇಷನ್ ಕಾರ್ಡ್, 556 ಆಯುಷ್ಯ ಮಾನ್ ಭಾರತ್ ಕಾರ್ಡ್, 57 ಜನನ ಪ್ರಮಾಣ, 78 ವೃದ್ಧಾಪ್ಯ ವೇತನ, 22 ಆಧಾರ್ ಕಾರ್ಡ್, 39 ವಿಧವಾ ವೇತನ, 100 ವಾಹನ ಚಾಲನೆ ಕಲಿಕಾ ಪರವಾನಗಿ, 214 ಕಾರ್ಮಿಕ ಕಾರ್ಡ್ ಸೇರಿದಂತೆ ಒಟ್ಟು 1076 ಪ್ರಮಾಣ ಪತ್ರವನ್ನು ಅರ್ಹ ಫಲಾನುಭವಿಗಳಿಗೆ ವಿತರಿಸಲಾಯಿತು ಎಂದು ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸಿದ್ದರಾಮಪ್ಪ ಕಲ್ಯಾಣರಾವ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪಿಎಂ ಶ್ರೀ ಕೇಂದ್ರೀಯ ವಿದ್ಯಾಲಯ ಸಂಗೀತ ಸ್ಪರ್ಧೆಯಲ್ಲಿ ಮೂರನೇ ಸ್ಥಾನ

ರಾಯಚೂರು ನವೆಂಬರ್ 13 (ಕರ್ನಾಟಕ ವಾರ್ತೆ): ಕೆವಿಎಸ್ ರಾಷ್ಟ್ರೀಯ ಮಟ್ಟದ ಏಕ್ ಭಾರತ್ ಶ್ರೇಷ್ಠ ಭಾರತ್ (ಇಬಿಎಸ್‌ಬಿ) ಮತ್ತು ಕಲಾ ಉತ್ಸವ2026ರ ವಾದ್ಯ ಸಂಗೀತ ಸ್ಪರ್ಧೆಯಲ್ಲಿ ರಾಯಚೂರಿನ ಪಿಎಂ ಶ್ರೀ ಕೇಂದ್ರಿಯ ವಿದ್ಯಾಲಯವು ತೃತೀಯ ಬಹುಮಾನ ಪಡೆದಿದೆ ಎಂದು ಪಿಎಂ ಶ್ರೀ ಕೇಂದ್ರೀಯ ವಿದ್ಯಾಲಯದ ಪ್ರಾಂಶುಪಾಲರಾದ ದೀಪಾಶ್ರೀ ಅವರು ತಿಳಿಸಿದ್ದಾರೆ.

ಅಕ್ಟೋಬರ್ 30 ಮತ್ತು 31 ರಂದು ನವದೆಹಲಿಯಲ್ಲಿ ನಡೆದ ಅಖಿಲ ಭಾರತ ಮಟ್ಟದ ಕೆವಿಎಸ್ ಇಬಿಎಸ್‌ಬಿ ಮತ್ತು ಕಲಾ ಉತ್ಸವದಲ್ಲಿ ವಾದ್ಯ ಸಂಗೀತ ಗುಂಪು (ಜಾನಪದ/ಶಾಸ್ತ್ರೀಯ) ವಿಭಾಗದಲ್ಲಿ ರಾಯಚೂರಿನ ಪಿಎಂ ಶ್ರೀ ಕೇಂದ್ರಿಯ ವಿದ್ಯಾಲಯವು ಮೂರನೇ ಬಹುಮಾನವನ್ನು ಗಳಿಸಿದೆ. ಪ್ರತಿಭಾನ್ವಿತ ಯುವ ಸಂಗೀತಗಾರರಾದ ವೆಂಕಟ ರಾಘವೇಂದ್ರ ಕನಕ ವೀಡು, ರುದ್ರ ದೇವ್ ಗುಪ್ತಾ, ಚೇತನ್ ಮತ್ತು ಚಂದನ್ ಪಿ. ಅಂಗಡಿ ಅವರು ತಮ್ಮ ಗಮನಾರ್ಹ ಸಂಗೀತ ಪ್ರದರ್ಶನದ ಮೂಲಕ ವಿದ್ಯಾಲಯಕ್ಕೆ ಕೀರ್ತಿ ತಂದಿದ್ದು, ಈ ಅತ್ಯುತ್ತಮ ಸಾಧನೆಯು ಸಂಗೀತ ಶಿಕ್ಷಕ ಶ್ರೀ ಪರಾಸ್ ಪಾಂಡೆ ಅವರ ಸಮರ್ಪಿತ ಮಾರ್ಗದರ್ಶನ ಮತ್ತು ತರಬೇತಿದಾರರು, ಶಿಕ್ಷಕರು ಹಾಗೂ ವಿದ್ಯಾರ್ಥಿಗಳಿಗೆ ಪಿಎಂ ಶ್ರೀ ಕೇಂದ್ರೀಯ ವಿದ್ಯಾಲಯದ ಪ್ರಾಂಶುಪಾಲರಾದ ದೀಪಾಶ್ರೀ ಅವರು ಅಂಭಿನದನೆಗಳನ್ನು ಸಲ್ಲಿಸಿದ್ದಾರೆ.

ದೇವದುರ್ಗ ಉಪ ನೋಂದಣಿ ಕಚೇರಿ: ಆಕ್ಷೇಪಣೆಗೆ ಅರ್ಜಿ ಆಹ್ವಾನ

ರಾಯಚೂರು ನವೆಂಬರ್ 13 (ಕರ್ನಾಟಕ ವಾರ್ತೆ): ಜಿಲ್ಲೆಯ ದೇವದುರ್ಗ ಉಪ ನೋಂದಣಿ ಕಚೇರಿ ವ್ಯಾಪ್ತಿಯ ನಗರ, ಪಟ್ಟಣ ಮತ್ತು ಗ್ರಾಮಾಂತರ ಪ್ರದೇಶಗಳ ಸ್ಥಿರಾಸ್ತಿಗಳ ಮಾರ್ಗಸೂಚಿ ಬೆಲೆಯನ್ನು 2026-27ನೇ ಸಾಲಿನಿಂದ ಜಾರಿಗೆ ಬರುವಂತೆ ಮಾರುಕಟ್ಟೆ ಮೌಲ್ಯ ನಿರ್ಧರಣಾ ಉಪ ಸಮಿತಿ ಸಭೆಯಲ್ಲಿ ನಿರ್ಧರಿಸಿ, ಪರಿಷ್ಕರಿಸಲಾಗಿದೆ ಎಂದು ಸ್ಥಿರಾಸ್ತಿ ಮೌಲ್ಯಮಾಪನ ಉಪ ಸಮಿತಿಯ ಉಪ ನೋಂದಣಾಧಿಕಾರಿಗಳು ಹಾಗೂ ಸದಸ್ಯ ಕಾರ್ಯದರ್ಶಿಗಳು ತಿಳಿಸಿದ್ದಾರೆ.

ನವೆಂಬರ್ 09ರಂದು ನಡೆದ ಈ ಬೆಲೆ ಪಟ್ಟಿಯ ಕರಡು ಪ್ರತಿಯನ್ನು ಸಾರ್ವಜನಿಕರ ಮಾಹಿತಿಗಾಗಿ ಹಾಗೂ ಆಕ್ಷೇಪಣೆಗಾಗಿ ದೇವದುರ್ಗ ಉಪನೋಂದಣಿ ಕಚೇರಿಯಲ್ಲಿ ಪ್ರಚುರಪಡಿಸಲಾಗಿದೆ. ಈ ಮಾರ್ಗಸೂಚಿ ಬೆಲೆಗಳ ಬಗ್ಗೆ ಸಾರ್ವಜನಿಕರಿಂದ ಆಕ್ಷೇಪಣೆಗಳೇನದರೂ ಇದ್ದಲ್ಲಿ 15 ದಿನಗಳ ಒಳಗೆ ಉಪನೋಂದಣಿ ಅಧಿಕಾರಿಗಳಿಗೆ ಲಿಖಿತವಾಗಿ ಅರ್ಜಿ ಸಲ್ಲಿಸಬಹುದಾಗಿದೆ ಎಂದು ದೇವದುರ್ಗ ಸ್ಥಿರಾಸ್ತಿ ಮೌಲ್ಯಮಾಪನ ಉಪ ಸಮಿತಿಯ ಉಪ ನೋಂದಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನೀರಮಾನ್ವಿ ರೇಣುಕಾ ಯಲ್ಲಮ್ಮ ದೇವಸ್ಥಾನದ ಅರ್ಚಕರ ಮೇಲೆ ಹಲ್ಲೆ ಆರೋಪ: ಕಾನೂನು ಕ್ರಮಕ್ಕೆ ಆಗ್ರಹ



ಮಾನ್ವಿ: ತಾಲೂಕಿನ ನೀರಮಾನ್ವಿ ಗ್ರಾಮದ ಶ್ರೀ ರೇಣುಕಾ ಯಲ್ಲಮ್ಮ ದೇವಸ್ಥಾನದಲ್ಲಿ ಪೂಜಾ ಕಾರ್ಯಕ್ಕೆ ಅಡ್ಡಿಪಡಿಸಿ ಅರ್ಚಕರ ಮೇಲೆ ಹಲ್ಲೆ ನಡೆಸಿ, ಪ್ರಾಣಬೆದರಿಕೆ ಹಾಕಿರುವ ಆರೋಪಿಗಳ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಹಾಗೂ ದೇವಸ್ಥಾನದ ಪಾವಿತ್ರ್ಯತೆ ಕಾಪಾಡುವ ಜೊತೆಗೆ ಅರ್ಚಕರಿಗೆ ಸೂಕ್ತ ರಕ್ಷಣೆ ಒದಗಿಸಬೇಕು ಎಂದು ಅಖಿಲ ಭಾರತ ಹಿಂದೂ ದೇವಾಲಯಗಳ ಅರ್ಚಕರ, ಆಗಮಿಕರ ಹಾಗೂ ಉಪಾಧಿವಂತರ ಒಕ್ಕೂಟದ ಮಾನ್ವಿ ತಾಲೂಕು ಘಟಕ ಆಗ್ರಹಿಸಿದೆ.

ಪಟ್ಟಣದ ತಹಶೀಲ್ದಾರ್ ಕಚೇರಿ ಆವರಣದಲ್ಲಿ ಒಕ್ಕೂಟದ ಪದಾಧಿಕಾರಿಗಳು ತಹಶೀಲ್ದಾರ್ ಭೀಮರಾಯ ಬಿ. ರಾಮಸಮುದ್ರ ಅವರ ಮೂಲಕ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿ, ಘಟನೆ ಕುರಿತು ಸೂಕ್ತ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅಖಿಲ ಭಾರತ ಹಿಂದೂ ದೇವಾಲಯಗಳ ಅರ್ಚಕರ, ಆಗಮಿಕರ ಹಾಗೂ ಉಪಾಧಿವಂತರ ಒಕ್ಕೂಟದ ಮಾನ್ವಿ ತಾಲೂಕು ಘಟಕದ ಅಧ್ಯಕ್ಷ ಕಿಡಿಗಣಯ್ಯಸ್ವಾಮಿ, ಧಾರ್ಮಿಕ ದತ್ತಿ ಇಲಾಖೆಗೆ ಒಳಪಟ್ಟಿರುವ ನೀರಮಾನ್ವಿ ಗ್ರಾಮದ ಪ್ರಸಿದ್ಧ ಶಕ್ತಿದೇವತೆ ಶ್ರೀ ರೇಣುಕಾ ಯಲ್ಲಮ್ಮ ದೇವಸ್ಥಾನದಲ್ಲಿ ನವೆಂಬರ್ 10ರಂದು ರಾತ್ರಿ 10 ಗಂಟೆ ಸುಮಾರಿಗೆ ಅರ್ಚಕರ ಮೇಲೆ ಹಲ್ಲೆ ನಡೆದಿರುವುದಾಗಿ ಆರೋಪಿಸಿದರು.

ದೇವಸ್ಥಾನದಲ್ಲಿ ಭಕ್ತರಿಗಾಗಿ ಪೂಜಾ ಕೈಂಕರ್ಯಗಳನ್ನು ನೆರವೇರಿಸುತ್ತಿದ್ದ ಪ್ರಧಾನ ಅರ್ಚಕ ಮಲ್ಲಿಕಾರ್ಜುನ ಪೂಜಾರಿ ಹಾಗೂ ಸಹ ಅರ್ಚಕರಾದ ವೀರಬಸವ ಮತ್ತು ಸುನೀಲ್ ಅವರೊಂದಿಗೆ ಗ್ರಾಮದ ನಿವಾಸಿಗಳಾದ ಗಂಗಣ್ಣ ನಾಯಕ, ಶರಣಬಸವ ಹಾಗೂ ವೀರೇಶ ಎಂಬುವವರು ಅನುಚಿತವಾಗಿ ವರ್ತಿಸಿದ್ದಾರೆ. ಮದ್ಯಪಾನ ಮಾಡಿ ದೇವಸ್ಥಾನಕ್ಕೆ ಆಗಮಿಸಿದ ಅವರು ಪೂಜೆಗೆ ಅಡ್ಡಿಪಡಿಸುವುದರ ಜೊತೆಗೆ ಅರ್ಚಕರ ಮೇಲೆ ಹಲ್ಲೆ ನಡೆಸಿ, ಅವಾಚ್ಯ ಶಬ್ದಗಳಿಂದ ನಿಂದಿಸಿದ್ದಾರೆ ಎಂದು ಆರೋಪಿಸಿದರು.

ಅಲ್ಲದೆ, ಅರ್ಚಕರಿಗೆ ಪ್ರಾಣಬೆದರಿಕೆ ಹಾಕುವ ಮೂಲಕ ದೇವಸ್ಥಾನದ ಪಾವಿತ್ರ್ಯತೆಗೆ ಧಕ್ಕೆ ತಂದಿದ್ದಾರೆ. ಈ ಘಟನೆಯಿಂದ ದೇವಸ್ಥಾನದ ಅರ್ಚಕರು ಹಾಗೂ ಭಕ್ತರಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿದೆ ಎಂದು ಕಿಡಿಗಣಯ್ಯಸ್ವಾಮಿ ತಿಳಿಸಿದರು.

ದೇವಸ್ಥಾನಗಳು ಭಕ್ತರ ಧಾರ್ಮಿಕ ನಂಬಿಕೆ ಹಾಗೂ ಶ್ರದ್ಧೆಯ ಕೇಂದ್ರಗಳಾಗಿವೆ. ಇಂತಹ ಪವಿತ್ರ ಸ್ಥಳಗಳಲ್ಲಿ ಪೂಜಾ ಕಾರ್ಯಗಳಿಗೆ ಅಡ್ಡಿಪಡಿಸುವುದು ಮತ್ತು ಅರ್ಚಕರ ಮೇಲೆ ಹಲ್ಲೆ ನಡೆಸುವುದು ಖಂಡನೀಯ. ಅರ್ಚಕರು ಯಾವುದೇ ಭಯವಿಲ್ಲದೆ ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸುವಂತಹ ಸುರಕ್ಷಿತ ವಾತಾವರಣ ನಿರ್ಮಿಸುವುದು ಸಂಬಂಧಪಟ್ಟ ಅಧಿಕಾರಿಗಳ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಘಟನೆಯನ್ನು ಗಂಭೀರವಾಗಿ ಪರಿಗಣಿಸಿ ಆರೋಪಿಗಳ ವಿರುದ್ಧ ಸೂಕ್ತ ತನಿಖೆ ನಡೆಸಿ ಕಾನೂನು ಕ್ರಮ ಕೈಗೊಳ್ಳಬೇಕು. ಭವಿಷ್ಯದಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ದೇವಸ್ಥಾನದ ಆವರಣದಲ್ಲಿ ಅಗತ್ಯ ಭದ್ರತಾ ವ್ಯವಸ್ಥೆ ಕಲ್ಪಿಸಬೇಕು. ದೇವಸ್ಥಾನದ ಪ್ರಧಾನ ಅರ್ಚಕರು ಹಾಗೂ ಸಹ ಅರ್ಚಕರಿಗೆ ಸೂಕ್ತ ರಕ್ಷಣೆ ಒದಗಿಸಬೇಕು ಎಂದು ಮನವಿ ಮಾಡಿದರು.

ಅರ್ಚಕರ ಸುರಕ್ಷತೆ ಹಾಗೂ ದೇವಸ್ಥಾನದ ಪಾವಿತ್ರ್ಯತೆ ಕಾಪಾಡುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆ ಮತ್ತು ತಾಲೂಕು ಆಡಳಿತ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಒಕ್ಕೂಟದ ಪದಾಧಿಕಾರಿಗಳು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಒಕ್ಕೂಟದ ಜಿಲ್ಲಾಧ್ಯಕ್ಷ ಬಿ. ಮಲ್ಲಪ್ಪ ಹೂಗಾರ್, ಜಗದೀಶಯ್ಯ ಸ್ವಾಮಿ ಮಲ್ಲನಮಡುಗು, ದೊಡ್ಡಪ್ಪ ಹೂಗಾರ, ವೀರಭದ್ರಯ್ಯಸ್ವಾಮಿ ಸಂಗಪೂರು, ವೆಂಕೋಬರಾವ್ ದೇಸಾಯಿ, ಚನ್ನಬಸಯ್ಯ, ಮುದ್ದಯ್ಯಸ್ವಾಮಿ, ಪಂಪಣ್ಣ ಪೂಜಾರಿ, ಉದಯ ಪೂಜಾರಿ, ರಾಮು ನೀರಮಾನ್ವಿ, ನಾಗರಾಜ ಸೇರಿದಂತೆ ಒಕ್ಕೂಟದ ಪದಾಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

ಕಲಾ ಪ್ರತಿಭೋತ್ಸವ ಕಾರ್ಯಕ್ರಮಕ್ಕೆ ನೋಂದಾಯಿಸಲು ದಿನಾಂಕ ಮುಂದೂಡಿಕೆ

ರಾಯಚೂರು ನವೆಂಬರ್ 13 (ಕರ್ನಾಟಕ ವಾರ್ತೆ): ಕನ್ನಡ ಮತ್ತು ಸಂಸ್ಕೃತಿ ಇಲಾಖೆ ರಾಯಚೂರು ಜಿಲ್ಲಾ ವತಿಯಿಂದ 2026-27ನೇ ಸಾಲಿನಲ್ಲಿ ಮಕ್ಕಳ ಮತ್ತು ಯುವಜನರ ಕಲಾಪ್ರತಿಭೆಯ ಕಲಾ ನೈಪುಣ್ಯತೆಯನ್ನು ವೃದ್ಧಿಗೊಳಿಸುವಂತೆ ಪ್ರೋತ್ಸಾಹಿಸಲು ಕಲಾ ಪ್ರತಿಭೋತ್ಸವ ಸಾಂಸ್ಕೃತಿಕ ಕಾರ್ಯಕ್ರಮವನ್ನು ಕ್ರಮವಾಗಿ ಬಾಲ

ಪ್ರತಿಭೆ/ಕಿಶೋರ ಪ್ರತಿಭೆ/ಯುವ ಪ್ರತಿಭೆ ಎಂಬ ಶೀರ್ಷಿಕೆಯಡಿ ಈ ಮೂರು (03) ವಿಭಾಗಗಳ ಪ್ರತಿ ಹಂತದ ಸ್ಪರ್ಧಾರೂಪದಲ್ಲಿ ಏರ್ಪಡಿಸುವ ಪ್ರತಿ ಕಲಾಪ್ರಕಾರಗಳಲ್ಲಿ ಈ ಸ್ಪರ್ಧೆಗಳನ್ನು ದಿನಾಂಕ: 16/11/2026 ರಂದು ಬಾಲಪ್ರತಿಭೆ, ಕಿಶೋರ ಪ್ರತಿಭೆ ಹಾಗೂ ದಿನಾಂಕ: 17/11/2026 ರಂದು ಯುವ ಪ್ರತಿಭೆ /ಸಮೂಹ ಸ್ಪರ್ಧೆಗಳನ್ನು ಏರ್ಪಡಿಸಲಾಗುವುದೆಂದು ಈ ಹಿಂದೆ ಪ್ರಕಟಣೆಯಲ್ಲಿ ತಿಳಿಸಲಾಗಿತ್ತು. ಆದರೆ ಇದುವರೆಗೆ ಸ್ಪರ್ಧೆ ಏರ್ಪಡಿಸುವಷ್ಟು ಅರ್ಜಿಗಳು ಸಲ್ಲಿಕೆಯಾಗಿರುವುದಿಲ್ಲ. ಡಿಸೆಂಬ-ರ2026 ರ ಮಾಹೆಯಲ್ಲಿ ಕಾರ್ಯಕ್ರಮವನ್ನು ಏರ್ಪಡಿಸಿ ಜಿಲ್ಲಾ ಮಟ್ಟದಲ್ಲಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಸ್ಥಾನವನ್ನು ಪಡೆದವರಲ್ಲಿ ಪ್ರಥಮ ಸ್ಥಾನ ಪಡೆದವರನ್ನು ಮಾತ್ರ ವಲಯ ಮಟ್ಟದ ಸ್ಪರ್ಧೆಗೆ ಆಯ್ಕೆ ಮಾಡಿ ಕಳುಹಿಸಿಕೊಡಲಾಗುವುದು.

ಬಾಲ ಪ್ರತಿಭೆಯ ವಿಭಾಗದಲ್ಲಿ ಭಾಗವಹಿಸುವ ಅಭ್ಯರ್ಥಿಗಳಿಗೆ ಕನಿಷ್ಠ 8 ವರ್ಷ ತುಂಬಿರಬೇಕು ಹಾಗೂ 14 ವರ್ಷಕ್ಕಿಂತ ಕಡಿಮೆಯಿರಬೇಕು. ಕಿಶೋರ ಪ್ರತಿಭೆಯ ವಿಭಾಗದಲ್ಲಿ ಭಾಗವಹಿಸುವ ಅಭ್ಯರ್ಥಿಗಳಿಗೆ ಕನಿಷ್ಠ 14 ವರ್ಷವಾಗಿರಬೇಕು ಹಾಗೂ 18 ವರ್ಷಕ್ಕಿಂತ ಕಡಿಮೆಯಿರಬೇಕು. ಮತ್ತು ಯುವ ಪ್ರತಿಭೆಯ ವಿಭಾಗದಲ್ಲಿ ಭಾಗವಹಿಸುವ ಅಭ್ಯರ್ಥಿಗಳಿಗೆ ಕನಿಷ್ಠ 18 ವರ್ಷ ತುಂಬಿರಬೇಕು ಹಾಗೂ 30 ವರ್ಷಕ್ಕಿಂತ ಕಡಿಮೆಯಿರಬೇಕು. ಕ್ರಮವಾಗಿ ಬಾಲ ಪ್ರತಿಭೆ/ ಕಿಶೋರ ಪ್ರತಿಭೆ/ಯುವ ಪ್ರತಿಭೆ ಸ್ಪರ್ಧೆಗಳಲ್ಲಿ ಭಾಗವಹಿಸುವ ಪ್ರತಿಯೊಬ್ಬ ಅಭ್ಯರ್ಥಿಯು ವಯೋಮಿತಿಯ ದೃಢೀಕರಣಕ್ಕಾಗಿ ಬಾಲ ಪ್ರತಿಭೆಯಲ್ಲಿ ಭಾಗವಹಿಸುವ ಅಭ್ಯರ್ಥಿಗಳು (ವ್ಯಾಸಂಗ ಮಾಡುವ ಶಾಲಾ ವತಿಯಿಂದ) /ಕಿಶೋರ ಪ್ರತಿಭೆಯಲ್ಲಿ ಭಾಗವಹಿಸುವ ಅಭ್ಯರ್ಥಿಗಳು (ವ್ಯಾಸಂಗ ಮಾಡುತ್ತಿರುವ ಶಾಲಾ/ಕಾಲೇಜು ವತಿಯಿಂದ) /ಯುವ ಪ್ರತಿಭೆಯಲ್ಲಿ ಭಾಗವಹಿಸುವ ಅಭ್ಯರ್ಥಿಗಳು (ವ್ಯಾಸಂಗ ಮಾಡುವ ಕಾಲೇಜಿನಿಂದ) ಪಡೆದ ವಯೋಮಿತಿಯ ದೃಢೀಕರಣದ ಪ್ರಮಾಣ ಪತ್ರವನ್ನು ಸಲ್ಲಿಸಬೇಕು. ಬಾಲ ಪ್ರತಿಭೆ/ಕಿಶೋರ ಪ್ರತಿಭೆ/ಯುವ ಪ್ರತಿಭೆಯಲ್ಲಿ ಭಾಗವಹಿಸುವ ಅಭ್ಯರ್ಥಿಗಳು ಶಾಲೆಯಿಂದ ಬಂದ ಅಭ್ಯರ್ಥಿಯಲ್ಲದಿದ್ದಲ್ಲಿ ಅವರ ವಯಸ್ಸಿನ ಬಗ್ಗೆ ಪಂಚಾಯತಿ/ನಗರಸಭೆ/ಪಾಲಿಕೆ ಕಛೇರಿಯಿಂದ ಪಡೆದ ದೃಢೀಕರಣದ ಪ್ರಮಾಣ ಪತ್ರವನ್ನು ಸಲ್ಲಿಸಬೇಕು. ಬಾಲ ಪ್ರತಿಭೆ/ಕಿಶೋರ ಪ್ರತಿಭೆಯಲ್ಲಿ ಏಕವ್ಯಕ್ತಿ ಸ್ಪರ್ಧೆಗಳಿಗೆ ಈ ಕೆಳಗಿನಂತೆ ತಿಳಿಸಲಾದ ವಿವಿಧ ಕಲಾಪ್ರಕಾರಗಳಿಗೆ ತಕ್ಕಂತೆ ಸಮಯವನ್ನು ನಿಗದಿಪಡಿಸಲಾಗಿರುತ್ತದೆ.

ಶಾಸ್ತ್ರೀಯ ನೃತ್ಯಕ್ಕೆ 10-ನಿಮಿಷ, ಸುಗಮ ಸಂಗೀತಕ್ಕೆ 7-ನಿಮಿಷ, ಜಾನಪದ ಗೀತೆಗೆ-7 ನಿಮಿಷ, ಹಿಂದುಸ್ಥಾನಿ ಕರ್ನಾಟಕ ವಾದ್ಯ ಸಂಗೀತಕ್ಕೆ-7 ನಿಮಿಷ, ಹಿಂದುಸ್ಥಾನಿ ಕರ್ನಾಟಕ ಶಾಸ್ತ್ರೀಯ ಸಂಗೀತಕ್ಕೆ-7 ನಿಮಿಷ, ಚಿತ್ರಕಲೆಯ ಪ್ರದರ್ಶನಕ್ಕೆ-120 ನಿಮಿಷಗಳಂತೆ ಯುವ ಪ್ರತಿಭೆಯಲ್ಲಿ ಏಕವ್ಯಕ್ತಿ ಸ್ಪರ್ಧೆಗಳಿಗೆ ವಿವಿಧ ಕಲಾಪ್ರಕಾರಗಳಿಗೆ ತಕ್ಕಂತೆ ಸಮಯವನ್ನು ನಿಗದಿಪಡಿಸಲಾಗಿರುತ್ತದೆ. ನನ್ನ ಮೆಚ್ಚನ ಸಾಹಿತಿ (ಆಶುಭಾಷಣ ಸ್ಪರ್ಧೆಗೆ)-7 ನಿಮಿಷ, ಶಾಸ್ತ್ರೀಯ ನೃತ್ಯಕ್ಕೆ 10-ನಿಮಿಷ, ಸುಗಮ ಸಂಗೀತಕ್ಕೆ 7-ನಿಮಿಷ, ಹಿಂದುಸ್ಥಾನಿ ಕರ್ನಾಟಕ ವಾದ್ಯ ಸಂಗೀತಕ್ಕೆ-7 ನಿಮಿಷ, ಹಿಂದುಸ್ಥಾನಿ ಕರ್ನಾಟಕ ಶಾಸ್ತ್ರೀಯ ಸಂಗೀತಕ್ಕೆ-7 ನಿಮಿಷ, ಚಿತ್ರಕಲೆಯ ಪ್ರದರ್ಶನಕ್ಕೆ-120 ನಿಮಿಷ ಮತ್ತು ಯುವ ಪ್ರತಿಭೆಯಲ್ಲಿ ಮಾತ್ರ ಸಮೂಹ ಸ್ಪರ್ಧೆಯಲ್ಲಿ ನಾಟಕ ಕಲಾಪ್ರಕಾರಕ್ಕೆ-7 ನಿಮಿಷಗಳ ಹಾಗೆ ಸಮಯವನ್ನು ನಿಗದಿಪಡಿಸಲಾಗಿರುತ್ತದೆ.

ಜಿಲ್ಲಾ ಮಟ್ಟದಲ್ಲಿ ಪ್ರತಿ ಕಲಾ ಪ್ರಕಾರದಲ್ಲಿ ಆಯ್ಕೆಯಾದ ಬಾಲ ಪ್ರತಿಭೆ / ಕಿಶೋರ ಪ್ರತಿಭೆ/ಯುವ ಪ್ರತಿಭೆ ಹಾಗೂ ನಾಟಕ ಸ್ಪರ್ಧೆಗಳಲ್ಲಿ ಪ್ರಥಮ ಸ್ಥಾನ ಪಡೆದ ಒಬ್ಬರನ್ನು ಸಂಬಧಿತ ವಲಯ ಮಟ್ಟಕ್ಕೆ ಕಳುಹಿಸಿಕೊಡಲಾಗುವುದು. ಜಿಲ್ಲಾ ಮಟ್ಟದಲ್ಲಿ ಭಾಗವಹಿಸುವ ಎಲ್ಲಾ ಸ್ಪರ್ಧಾರ್ಥಿಗಳಿಗೆ ಇಲಾಖೆಯಿಂದ ಪ್ರಮಾಣ ಪತ್ರ ನೀಡಲಾಗುವುದು. ಹಾಗೂ ಬಾಲ ಪ್ರತಿಭೆ / ಕಿಶೋರ ಪ್ರತಿಭೆ/ಯುವ ಪ್ರತಿಭೆಗಳಲ್ಲಿ ಪ್ರದರ್ಶಿಸಲಿರುವ ಕಲೆಯ ವಿವರವನ್ನು ಪಾಸ್ ಪೋರ್ಟ್ ಸೈಜ್ ಭಾವ ಚಿತ್ರದೊಂದಿಗೆ ಶಾಲಾ/ಕಾಲೇಜು ಮುಖ್ಯಸ್ಥರಿಂದ ದೃಢೀಕರಿಸಿ ಡಿಸೆಂಬ-ರ05-2026 ರರೊಳಗೆ ಸಹಾಯಕ ನಿರ್ದೇಶಕರ ಕಛೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ರಾಯಚೂರು ಜಿಲ್ಲೆಗೆ ತಮ್ಮ ಸ್ವ-ವಿವರವನ್ನು ಸಲ್ಲಿಸಬಹುದಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹಣಕಾಸು ಸೇರ್ಪಡೆ ಅಭಿಯಾನ: ಗ್ರಾಮಸ್ಥರಿಗೆ ಬ್ಯಾಂಕಿಂಗ್ ಸೇವೆ, ಸರ್ಕಾರಿ ಯೋಜನೆಗಳ ಮಾಹಿತಿ



ರಾಯಚೂರು: ಗ್ರಾಮೀಣ ಪ್ರದೇಶದ ಜನರಲ್ಲಿ ಬ್ಯಾಂಕಿಂಗ್ ಸೇವೆಗಳ ಕುರಿತು ಅರಿವು ಮೂಡಿಸುವ ಹಾಗೂ ಕೇಂದ್ರ ಸರ್ಕಾರದ ವಿವಿಧ ಆರ್ಥಿಕ ಭದ್ರತಾ ಯೋಜನೆಗಳ ಪ್ರಯೋಜನಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸುವ ಉದ್ದೇಶದಿಂದ ಕರ್ನಾಟಕ ಗ್ರಾಮೀಣ ಬ್ಯಾಂಕ್‌ನ ಗಿಲ್ಲೇಸುಗೂರು ಶಾಖೆ ವತಿಯಿಂದ ಗುರುವಾರ ಗಿಲ್ಲೇಸುಗೂರು ಗ್ರಾಮ ಪಂಚಾಯಿತಿ ಆವರಣದಲ್ಲಿ ಹಣಕಾಸು ಸೇರ್ಪಡೆ ಜಾಗೃತಿ ಅಭಿಯಾನ ಹಮ್ಮಿಕೊಳ್ಳಲಾಯಿತು.

ಅಭಿಯಾನದಲ್ಲಿ ಗ್ರಾಮದ ಸುಮಾರು 60 ಗ್ರಾಹಕರು ಪಾಲ್ಗೊಂಡು ಬ್ಯಾಂಕಿಂಗ್ ವ್ಯವಹಾರಗಳು, ಉಳಿತಾಯದ ಮಹತ್ವ, ವಿಮಾ ಸೌಲಭ್ಯಗಳು, ಪಿಂಚಣಿ ಯೋಜನೆಗಳು ಹಾಗೂ ಡಿಜಿಟಲ್ ಹಣಕಾಸು ಸೇವೆಗಳ ಕುರಿತು ಮಾಹಿತಿ ಪಡೆದುಕೊಂಡರು.

ಕಾರ್ಯಕ್ರಮದಲ್ಲಿ ಮಾತನಾಡಿದ ಕರ್ನಾಟಕ ಗ್ರಾಮೀಣ ಬ್ಯಾಂಕ್‌ನ ಪ್ರಾದೇಶಿಕ ವ್ಯವಸ್ಥಾಪಕ ವಿಜಯ್ ದೋತಿಹಾಳ, ಸಮಾಜದ ಪ್ರತಿಯೊಬ್ಬ ವ್ಯಕ್ತಿಯೂ ಬ್ಯಾಂಕಿಂಗ್ ವ್ಯವಸ್ಥೆಯೊಂದಿಗೆ ಸಂಪರ್ಕ ಹೊಂದುವುದು ಅಗತ್ಯವಾಗಿದೆ. ವಿಶೇಷವಾಗಿ ಗ್ರಾಮೀಣ ಭಾಗದ ರೈತರು, ಕೃಷಿ ಕಾರ್ಮಿಕರು, ಮಹಿಳೆಯರು ಹಾಗೂ ಆರ್ಥಿಕವಾಗಿ ಹಿಂದುಳಿದ ಕುಟುಂಬಗಳು ಸರ್ಕಾರದ ವಿವಿಧ ಹಣಕಾಸು ಯೋಜನೆಗಳ ಪ್ರಯೋಜನಗಳನ್ನು ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಕೇಂದ್ರ ಸರ್ಕಾರ ಜಾರಿಗೊಳಿಸಿರುವ ಪ್ರಧಾನಮಂತ್ರಿ ಜೀವನ ಜ್ಯೋತಿ ಬಿಮಾ ಯೋಜನೆ, ಪ್ರಧಾನಮಂತ್ರಿ ಸುರಕ್ಷಾ ಬಿಮಾ ಯೋಜನೆ, ಅಟಲ್ ಪಿಂಚಣಿ ಯೋಜನೆ ಹಾಗೂ ಪ್ರಧಾನಮಂತ್ರಿ ಜನಧನ್ ಯೋಜನೆಗಳ ಉದ್ದೇಶ, ಅರ್ಹತೆ ಮತ್ತು ಅವುಗಳಿಂದ ದೊರೆಯುವ ಸೌಲಭ್ಯಗಳ ಕುರಿತು ವಿವರಿಸಿದರು. ಕಡಿಮೆ ವೆಚ್ಚದಲ್ಲಿ ವಿಮಾ ರಕ್ಷಣೆ ಪಡೆಯುವುದು, ಭವಿಷ್ಯದ ಆರ್ಥಿಕ ಭದ್ರತೆಗಾಗಿ ಪಿಂಚಣಿ ಯೋಜನೆಗಳಲ್ಲಿ ಪಾಲ್ಗೊಳ್ಳುವುದು ಹಾಗೂ ಬ್ಯಾಂಕ್ ಖಾತೆಗಳ ಮೂಲಕ ಸರ್ಕಾರದ ಸೌಲಭ್ಯಗಳನ್ನು ಪಡೆಯುವ ಮಹತ್ವವನ್ನು ತಿಳಿಸಿಕೊಟ್ಟರು.

ಬ್ಯಾಂಕ್ ಖಾತೆಗಳನ್ನು ನಿರಂತರವಾಗಿ ಸಕ್ರಿಯವಾಗಿರಿಸಿಕೊಳ್ಳಲು ಗ್ರಾಹಕರು ಕೆವೈಸಿ, ಸಿ-ಕೆವೈಸಿ ಹಾಗೂ ಮರು ಕೆವೈಸಿ ಪ್ರಕ್ರಿಯೆಗಳನ್ನು ನಿಗದಿತ ನಿಯಮಗಳಂತೆ ಪೂರ್ಣಗೊಳಿಸಬೇಕು. ಖಾತೆಗೆ ಸಂಬಂಧಿಸಿದ ವೈಯಕ್ತಿಕ ವಿವರಗಳನ್ನು ಕಾಲಕಾಲಕ್ಕೆ ನವೀಕರಿಸುವ ಮೂಲಕ ಬ್ಯಾಂಕಿಂಗ್ ಸೇವೆಗಳನ್ನು ಸುಗಮವಾಗಿ ಪಡೆದುಕೊಳ್ಳಬಹುದು ಎಂದು ಸಲಹೆ ನೀಡಿದರು.

ಇದೇ ಸಂದರ್ಭದಲ್ಲಿ ಡಿಜಿಟಲ್ ಬ್ಯಾಂಕಿಂಗ್ ವ್ಯವಸ್ಥೆಯ ಕುರಿತು ಮಾಹಿತಿ ನೀಡಲಾಯಿತು. ಯುಪಿಐ, ಮೊಬೈಲ್ ಬ್ಯಾಂಕಿಂಗ್ ಹಾಗೂ ಇತರ ಆನ್‌ಲೈನ್ ಹಣಕಾಸು ವಹಿವಾಟುಗಳ ಬಳಕೆಯಿಂದ ಸಮಯ ಉಳಿತಾಯವಾಗುವುದರ ಜೊತೆಗೆ ಹಣಕಾಸಿನ ವ್ಯವಹಾರಗಳನ್ನು ಸುಲಭವಾಗಿ ನಿರ್ವಹಿಸಬಹುದು ಎಂದು ತಿಳಿಸಲಾಯಿತು.

ಡಿಜಿಟಲ್ ವಹಿವಾಟಿನ ಸಂದರ್ಭದಲ್ಲಿ ಅಪರಿಚಿತ ವ್ಯಕ್ತಿಗಳಿಗೆ ಒಟಿಪಿ, ಎಟಿಎಂ ಪಿನ್, ಯುಪಿಐ ಪಿನ್ ಹಾಗೂ ಬ್ಯಾಂಕ್ ಖಾತೆಯ ಗೌಪ್ಯ ಮಾಹಿತಿಗಳನ್ನು ಹಂಚಿಕೊಳ್ಳಬಾರದು. ಅನುಮಾನಾಸ್ಪದ ಸಂದೇಶಗಳು ಮತ್ತು ಅಪರಿಚಿತ ಲಿಂಕ್‌ಗಳ ಬಗ್ಗೆ ಎಚ್ಚರಿಕೆ ವಹಿಸಬೇಕು. ಆನ್‌ಲೈನ್ ಹಣಕಾಸು ವಂಚನೆಗಳಿಂದ ಸುರಕ್ಷಿತರಾಗಲು ಗ್ರಾಹಕರು ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಅನುಸರಿಸಬೇಕು ಎಂಬುದರ ಕುರಿತು ಜಾಗೃತಿ ಮೂಡಿಸಲಾಯಿತು.

ಗ್ರಾಮೀಣ ಭಾಗದ ಪ್ರತಿಯೊಬ್ಬ ಅರ್ಹ ವ್ಯಕ್ತಿಗೂ ಬ್ಯಾಂಕಿಂಗ್ ಸೌಲಭ್ಯಗಳು ಲಭ್ಯವಾಗಬೇಕು ಹಾಗೂ ಸರ್ಕಾರದ ಜನಪರ ಹಣಕಾಸು ಯೋಜನೆಗಳಿಂದ ಯಾರೂ ವಂಚಿತರಾಗಬಾರದು ಎಂಬ ಆಶಯದೊಂದಿಗೆ ಅಭಿಯಾನ ಆಯೋಜಿಸಲಾಗಿತ್ತು. ಕಾರ್ಯಕ್ರಮದಲ್ಲಿ ಭಾಗವಹಿಸಿದ ಗ್ರಾಹಕರಿಗೆ ವಿವಿಧ ಯೋಜನೆಗಳ ಕುರಿತು ಮಾಹಿತಿ ನೀಡಿ, ಬ್ಯಾಂಕಿಂಗ್ ಸೇವೆಗಳನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳುವಂತೆ ಪ್ರೋತ್ಸಾಹಿಸಲಾಯಿತು.

ಕಾರ್ಯಕ್ರಮದಲ್ಲಿ ಭಾರತೀಯ ರಿಸರ್ವ್ ಬ್ಯಾಂಕ್‌ನ ಸಹಾಯಕ ಮಹಾಪ್ರಬಂಧಕ ಗೌತಮ್, ಲೀಡ್ ಡಿಸ್ಟ್ರಿಕ್ಟ್ ಮ್ಯಾನೇಜರ್ ಅನಿಲ್ ರಾಠೋಡ್, ಕರ್ನಾಟಕ ಗ್ರಾಮೀಣ ಬ್ಯಾಂಕ್‌ನ ಪ್ರಾದೇಶಿಕ ವ್ಯವಸ್ಥಾಪಕ ವಿಜಯ್ ದೋತಿಹಾಳ, ಗಿಲ್ಲೇಸುಗೂರು ಶಾಖಾ ವ್ಯವಸ್ಥಾಪಕ ರವಿ ಕುರ್ಮಾ, ಹಣಕಾಸು ಸಾಕ್ಷರತಾ ಕೇಂದ್ರದ ಅಧಿಕಾರಿ ವಿಶ್ವನಾಥಪ್ಪ ರೇವಣಕಿ, ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಬಸ್ಸಯ್ಯ, ಏರೇಶ್, ಗ್ರಾಮ ಪಂಚಾಯಿತಿ ಸಿಬ್ಬಂದಿ ಹಾಗೂ ನರೇಗಾ ಕೂಲಿ ಕಾರ್ಮಿಕರು ಉಪಸ್ಥಿತರಿದ್ದರು.

ದೇವರಾಜ ಅರಸು ಯೋಜನೆಯ ಫಲಾನುಭವಿಗಳ ಅರ್ಜಿಗಳು ನಾಪತ್ತೆ ಆರೋಪ: ನಿರ್ಲಕ್ಷ್ಯ ವಹಿಸಿದ ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ಆಗ್ರಹ



ರಾಯಚೂರು: ದೇವರಾಜ ಅರಸು ವಿಶೇಷ ವರ್ಗದ ಯೋಜನೆಯಡಿ ನಿವೇಶನ ಸೌಲಭ್ಯ ಪಡೆಯಲು ಎರಡು ವರ್ಷಗಳ ಹಿಂದೆಯೇ ಸಲ್ಲಿಸಿದ್ದ ಅರ್ಜಿಗಳು ಹಾಗೂ ಅಗತ್ಯ ದಾಖಲೆಗಳು ಸಂಬಂಧಪಟ್ಟ ಇಲಾಖೆಗಳಲ್ಲೇ ಕಳೆದುಹೋಗಿವೆ ಎಂದು ಆರೋಪಿಸಿರುವ ಫಲಾನುಭವಿಗಳು, ಅರ್ಜಿಗಳ ನಿರ್ವಹಣೆಯಲ್ಲಿ ನಿರ್ಲಕ್ಷ್ಯ ತೋರಿದ ಅಧಿಕಾರಿಗಳ ವಿರುದ್ಧ ಶಿಸ್ತುಕ್ರಮ ಜರುಗಿಸುವಂತೆ ಒತ್ತಾಯಿಸಿ ಮಹಾನಗರ ಪಾಲಿಕೆ ಆಯುಕ್ತರಿಗೆ ಮನವಿ ಸಲ್ಲಿಸಿದ್ದಾರೆ.

ನಗರದಲ್ಲಿ ನವೆಂಬರ್ 13ರಂದು ಆಯುಕ್ತರಿಗೆ ಮನವಿ ಸಲ್ಲಿಸಿದ ಫಲಾನುಭವಿಗಳು, ಸರ್ಕಾರದ ವಸತಿ ಹಾಗೂ ನಿವೇಶನ ಸೌಲಭ್ಯಗಳ ನಿರೀಕ್ಷೆಯಲ್ಲಿ ಎರಡು ವರ್ಷಗಳಿಂದ ಕಾಯುತ್ತಿರುವ ಬಡ ಕುಟುಂಬಗಳಿಗೆ ಅಧಿಕಾರಿಗಳ ಬೇಜವಾಬ್ದಾರಿತನದಿಂದ ಅನ್ಯಾಯವಾಗುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ದೇವರಾಜ ಅರಸು ವಿಶೇಷ ವರ್ಗದ ಯೋಜನೆಯಡಿ ವಿಧವೆಯರು, ವಿಧುರರು, ಅಂಗವಿಕಲರು, ತರಕಾರಿ ಮಾರಾಟಗಾರರು, ಬೀದಿಬದಿ ವ್ಯಾಪಾರಿಗಳು, ಪೌರಕಾರ್ಮಿಕರು ಹಾಗೂ ಅಲೆಮಾರಿ ಸಮುದಾಯದವರು ಸೇರಿದಂತೆ ವಿವಿಧ ವರ್ಗಗಳ ಅರ್ಹ ಫಲಾನುಭವಿಗಳು ನಿವೇಶನ ಮಂಜೂರಾತಿಗಾಗಿ ಮಹಾನಗರ ಪಾಲಿಕೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಇಲಾಖೆ ಹಾಗೂ ಇತರ ಸಂಬಂಧಪಟ್ಟ ಕಚೇರಿಗಳಿಗೆ ಅಗತ್ಯ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಿದ್ದರು. ಆದರೆ ಈ ಅರ್ಜಿಗಳನ್ನು ಸಮರ್ಪಕವಾಗಿ ಸಂರಕ್ಷಿಸದೆ ಕಳೆದುಕೊಂಡಿರುವುದರಿಂದ ಫಲಾನುಭವಿಗಳು ಮತ್ತೆ ಕಚೇರಿಗಳಿಗೆ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಆರೋಪಿಸಿದರು.

ಯೋಜನೆಯಡಿ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ ನಿಗದಿಯಾಗಿರುವ ಸಂದರ್ಭದಲ್ಲಿ ಈಗಾಗಲೇ ದಾಖಲೆಗಳನ್ನು ಒದಗಿಸಿರುವ ಫಲಾನುಭವಿಗಳಿಂದ ಮತ್ತೊಮ್ಮೆ ಸಂಪೂರ್ಣ ದಾಖಲೆಗಳನ್ನು ಸಲ್ಲಿಸುವಂತೆ ಅಧಿಕಾರಿಗಳು ಸೂಚಿಸುತ್ತಿರುವುದು ಸರಿಯಲ್ಲ. ಆರ್ಥಿಕವಾಗಿ ಹಿಂದುಳಿದವರು, ವಯೋವೃದ್ಧರು, ಅಂಗವಿಕಲರು ಹಾಗೂ ದಿನಗೂಲಿ ಕೆಲಸ ಮಾಡುವವರು ಅಗತ್ಯ ದಾಖಲೆಗಳನ್ನು ಮರುಸಂಗ್ರಹಿಸಲು ಸಮಯ ಮತ್ತು ಹಣ ವ್ಯಯಿಸಬೇಕಾಗುತ್ತದೆ. ಇದರಿಂದ ಅರ್ಹ ಫಲಾನುಭವಿಗಳು ಯೋಜನೆಯ ಸೌಲಭ್ಯದಿಂದ ವಂಚಿತರಾಗುವ ಆತಂಕ ಎದುರಾಗಿದೆ ಎಂದು ಮನವಿಯಲ್ಲಿ ವಿವರಿಸಲಾಗಿದೆ.

ಈ ಹಿಂದೆ ಸಲ್ಲಿಕೆಯಾಗಿರುವ ಅರ್ಜಿಗಳು ಹಾಗೂ ದಾಖಲೆಗಳ ಕುರಿತು ಸಂಬಂಧಪಟ್ಟ ಇಲಾಖೆಗಳು ಸಮಗ್ರ ಪರಿಶೀಲನೆ ನಡೆಸಬೇಕು. ಅರ್ಜಿಗಳು ಯಾವ ಹಂತದಲ್ಲಿ ನಾಪತ್ತೆಯಾಗಿವೆ ಎಂಬುದನ್ನು ಪತ್ತೆಹಚ್ಚಿ, ಫಲಾನುಭವಿಗಳಿಗೆ ಯಾವುದೇ ರೀತಿಯ ಅನ್ಯಾಯವಾಗದಂತೆ ನೋಡಿಕೊಳ್ಳಬೇಕು. ಈಗಾಗಲೇ ಅರ್ಜಿ ಸಲ್ಲಿಸಿರುವವರನ್ನು ಹೊಸ ಅರ್ಜಿದಾರರೆಂದು ಪರಿಗಣಿಸದೆ, ಅವರ ಹಿಂದಿನ ಅರ್ಜಿಗಳ ಆಧಾರದಲ್ಲಿಯೇ ಸೌಲಭ್ಯ ಒದಗಿಸಲು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಒಂದು ವೇಳೆ ಈ ಹಿಂದೆ ಸಲ್ಲಿಸಿದ ದಾಖಲೆಗಳು ಪತ್ತೆಯಾಗದಿದ್ದರೆ, ಫಲಾನುಭವಿಗಳಿಗೆ ಹೊಸದಾಗಿ ದಾಖಲೆಗಳನ್ನು ಸಂಗ್ರಹಿಸಿ ಅರ್ಜಿ ಸಲ್ಲಿಸಲು ಕನಿಷ್ಠ ಒಂದು ತಿಂಗಳ ಹೆಚ್ಚುವರಿ ಕಾಲಾವಕಾಶ ನೀಡಬೇಕು. ದಾಖಲೆಗಳ ನಿರ್ವಹಣೆಯಲ್ಲಿ ಲೋಪವೆಸಗಿರುವ ಹಾಗೂ ಕರ್ತವ್ಯದಲ್ಲಿ ನಿರ್ಲಕ್ಷ್ಯ ತೋರಿರುವ ಅಧಿಕಾರಿಗಳ ವಿರುದ್ಧ ಸೂಕ್ತ ತನಿಖೆ ನಡೆಸಿ ಶಿಸ್ತುಕ್ರಮ ಜರುಗಿಸಬೇಕು ಎಂದು ಆಗ್ರಹಿಸಿದರು.

ಬಡವರು ಹಾಗೂ ದುರ್ಬಲ ವರ್ಗದ ಜನರಿಗೆ ಅನುಕೂಲ ಕಲ್ಪಿಸುವ ಉದ್ದೇಶದಿಂದ ಸರ್ಕಾರ ಜಾರಿಗೊಳಿಸಿರುವ ಯೋಜನೆಗಳು ಅಧಿಕಾರಿಗಳ ನಿರ್ಲಕ್ಷ್ಯದಿಂದ ಅರ್ಹರಿಗೆ ತಲುಪದಿರುವುದು ವಿಷಾದನೀಯ. ಮಹಾನಗರ ಪಾಲಿಕೆ ಆಡಳಿತ ಈ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ, ಅರ್ಹ ಫಲಾನುಭವಿಗಳಿಗೆ ನಿವೇಶನ ಸೌಲಭ್ಯ ದೊರೆಯುವಂತೆ ತುರ್ತು ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಜನಾರ್ಧನ್, ಬಸವರಾಜ ಹೊಸೂರು, ಎಸ್. ನಾಗರಾಜ್, ಜಿ. ರಾಜು, ತಾಯಪ್ಪ, ಪಾರ್ವತಿ, ಶಾರದಮ್ಮ, ಯಲ್ಲಪ್ಪ, ಶಂಕ್ರಪ್ಪ, ದೊಡ್ಡಮ್ಮ, ರಂಗಮ್ಮ, ಕಮಲಮ್ಮ, ಯಂಕಮ್ಮ, ನರಸಮ್ಮ ಸೇರಿದಂತೆ ಅನೇಕ ಫಲಾನುಭವಿಗಳು ಉಪಸ್ಥಿತರಿದ್ದರು.

ಪಿಡಿಒಗಳ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ನ.15ರಂದು ಕಲಬುರಗಿಯಲ್ಲಿ ರಾಜ್ಯಮಟ್ಟದ ಸಮಾವೇಶ: ವಿಶ್ವನಾಥ



ಲಿಂಗಸುಗೂರು: ಗ್ರಾಮ ಪಂಚಾಯಿತಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ (ಪಿಡಿಒ) ದೀರ್ಘಕಾಲದ ಬೇಡಿಕೆಗಳನ್ನು ಈಡೇರಿಸುವಂತೆ ರಾಜ್ಯ ಸರ್ಕಾರವನ್ನು ಒತ್ತಾಯಿಸಿ ನವೆಂಬರ್ 15ರಂದು ಕಲಬುರಗಿಯಲ್ಲಿ ರಾಜ್ಯಮಟ್ಟದ ಬೃಹತ್ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ರಾಜ್ಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ವಿಶ್ವನಾಥ ತಿಳಿಸಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆಯ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸುವಲ್ಲಿ ಪಿಡಿಒಗಳು ಪ್ರಮುಖ ಪಾತ್ರ ವಹಿಸುತ್ತಿದ್ದಾರೆ. ಆದರೆ ಹಲವು ವರ್ಷಗಳಿಂದ ಸೇವಾ ಸೌಲಭ್ಯಗಳು, ವೇತನ ಪರಿಷ್ಕರಣೆ, ಹುದ್ದೆಗಳ ಉನ್ನತೀಕರಣ ಹಾಗೂ ಮುಂಬಡ್ತಿಗೆ ಸಂಬಂಧಿಸಿದ ಬೇಡಿಕೆಗಳು ಬಾಕಿ ಉಳಿದಿದ್ದು, ಸರ್ಕಾರ ಈ ಸಮಸ್ಯೆಗಳ ಪರಿಹಾರಕ್ಕೆ ಮುಂದಾಗಬೇಕು ಎಂದು ಆಗ್ರಹಿಸಿದರು.

ರಾಜ್ಯದಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ 3,827 ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳನ್ನು ಗ್ರೂಪ್ ಸಿ ವೃಂದದಿಂದ ಗ್ರೂಪ್ ಬಿ ವೃಂದಕ್ಕೆ ಮೇಲ್ದರ್ಜೆಗೇರಿಸಬೇಕು. ರಾಜ್ಯದಲ್ಲಿ ಮಂಜೂರಾಗಿರುವ ಒಟ್ಟು 6,021 ಪಿಡಿಒ ಹುದ್ದೆಗಳ ಪೈಕಿ ಈ ಹಿಂದೆ 1,500 ಹುದ್ದೆಗಳನ್ನು ಗ್ರೂಪ್ ಬಿ ವೃಂದಕ್ಕೆ ಉನ್ನತೀಕರಿಸಲಾಗಿದೆ. ಉಳಿದ ಹುದ್ದೆಗಳ ಉನ್ನತೀಕರಣ ಹಾಗೂ ಖಾಲಿ ಇರುವ 694 ಹುದ್ದೆಗಳ ಭರ್ತಿಗೆ ಕ್ರಮ ಕೈಗೊಳ್ಳಬೇಕು. ಅರ್ಹ ಅಧಿಕಾರಿಗಳಿಗೆ ಜ್ಯೇಷ್ಠತೆಯ ಆಧಾರದಲ್ಲಿ ನಿಯಮಾನುಸಾರ ಮುಂಬಡ್ತಿ ನೀಡಬೇಕು ಎಂದು ಒತ್ತಾಯಿಸಿದರು.

2017ರ ಅಧಿಸೂಚನೆಯಲ್ಲಿ ಉಲ್ಲೇಖಿಸಿರುವ ಮೂಲವೇತನ ಹಾಗೂ ಇಲಾಖಾ ಸಂಘಟನೆಗಳು ಸಲ್ಲಿಸಿರುವ ಬೇಡಿಕೆಗಳನ್ನು ಪರಿಗಣಿಸಿ ಪಿಡಿಒಗಳ ವೇತನ ಶ್ರೇಣಿಯನ್ನು ಶೀಘ್ರ ಪರಿಷ್ಕರಿಸಬೇಕು. ಸಮಾನ ಜವಾಬ್ದಾರಿಗಳನ್ನು ನಿರ್ವಹಿಸುತ್ತಿದ್ದರೂ ವೇತನ ಮತ್ತು ಸೇವಾ ಸೌಲಭ್ಯಗಳಲ್ಲಿ ಕಂಡುಬರುತ್ತಿರುವ ತಾರತಮ್ಯವನ್ನು ನಿವಾರಿಸಿ ನ್ಯಾಯಯುತ ಸೌಲಭ್ಯಗಳನ್ನು ಕಲ್ಪಿಸಬೇಕು ಎಂದು ಆಗ್ರಹಿಸಿದರು.

ಗ್ರಾಮ ಪಂಚಾಯಿತಿಗಳ ಮೂಲಕ ಸರ್ಕಾರದ ನೂರಾರು ಯೋಜನೆಗಳು ಅನುಷ್ಠಾನಗೊಳ್ಳುತ್ತಿದ್ದು, ಅವುಗಳ ಸಮರ್ಪಕ ನಿರ್ವಹಣೆಯ ಹೊಣೆಗಾರಿಕೆ ಪಿಡಿಒಗಳ ಮೇಲಿದೆ. ದಿನದಿಂದ ದಿನಕ್ಕೆ ಆಡಳಿತಾತ್ಮಕ ಜವಾಬ್ದಾರಿಗಳು ಹೆಚ್ಚುತ್ತಿರುವುದರಿಂದ ಕರ್ತವ್ಯ ನಿರ್ವಹಣೆಗೆ ಅಗತ್ಯವಾದ ಅಧಿಕಾರ ಹಾಗೂ ಸೌಲಭ್ಯಗಳನ್ನು ಒದಗಿಸುವುದು ಅತ್ಯವಶ್ಯಕವಾಗಿದೆ. ಹೆಚ್ಚಿನ ಜವಾಬ್ದಾರಿಗಳಿಗೆ ಅನುಗುಣವಾಗಿ ಪಿಡಿಒಗಳಿಗೆ ಆಡಳಿತಾತ್ಮಕ ಅಧಿಕಾರ ನೀಡಬೇಕು ಎಂದು ಹೇಳಿದರು.

ಗ್ರಾಮೀಣ ಪ್ರದೇಶಗಳಲ್ಲಿ ಸರ್ಕಾರದ ಯೋಜನೆಗಳನ್ನು ಜನರಿಗೆ ತಲುಪಿಸುವ ಸಂದರ್ಭದಲ್ಲಿ ಪಿಡಿಒಗಳು ವಿವಿಧ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ವಿಶೇಷವಾಗಿ ಕರ್ತವ್ಯ ನಿರ್ವಹಿಸುವ ಸ್ಥಳಗಳಲ್ಲಿ ಅಧಿಕಾರಿಗಳ ಸುರಕ್ಷತೆಗೆ ಸೂಕ್ತ ವ್ಯವಸ್ಥೆ ಕಲ್ಪಿಸಬೇಕು. ಸರ್ಕಾರಿ ಕೆಲಸಕ್ಕೆ ಅಡ್ಡಿಪಡಿಸುವವರು ಹಾಗೂ ಅಧಿಕಾರಿಗಳ ಮೇಲೆ ದೌರ್ಜನ್ಯ ನಡೆಸುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು. ಪಿಡಿಒಗಳು ಯಾವುದೇ ಒತ್ತಡವಿಲ್ಲದೆ ನಿರ್ಭೀತಿಯಿಂದ ಕರ್ತವ್ಯ ನಿರ್ವಹಿಸಲು ಅನುಕೂಲಕರ ವಾತಾವರಣ ನಿರ್ಮಿಸಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು.

ಪಿಡಿಒಗಳ ಹುದ್ದೆಗಳ ಉನ್ನತೀಕರಣ, ವೇತನ ಪರಿಷ್ಕರಣೆ, ಮುಂಬಡ್ತಿ, ಸೇವಾ ಭದ್ರತೆ ಹಾಗೂ ಅಗತ್ಯ ಆಡಳಿತಾತ್ಮಕ ಅಧಿಕಾರ ಸೇರಿದಂತೆ ವಿವಿಧ ನ್ಯಾಯಯುತ ಬೇಡಿಕೆಗಳನ್ನು ಸರ್ಕಾರದ ಗಮನಕ್ಕೆ ತರುವ ಉದ್ದೇಶದಿಂದ ಕಲಬುರಗಿಯಲ್ಲಿ ಬೃಹತ್ ಸಮಾವೇಶ ಆಯೋಜಿಸಲಾಗಿದೆ. ಈ ಸಮಾವೇಶದಲ್ಲಿ ರಾಜ್ಯದ ಸಚಿವರು, ಸಂಸದರು, ಹಾಲಿ ಮತ್ತು ಮಾಜಿ ಶಾಸಕರು ಸೇರಿದಂತೆ ವಿವಿಧ ಜನಪ್ರತಿನಿಧಿಗಳು ಭಾಗವಹಿಸುವ ನಿರೀಕ್ಷೆಯಿದೆ ಎಂದು ತಿಳಿಸಿದರು.

ರಾಜ್ಯದ ವಿವಿಧ ಜಿಲ್ಲೆಗಳಿಂದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಹೆಚ್ಚಿನ ಸಂಖ್ಯೆಯಲ್ಲಿ ಸಮಾವೇಶದಲ್ಲಿ ಪಾಲ್ಗೊಳ್ಳಲಿದ್ದಾರೆ. ಲಿಂಗಸುಗೂರು ತಾಲೂಕು ಸೇರಿದಂತೆ ಜಿಲ್ಲೆಯ ಎಲ್ಲ ಪಿಡಿಒಗಳು ಒಗ್ಗಟ್ಟಿನಿಂದ ಭಾಗವಹಿಸಿ ತಮ್ಮ ಬೇಡಿಕೆಗಳ ಈಡೇರಿಕೆಗೆ ಸರ್ಕಾರದ ಗಮನ ಸೆಳೆಯಬೇಕು. ಸಂಘಟಿತ ಹೋರಾಟದ ಮೂಲಕ ಸೇವಾ ಸೌಲಭ್ಯಗಳನ್ನು ಪಡೆಯಲು ಎಲ್ಲರೂ ಸಹಕರಿಸಬೇಕು ಎಂದು ವಿಶ್ವನಾಥ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಕರ್ನಾಟಕ ರಾಜ್ಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಸಂಘದ ತಾಲೂಕು ಅಧ್ಯಕ್ಷ ಪ್ರವೀಣಕುಮಾರ್ ಹಾಗೂ ತಿಮ್ಮಣ್ಣ ಭೋವಿ ಉಪಸ್ಥಿತರಿದ್ದರು.

ಅಮೃತ್-2 ಕಾಮಗಾರಿ ವಿಳಂಬ: ಗುತ್ತಿಗೆ ಸಂಸ್ಥೆಗೆ ನೋಟಿಸ್, ದಂಡ ವಿಧಿಸುವ ಎಚ್ಚರಿಕೆ



ಮಾನ್ವಿ: ಪಟ್ಟಣದಲ್ಲಿ ಅಮೃತ್-2 ಯೋಜನೆಯಡಿ ಕೈಗೊಳ್ಳಲಾಗಿರುವ ಕುಡಿಯುವ ನೀರು ಸರಬರಾಜು ಕಾಮಗಾರಿಯಲ್ಲಿ ವಿಳಂಬವಾಗುತ್ತಿರುವ ಹಿನ್ನೆಲೆಯಲ್ಲಿ ಗುತ್ತಿಗೆ ಪಡೆದ ನಳಂದ ಸಂಸ್ಥೆಗೆ ಕಾರಣ ಕೇಳಿ ನೋಟಿಸ್ ಜಾರಿಗೊಳಿಸಲಾಗಿದ್ದು, ಕಾಮಗಾರಿ ವಿಳಂಬಕ್ಕೆ ದಂಡ ವಿಧಿಸಲಾಗುವುದು ಎಂದು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ರಾಯಚೂರು ವಿಭಾಗದ ಸಹಾಯಕ ಅಭಿಯಂತರ ಧನ್ಯಶ್ರೀ ತಿಳಿಸಿದರು.

ಪಟ್ಟಣದ ವಿವಿಧೆಡೆ ನಡೆಯುತ್ತಿರುವ ಅಮೃತ್-2 ಯೋಜನೆಯ ಕಾಮಗಾರಿ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಬಳಿಕ ಅವರು ಮಾತನಾಡಿದರು.

ಅಮೃತ್-2 ಯೋಜನೆಯಡಿ ಪಟ್ಟಣದ ಜನರಿಗೆ ಸಮರ್ಪಕ ಕುಡಿಯುವ ನೀರು ಪೂರೈಸುವ ಉದ್ದೇಶದಿಂದ ಕೈಗೊಂಡಿರುವ ಕಾಮಗಾರಿಯನ್ನು ಮಾರ್ಚ್ ತಿಂಗಳೊಳಗೆ ಪೂರ್ಣಗೊಳಿಸುವ ಗುರಿ ನೀಡಲಾಗಿತ್ತು. ಆದರೆ ಗುತ್ತಿಗೆ ಪಡೆದ ನಳಂದ ಸಂಸ್ಥೆಯು ನಿಗದಿತ ಅವಧಿಯಲ್ಲಿ ಕಾಮಗಾರಿ ಪೂರ್ಣಗೊಳಿಸದ ಹಿನ್ನೆಲೆಯಲ್ಲಿ ವಿಳಂಬಕ್ಕೆ ಕಾರಣ ಕೇಳಿ ನೋಟಿಸ್ ನೀಡಲಾಗಿದೆ. ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸುವಂತೆ ಗುತ್ತಿಗೆ ಸಂಸ್ಥೆಗೆ ಸೂಚಿಸಲಾಗುವುದು ಎಂದು ಹೇಳಿದರು.

ಪಟ್ಟಣದ ಕೆಲವು ಪ್ರದೇಶಗಳಲ್ಲಿ ಖಾಸಗಿ ಜಾಗದಲ್ಲಿ ಪೈಪ್‌ಲೈನ್ ಅಳವಡಿಸಿರುವುದು ಪರಿಶೀಲನೆ ವೇಳೆ ಕಂಡುಬಂದಿದೆ. ಅಲ್ಲದೆ, ನಿಗದಿತ ರಸ್ತೆ ಮಾರ್ಗವನ್ನು ಅನುಸರಿಸದೆ ಪೈಪ್‌ಲೈನ್ ಅಳವಡಿಸಿರುವುದು ಹಾಗೂ ನಿಗದಿತ ಆಳದಲ್ಲಿ ಪೈಪ್‌ಗಳನ್ನು ಅಳವಡಿಸಿಲ್ಲ ಎಂಬ ದೂರುಗಳು ಸಾರ್ವಜನಿಕರಿಂದ ಬಂದಿವೆ. ಈ ಎಲ್ಲ ಅಂಶಗಳನ್ನು ಪರಿಶೀಲಿಸಿ ನಿಯಮಾನುಸಾರ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಅಮೃತ್-2 ಯೋಜನೆಯಡಿ ತುಂಗಭದ್ರಾ ನದಿಯಿಂದ ಹಾಗೂ ಜಲಜೀವನ್ ಮಿಷನ್ (ಜೆಜೆಎಂ) ಯೋಜನೆಯ ಮೂಲಕ ಕುಡಿಯುವ ನೀರು ಪೂರೈಸುವ ವ್ಯವಸ್ಥೆ ಕಲ್ಪಿಸಲಾಗುತ್ತಿದೆ. ಈಗಾಗಲೇ ಪಟ್ಟಣದ ಕೆಲವು ವಾರ್ಡ್‌ಗಳಲ್ಲಿ ಪ್ರಾಯೋಗಿಕವಾಗಿ ಮನೆಗಳಿಗೆ ನೀರಿನ ಸಂಪರ್ಕ ನೀಡಿ ಪರಿಶೀಲನೆ ನಡೆಸಲಾಗುತ್ತಿದೆ. ಮುಂದಿನ ದಿನಗಳಲ್ಲಿ ಪಟ್ಟಣದ ಎಲ್ಲ ಮನೆಗಳಿಗೆ ಕುಡಿಯುವ ನೀರಿನ ಸಂಪರ್ಕ ಒದಗಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ವಿವರಿಸಿದರು.

ಕುಡಿಯುವ ನೀರಿನ ಯೋಜನೆಯ ಕಾಮಗಾರಿಯಲ್ಲಿ ಗುಣಮಟ್ಟಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು. ಪೈಪ್‌ಲೈನ್ ಅಳವಡಿಕೆಯಲ್ಲಿ ತಾಂತ್ರಿಕ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕು. ಕಾಮಗಾರಿಯನ್ನು ಮತ್ತಷ್ಟು ವಿಳಂಬ ಮಾಡದೆ ನಿಗದಿತ ಅವಧಿಯೊಳಗೆ ಪೂರ್ಣಗೊಳಿಸುವಂತೆ ಸಂಬಂಧಪಟ್ಟ ಗುತ್ತಿಗೆ ಸಂಸ್ಥೆಗೆ ಸೂಚನೆ ನೀಡಲಾಗುವುದು ಎಂದು ಧನ್ಯಶ್ರೀ ಹೇಳಿದರು.

ಈ ಸಂದರ್ಭದಲ್ಲಿ ಮಾತನಾಡಿದ ಬಿಜೆಪಿ ಮಾಜಿ ಅಧ್ಯಕ್ಷ ಜಿ. ಸುಧಾರ್ಕ, ಪಟ್ಟಣದ ಜನರಿಗೆ ಸಮರ್ಪಕ ಕುಡಿಯುವ ನೀರು ಒದಗಿಸುವ ಉದ್ದೇಶದಿಂದ ಬಹುಕೋಟಿ ರೂಪಾಯಿ ವೆಚ್ಚದಲ್ಲಿ ಆರಂಭಿಸಲಾದ ಅಮೃತ್-2 ಯೋಜನೆಯ ಕಾಮಗಾರಿ ಎರಡು ವರ್ಷ ಕಳೆದರೂ ಪೂರ್ಣಗೊಂಡಿಲ್ಲ. ಇದರಿಂದ ಸಾರ್ವಜನಿಕರು ಕುಡಿಯುವ ನೀರಿನ ಸಮಸ್ಯೆ ಎದುರಿಸುವಂತಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಪಟ್ಟಣದ ವಿವಿಧ ವಾರ್ಡ್‌ಗಳಲ್ಲಿ ಪೈಪ್ ಲೈನ್ ಅಳವಡಿಸುವ ಸಂದರ್ಭದಲ್ಲಿ ರಸ್ತೆ ಬದಿಯನ್ನು ಅನುಸರಿಸದೆ ಹಾಗೂ ನಿಗದಿತ ಆಳದಲ್ಲಿ ಪೈಪ್‌ಗಳನ್ನು ಅಳವಡಿಸದೆ ಕಾಮಗಾರಿ ನಡೆಸಲಾಗುತ್ತಿದೆ ಎಂಬ ದೂರುಗಳಿವೆ. ಈ ರೀತಿಯ ಅವೈಜ್ಞಾನಿಕ ಕಾಮಗಾರಿಯಿಂದ ಮುಂದಿನ ದಿನಗಳಲ್ಲಿ ಪೈಪ್‌ಲೈನ್‌ಗಳಿಗೆ ಹಾನಿಯಾಗುವ ಸಾಧ್ಯತೆಯಿದೆ. ಇದರಿಂದ ಸಾರ್ವಜನಿಕರಿಗೆ ಮತ್ತಷ್ಟು ತೊಂದರೆಯಾಗಬಹುದು ಎಂದು ಆತಂಕ ವ್ಯಕ್ತಪಡಿಸಿದರು.

ಪುರಸಭೆ ಹಾಗೂ ನಗರ ಯೋಜನಾ ಪ್ರಾಧಿಕಾರದ ಅಧಿಕೃತ ನಕ್ಷೆಗಳಿಗೆ ಅನುಗುಣವಾಗಿ ರಸ್ತೆ ಬದಿಯಲ್ಲಿ ವೈಜ್ಞಾನಿಕ ರೀತಿಯಲ್ಲಿ ಪೈಪ್‌ಲೈನ್ ಅಳವಡಿಸಬೇಕು. ಕಾಮಗಾರಿಯ ಗುಣಮಟ್ಟವನ್ನು ಸಂಬಂಧಪಟ್ಟ ಅಧಿಕಾರಿಗಳು ಪರಿಶೀಲಿಸಿ, ಲೋಪದೋಷಗಳಿದ್ದಲ್ಲಿ ಸರಿಪಡಿಸಬೇಕು. ಬಹುಕೋಟಿ ರೂಪಾಯಿ ವೆಚ್ಚದ ಯೋಜನೆಯ ಪ್ರಯೋಜನ ಸಾರ್ವಜನಿಕರಿಗೆ ಶೀಘ್ರವಾಗಿ ದೊರೆಯುವಂತೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಕಾಮಗಾರಿ ವಿಳಂಬದಿಂದ ಸಾರ್ವಜನಿಕರಿಗೆ ಉಂಟಾಗುತ್ತಿರುವ ತೊಂದರೆಯನ್ನು ಗಂಭೀರವಾಗಿ ಪರಿಗಣಿಸಿ, ಉಳಿದ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು. ಪಟ್ಟಣದ ಪ್ರತಿಯೊಂದು ಮನೆಗೂ ಸಮರ್ಪಕ ಕುಡಿಯುವ ನೀರಿನ ಸಂಪರ್ಕ ಕಲ್ಪಿಸುವ ಮೂಲಕ ಯೋಜನೆಯ ಉದ್ದೇಶ ಈಡೇರಿಸಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ತೃತೀಯ ಪಕ್ಷದ ಪರಿಶೀಲನಾ ಸಂಸ್ಥೆ ಹಾಗೂ ಗುತ್ತಿಗೆದಾರರ ಪ್ರತಿನಿಧಿ ಶ್ರೀನಿವಾಸ, ಬಿಜೆಪಿ ಮುಖಂಡರಾದ ವಕೀಲ ವಿಶ್ವನಾಥ ರಾಯಪ್ಪ, ಯುವ ಮೋರ್ಚಾ ಅಧ್ಯಕ್ಷ ರವಿಕುಮಾರ ಸಾಹುಕಾರ್, ಜಗದೀಶ ಒತ್ತೂರು, ಉಮಾಪತಿನಾಯಕ, ಬಸವಪ್ರಭು ಪಾಟೀಲ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಮಾಜಿ ಸಂಸದ ಬಿ.ವಿ. ನಾಯಕ ಜನ್ಮದಿನ: ಮಾನ್ವಿಯಲ್ಲಿ ಅಭಿಮಾನಿಗಳಿಂದ ಸಿಹಿ ವಿತರಣೆ



ಮಾನ್ವಿ: ಮಾಜಿ ಸಂಸದ ಹಾಗೂ ಬಿಜೆಪಿ ಮುಖಂಡ ಬಿ.ವಿ. ನಾಯಕ ಅವರ ಜನ್ಮದಿನದ ಅಂಗವಾಗಿ ಭಾರತೀಯ ಜನತಾ ಪಕ್ಷದ ಮಾನ್ವಿ ಮಂಡಲದ ವತಿಯಿಂದ ಪಟ್ಟಣದ ವಾಲ್ಮೀಕಿ ವೃತ್ತದಲ್ಲಿ ಸಾರ್ವಜನಿಕರಿಗೆ ಸಿಹಿ ವಿತರಿಸುವ ಮೂಲಕ ಜನ್ಮದಿನವನ್ನು ಆಚರಿಸಲಾಯಿತು.

ಬಿಜೆಪಿ ಮಾನ್ವಿ ಮಂಡಲದ ಅಧ್ಯಕ್ಷ ವೀರಭದ್ರಗೌಡ ಭೋಗವತಿ ಅವರ ನೇತೃತ್ವದಲ್ಲಿ ನಡೆದ ಕಾರ್ಯಕ್ರಮದಲ್ಲಿ ಪಕ್ಷದ ಮುಖಂಡರು, ಕಾರ್ಯಕರ್ತರು ಹಾಗೂ ಬಿ.ವಿ. ನಾಯಕ ಅವರ ಅಭಿಮಾನಿಗಳು ಭಾಗವಹಿಸಿ ಜನ್ಮದಿನದ ಶುಭಾಶಯಗಳನ್ನು ಕೋರಿದರು.

ಈ ಸಂದರ್ಭದಲ್ಲಿ ವಾಲ್ಮೀಕಿ ವೃತ್ತದಲ್ಲಿ ಸಾರ್ವಜನಿಕರಿಗೆ ಸಿಹಿ ಹಂಚಿದ ಕಾರ್ಯಕರ್ತರು, ಮಾಜಿ ಸಂಸದ ಬಿ.ವಿ. ನಾಯಕ ಅವರಿಗೆ ಶುಭ ಹಾರೈಸಿದರು. ಪಕ್ಷದ ಪದಾಧಿಕಾರಿಗಳು ಹಾಗೂ ಅಭಿಮಾನಿಗಳು ಒಗ್ಗೂಡಿ ಸರಳವಾಗಿ ಜನ್ಮದಿನ ಆಚರಿಸಿದರು.

ಕಾರ್ಯಕ್ರಮದಲ್ಲಿ ಬಿಜೆಪಿ ಮುಖಂಡರಾದ ತಿಮ್ಮರೆಡ್ಡಿ ಭೋಗವತಿ, ಮಲ್ಲಿಕಾರ್ಜುನ ಜಕ್ಕಲದಿನ್ನಿ, ದೊರೆಬಾಬು, ಕೆ. ನಾಗಕಲಿಂಗಸ್ವಾಮಿ, ಹನುಮೇಶನಾಯಕ ಸಾದಪುರ, ಮಲ್ಲಿಕಾರ್ಜುನಗೌಡ ಸಂಗಪುರ, ನರಸಿಂಹನಾಯಕ, ವೀರೇಶನಾಯಕ ಬೆಟ್ಟದೂರು, ರವಿಕುಮಾರ ಅಲ್ದಾಳ್, ವಕೀಲ ವೀರನಗೌಡ, ನಾಗರಾಜ ಜಲ್ಲಿ, ಶರಣಪ್ಪಗೌಡ, ಸುರೇಶಗೌಡ, ಶರಣಬಸವನಾಯಕ, ಜಯಪ್ಪನಾಯಕ, ಶಿವಲಿಂಗಯ್ಯಸ್ವಾಮಿ, ಶಿವಕುಮಾರಸ್ವಾಮಿ, ಮಂಜುನಾಥ ನಾಯಕ, ಅಯ್ಯಪ್ಪ ನಾಯಕ ಮ್ಯಾಕಲ್, ಅಮರೇಶನಾಯಕ ಜಾನೇಕಲ್, ದುರುಗಪ್ಪ ತಡಕಲ್, ಜಗದೀಶ ಒತ್ತೂರು, ಶರಣಯ್ಯಸ್ವಾಮಿ, ಜಯರಾಜ್, ರಾಹುಲ್, ಗುರುಗೌಡ ಕಣ್ಣೂರು, ವಿಜಯ ಸುಂಕೇಶ್ವರ, ನವೀನ್ ಕುಮಾರ, ಭೀಮಣ್ಣ ಹರವಿ, ಕುಮಾರಸ್ವಾಮಿ, ಚಂದ್ರುನಾಯಕ ಸೇರಿದಂತೆ ಪಕ್ಷದ ಕಾರ್ಯಕರ್ತರು ಹಾಗೂ ಅಭಿಮಾನಿಗಳು ಉಪಸ್ಥಿತರಿದ್ದರು.

ನ. 16 ರಿಂದ 24ರವರೆಗೆ ಎಲ್ಲಾ ಅಂಚೆ ಕಚೇರಿಗಳಲ್ಲಿ ಪಿಎಲ್ಐ-ಆರ್ ಪಿಎಲ್ಐ ಸೇವೆಗಳಲ್ಲಿ ತಾತ್ಕಾಲಿಕ ವ್ಯತ್ಯಯ

ರಾಯಚೂರು ನವೆಂಬರ್ 13 (ಕರ್ನಾಟಕ ವಾರ್ತೆ): ಅಂಚೆ ಜೀವ ವಿಮೆ (ಪಿಎಲ್ಐ) ಮತ್ತು ಗ್ರಾಮೀಣ ಅಂಚೆ ಜೀವ ವಿಮೆ (ಆರ್‌ಪಿಎಲ್ಐ) ಪಾಲಿಸಿದಾರರಿಗೆ ಇನ್ನಷ್ಟು ಉತ್ತಮ ವೇಗವಾದ ಹಾಗೂ ಪರಿಣಾಮಕಾರಿ ಸೇವೆ ಒದಗಿಸುವ ಉದ್ದೇಶದಿಂದ ಅಂಚೆ ಇಲಾಖೆಯು ಪ್ರಸ್ತುತ ಬಳಕೆಯಲ್ಲಿರುವ ಮ್ಯಾಕ್ಕ್ಯಾಮಿಷ್ ತಂತ್ರಾಂಶದ ಬದಲಾಗಿ ನೂತನ ವಿಮಾ ನಿರ್ವಹಣಾ ವ್ಯವಸ್ಥೆ (ಐಎಮ್‌ಎಸ್) ತಂತ್ರಾಂಶವನ್ನು ಅಳವಡಿಸಿಕೊಳ್ಳುತ್ತಿದ್ದು, ನವೆಂಬರ್ 16 ರಿಂದ 24ರವರೆಗೆ ರಾಯಚೂರು ಅಂಚೆ ವಿಭಾಗದ ವ್ಯಾಪ್ತಿಯ ಎಲ್ಲಾ ಅಂಚೆ ಕಚೇರಿಗಳಲ್ಲಿ ಪಿಎಲ್ಐ ಮತ್ತು ಆರ್‌ಪಿಎಲ್ ಐಗೆ ಸಂಬಧಿಸಿದ ಸೇವೆಗಳು ತಾತ್ಕಾಲಿಕವಾಗಿ ಲಭ್ಯವಿರುವುದಿಲ್ಲ.

ಈ ನೂತನ ತಂತ್ರಾಂಶವು ನವೆಂಬರ್ 25 ರಿಂದ ಜಾರಿಗೆ ಬರಲಿದೆ. ಈ ಅವಧಿಯಲ್ಲಿ ಪಾಲಿಸಿ ಪ್ರೀಮಿಯಂ ಸಂಗ್ರಹಣೆ, ಸಾಲದ ಮೇಲಿನ ಬಡ್ಡಿ ಪಾವತಿ, ಸಾಲ ಮರುಪಾವತಿ ಹಾಗೂ ಪಾಲಿಸಿದಾರರಿಗೆ ಸಂಬಧಿಸಿದ ಇತರೆ ಸೇವೆಗಳಲ್ಲಿ ವ್ಯತ್ಯಯ ಉಂಟಾಗಲಿದೆ. ಆದ್ದರಿಂದ ಗ್ರಾಹಕರು ಸಹಕರಿಸುವಂತೆ ಅಂಚೆ ಇಲಾಖೆ ಮನವಿ ಮಾಡಿದೆ.

ನೂತನ ತಂತ್ರಾಂಶದ ಅಳವಡಿಕೆಯ ನಂತರ ಪಾಲಿಸಿದಾರರಿಗೆ ಇನ್ನಷ್ಟು ಸುಧಾರಿತ ಹಾಗೂ ಉತ್ತಮ ಸೇವೆಗಳನ್ನು ಒದಗಿಸಲು ಅನುಕೂಲವಾಗಲಿದೆ ಎಂದು ರಾಯಚೂರು ಅಂಚೆ ವಿಭಾಗದ ಅಂಚೆ ಅಧೀಕ್ಷಕರಾದ ಶಿವಾನಂದ ಆರ್.ಹಿರಾಪುರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K